22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 285 | ನವದೆಹಲಿ | ಬೆಲೆ ₹ 10 | ಏಪ್ರಿಲ್ 21, 2025, ಸೋಮವಾರ

## ಒಳಪುಟಗಳಲ್ಲಿ

ಎಲ್ಲಾ ಪೌರ ಕಾರ್ಮಿಕರ ಸೇವೆ ಕಾಯಂಗೊಳಿಸುವ ಕಾರ್ಯ ನಡೆಯುತ್ತಿದೆ: ಮುಖ್ಯಮಂತ್ರಿ ಸಿದ್ದರಾಮಯ್ಯ- ಪು.2

ಜಾತಿ ಗಣತಿ ವರದಿಯನ್ನು ಬಿಜೆಪಿ ಸರ್ಕಾರವೇ ಮಾಡಬಹುದಾಗಿತ್ತು: ಲಕ್ಷ್ಮೀ ಹೆಬ್ಬಾಳ್ಕರ್ ಸ್ಪಷ್ಟನೆ -ಪು. 5

# ಬಿಹಾರಕ್ಕೆ 1.25 ಲಕ್ಷ ಕೋಟಿ ರೂ. ಪ್ಯಾಕೇಜ್: ಪ್ರಧಾನಿ ಮೋದಿ ಭರವಸೆಗೆ ಖರ್ಗೆ ಟೀಕೆ

**ಬಕ್ಸರ್, ಏ.20 :** ಬಿಹಾರಕ್ಕೆ 1.25 ಲಕ್ಷ ಕೋಟಿ ರೂ.ಗಳ ಆರ್ಥಿಕ ಪ್ಯಾಕೇಜ್ ನೀಡುವ ಪ್ರಧಾನಿ ನರೇಂದ್ರ ಮೋದಿ ಅವರ ಭರವಸೆಯನ್ನು ಪ್ರಶ್ನಿಸಿರುವ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಇದನ್ನು ಕಣ್ಣೋಟ ಎಂದು ಬಣ್ಣಿಸಿದ್ದು, ಮೋದಿ ಮತ್ತು ಅವರ "ಸ್ನೇಹಿತ" ರಾಜ್ಯದ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರು ಇದನ್ನು ಹಂಚಿಕೊಂಡಂತೆ ಕಾಣುತ್ತಿದೆ ಎಂದು ಆರೋಪಿಸಿದ್ದಾರೆ.

ಬಕ್ಸರ್‌ನ ದಲ್ಸಾಗರ್ ಕ್ರೀಡಾಂಗಣದಲ್ಲಿ ಶನಿವಾರ ಕಾಂಗ್ರೆಸ್ ಆಯೋಜಿಸಿದ್ದ 'ಜೈ ಬಾಪು, ಜೈ ಭೀಮ್, ಜೈ ಸಂವಿಧಾನ್' ರ್ಯಾಲಿಯನ್ನುದ್ದೇಶಿಸಿ ಮಾತನಾಡಿದ ಖರ್ಗೆ, ಆಗಸ್ಟ್ 18, 2015 ರಂದು ಚುನಾವಣಾ ಪ್ರಚಾರದ ಸಮಯದಲ್ಲಿ ಮೋದಿ ಭರವಸೆ ನೀಡಿದ ಪ್ಯಾಕೇಜ್‌ಗೆ ಏನಾಯಿತು ಎಂದು ಕೇಳಿದರು. ಮೋದಿ "ಸುಳ್ಳಿನ ಕಾರ್ಖಾನೆ" ನಡೆಸುತ್ತಿದ್ದಾರೆ ಎಂದು ಆರೋಪಿಸಿದ ಅವರು, ಬಿಹಾರದ ಜನರು ಮೋದಿಯ ಭರವಸೆಗಳ ಬಗ್ಗೆ ನಿತೀಶ್ ಕುಮಾರ್ ಅವರನ್ನು ಕೇಳಬೇಕೆಂದು ಸೂಚಿಸಿದರು.

ಸಂಸತ್ತಿನಲ್ಲಿ ಪ್ರಧಾನಿ ಮೋದಿಯ 11 ಸುಳ್ಳುಗಳನ್ನು ತಾವು ಈಗಾಗಲೇ ಬಹಿರಂಗಪಡಿಸಿರುವುದಾಗಿ ಖರ್ಗೆ ಹೇಳಿದರು ಮತ್ತು ಈಗ ಅವರು ಜನರಿಗೆ 12 ಸುಳ್ಳುಗಳನ್ನು ಎಣಿಸುವುದಾಗಿ ಹೇಳಿದರು. 100 ದಿನಗಳಲ್ಲಿ ಕಪ್ಪುಹಣ ವಾಪಸ್ ತರುವ ಬಗ್ಗೆ ಮೋದಿ ಮಾತನಾಡಿದ್ದರು, ಭಾರತದ ಪ್ರತಿಯೊಬ್ಬ ನಾಗರಿಕನ ಖಾತೆಗೆ 15 ಲಕ್ಷ ರೂ. ಬರುತ್ತದೆ ಮತ್ತು ಪ್ರತಿ ವರ್ಷ 2 ಕೋಟಿ ಉದ್ಯೋಗಗಳನ್ನು ಖಾತರಿಪಡಿಸಿದ್ದರು ಎಂದು ಕಾಂಗ್ರೆಸ್ ನಾಯಕ ಹೇಳಿದರು. ಈಗ 11 ವರ್ಷಗಳು ಕಳೆದಿವೆ, ಮತ್ತು ಇದರ ಪ್ರಕಾರ, 22 ಕೋಟಿ ಉದ್ಯೋಗಗಳು ಸೃಷ್ಟಿಯಾಗಬೇಕಿತ್ತು, ಆದರೆ ವಾಸ್ತವವೆಂದರೆ ಬಿಹಾರದ 2 ಕೋಟಿ ಜನರು ಉದ್ಯೋಗಕ್ಕಾಗಿ ಹೊರಗೆ ಹೋಗುತ್ತಾರೆ ಎಂದು ಖರ್ಗೆ ಹೇಳಿದರು. ಪೆಟ್ರೋಲ್, ಡೀಸೆಲ್ ಮತ್ತು ಎಲ್ಪಿಜಿಯನ್ನು ಅಗ್ಗಗೊಳಿಸಲಾಗುವುದು, ಗಂಗಾವನ್ನು ಸ್ವಚ್ಛಗೊಳಿಸಲಾಗುವುದು, ರೈತರ ಆದಾಯವನ್ನು ದ್ವಿಗುಣಗೊಳಿಸಲಾಗುವುದು, 2022 ರ ವೇಳೆಗೆ ಪ್ರತಿಯೊಬ್ಬ ಬಡವರಿಗೂ ಮನೆ ಸಿಗುತ್ತದೆ, ಕನಿಷ್ಠ ಬೆಂಬಲ ಬೆಲೆಯನ್ನು ಖಾತರಿಪಡಿಸಲಾಗುವುದು ಮತ್ತು ಚಪ್ಪಲಿ ಧರಿಸಿದವರಿಗೆ ವಿಮಾನ ಪ್ರಯಾಣದ ಕನಸನ್ನು ತೋರಿಸಲಾಗಿದೆ ಆದರೆ ವಿಮಾನ ದರಗಳು ಗಗನಕ್ಕೇರಿವೆ ಎಂದು ಕಾಂಗ್ರೆಸ್ ಅಧ್ಯಕ್ಷರು ಹೇಳಿದರು. ಬಿಹಾರದಲ್ಲಿ 40 ಪ್ರತಿಶತ ಸಕ್ಕರೆ ಉತ್ಪಾದಿಸಲಾಗುತ್ತಿತ್ತು, ಆದರೆ ಈಗ ಅದು 4 ಪ್ರತಿಶತಕ್ಕೆ ಇಳಿದಿದೆ ಎಂದು ಅವರು ಹೇಳಿದರು. ರಾಜ್ಯದ ಕಾರ್ಖಾನೆಗಳು ಮುಚ್ಚಲ್ಪಟ್ಟಿವೆ.

ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರನ್ನು ಟೀಕಿಸಿದ ಖರ್ಗೆ, ಬಿಜೆಪಿ ಮತ್ತು ಕುಮಾರ್ ನಡುವಿನ ಮೈತ್ರಿಯನ್ನು ಅವಕಾಶವಾದಿ ಸಂಘ ಎಂದು ಕರೆದರು. ನಿತೀಶ್ ಕುಮಾರ್ ಅಧಿಕಾರಕ್ಕಾಗಿ (ಮುಖ್ಯಮಂತ್ರಿ ಹುದ್ದೆ) ಪಕ್ಷ ಬದಲಾಯಿಸುತ್ತಿದ್ದಾರೆ ಎಂದು ಅವರು ಆರೋಪಿಸಿದರು, ಕುಮಾರ್ ಅವರ ಜೆಡಿಯು ಮಹಾತ್ಮ ಗಾಂಧಿಯನ್ನು ಕೊಂದ ಸಿದ್ಧಾಂತದೊಂದಿಗೆ ಕೈಜೋಡಿಸಿದೆ ಎಂದು ಹೇಳಿದರು. ಕುಮಾರ್ ಅವರ ಇಂತಹ ನಿಲುವು ಅವರ ಸಿದ್ಧಾಂತಗಳನ್ನು ಹಳಿಗೆ ತಳ್ಳಿತು. ಬಿಹಾರದಲ್ಲಿ ಮುಂದಿನ ರಾಜ್ಯ ಚುನಾವಣೆಯಲ್ಲಿ ಮಹಾ ಮೈತ್ರಿಕೂಟಕ್ಕೆ (ಜಿಎ) ಮತ ಹಾಕುವಂತೆ ಜನರಿಗೆ ಮನವಿ ಮಾಡಿದ ಖರ್ಗೆ, ಕುಮಾರ್ ತಮ್ಮ ಅನುಕೂಲಕ್ಕೆ ತಕ್ಕಂತೆ ಪಕ್ಷ ಬದಲಾಯಿಸುವ ಮೂಲಕ ತಮ್ಮ ರಾಜಕೀಯ ವಿಶ್ವಾಸಾರ್ಹತೆಯನ್ನು ಕಳೆದುಕೊಂಡಿದ್ದಾರೆ ಎಂದು ಆರೋಪಿಸಿದರು.



## ಕೆನಡಾದ ಗುರುದ್ವಾರದ ಗೋಡೆಯಲ್ಲಿ ಭಾರತ ವಿರೋಧಿ ಬರಹ

ಒಟ್ಟಾವ: ಕೆನಡಾದ ವ್ಯಾಂಕೋವರ್‌ನಲ್ಲಿರುವ ಪ್ರಸಿದ್ಧ ಗುರುದ್ವಾರದ ಗೋಡೆಯಲ್ಲಿ ಖಾಲಿಸ್ತಾನ್ ಪರ ಮತ್ತು ಭಾರತ ವಿರೋಧಿ ಗೀಚುಬರಹ ಬರೆದು ಅಪವಿತ್ರಗೊಳಿಸಿದ ಘಟನೆ ವರದಿಯಾಗಿದ್ದು ಇದು ಖಾಲಿಸ್ತಾನ್ ಪ್ರತ್ಯೇಕತಾವಾದಿಗಳ ಕೃತ್ಯ ಎಂದು ಗುರುದ್ವಾರದ ಆಡಳಿತ ಮಂಡಳಿ ಖಂಡಿಸಿದೆ. ಖಾಲ್ಸ ದಿವಾನ್ ಸೊಸೈಟಿ (ಕೆಡಿಎಸ್) ಗುರುದ್ವಾರ ಅಥವಾ ರೋಸ್ ಸ್ಟ್ರೀಟ್ ಗುರುದ್ವಾರ ಎಂದು ಜನಪ್ರಿಯಗೊಂಡಿರುವ ವ್ಯಾಂಕೋವರ್‌ನ ಗುರುದ್ವಾರದಲ್ಲಿ ಶನಿವಾರ ಬೆಳಿಗ್ಗೆ ಈ ಘಟನೆ ನಡೆದಿದೆ. ಶನಿವಾರ ಬೆಳಿಗ್ಗೆ 3 ಗಂಟೆ ವೇಳೆಗೆ ಟ್ರಕ್‌ನಲ್ಲಿ ಆಗಮಿಸಿದ ಗುರುತಿಸಲಾಗದ ವ್ಯಕ್ತಿಗಳು ಗುರುದ್ವಾರದ ಗೇಟ್ ಹಾಗೂ ಹೊರಗಿನ ಗೋಡೆಯಲ್ಲಿ ಭಾರತ ವಿರೋಧಿ ಗೀಚುಬರಹದ ಜೊತೆ ಖಾಲಿಸ್ತಾನ್ ಜಿಂದಾಬಾದ್ ಎಂಬ ಘೋಷಣೆಯನ್ನೂ ಬರೆದಿದ್ದಾರೆ. 'ಖಾಲಿಸ್ತಾನ್ ಪ್ರತಿಪಾದಕರಾದ ಸಿಖ್ ಪ್ರತ್ಯೇಕತಾವಾದಿಗಳ ಸಣ್ಣ ಗುಂಪೊಂದು ಈ ಕೃತ್ಯ ಎಸಗಿದ್ದು ಇದು ಕೆನಡಾದ ಸಿಖ್ ಸಮುದಾಯದಲ್ಲಿ ಭಯ ಮತ್ತು ವಿಭಜನೆಯನ್ನು ಹುಟ್ಟು ಹಾಕಲು ಪ್ರಯತ್ನಿಸುವ ಉಗ್ರಗಾಮಿ ಗುಂಪು ನಡೆಸುತ್ತಿರುವ ಅಭಿಯಾನದ ಒಂದು ಭಾಗವಾಗಿದೆ. ಈ ಬಗ್ಗೆ ಕೆನಡಾ ಪೊಲೀಸರಿಗೆ ದೂರು ನೀಡಲಾಗಿದೆ' ಎಂದು ಗುರುದ್ವಾರ ಆಡಳಿತ ಮಂಡಳಿ ಹೇಳಿದೆ.

# ಜಾತಿ ಜನಗಣತಿ ವಿಷಯ: ಆತುರದ ನಿರ್ಧಾರವಿಲ್ಲ–ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟನೆ

**ಬೆಂಗಳೂರು, ಏ, 20;** ಜಾತಿಗಣತಿ ವಿಚಾರದಲ್ಲಿ ಏಕಾಏಕಿ ಆತುರದ ತೀರ್ಮಾನ ಕೈಗೊಳ್ಳುವುದಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟಪಡಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಲ್ಲಾ ಜಾತಿ ಸಮುದಾಯಗಳಿಗೂ ನ್ಯಾಯ ಒದಗಿಸುತ್ತೇವೆ. ಈಗಷ್ಟೇ ವರದಿಯನ್ನು ತೆಗೆದು ನೋಡುತ್ತಿದ್ದೇವೆ. ಇನ್ನೂ ಬೇಕಾದಷ್ಟು ಸಮಯವಿದೆ. ತಾಳೆಯಿಂದ ಇರಬೇಕು ಎಂದರು. ಜಾತಿಗಣತಿ ಬಗ್ಗೆ ಚರ್ಚೆ ಮಾಡುತ್ತಿದ್ದೇವೆ. ಶೇ.90ರಷ್ಟು ಜನರ ಮಾಹಿತಿಯನ್ನು ಸಂಗ್ರಹಿಸಲಾಗಿದೆ. ಶೇ.10ರಷ್ಟು ಜನರ ಮಾಹಿತಿ ಕಲೆ ಹಾಕಿಲ್ಲ. ಕೆಲವರು ಸಲಹೆಗಳನ್ನು ಕೊಡುತ್ತಿದ್ದಾರೆ. ಮನೆಯಲ್ಲಿ ಇಲ್ಲದವರು ಮಾಹಿತಿಯನ್ನು ಕೊಟ್ಟಿಲ್ಲ. ಸಚಿವ ಸಂಪುಟದಲ್ಲಿ ಚರ್ಚೆಯಾಗಿ ಸಚಿವರುಗಳು ಕೂಡ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯನ್ನು ಪರಿಶೀಲನೆ ಮಾಡುತ್ತಿದ್ದಾರೆ ಎಂದು ಹೇಳಿದರು.

ಎಲ್ಲಾ ಜಾತಿ, ಸಮುದಾಯಗಳಲ್ಲೂ ಬಡವರಿದ್ದಾರೆ. ಅವರಿಗೆ ಅನುಕೂಲವಾಗಬೇಕು. ತುಳಿತಕ್ಕೆ ಒಳಗಾದ ಸಮುದಾಯಗಳಿಗೆ ಶಕ್ತಿ ಕೊಡಬೇಕು. ಒಟ್ಟಾರೆ ಎಲ್ಲರಿಗೂ ನ್ಯಾಯ ಕೊಡಬೇಕಿದೆ ಎಂದು ಹೇಳಿದರು. ಎಲ್ಲರನ್ನೂ ಸರಿಸಮಾನವಾಗಿ ತೆಗೆದುಕೊಂಡು ಹೋಗುವ ಮೂಲಧರ್ಮ, ಸಿದ್ಧಾಂತ ಕಾಂಗ್ರೆಸ್‌ನಲ್ಲಿದೆ. ಜಾತಿಗಣತಿಗೆ ಸಂಬಂಧಿಸಿದಂತೆ ಕಾಂಗ್ರೆಸ್ ರಾಷ್ಟ್ರೀಯ ನಾಯಕ ರಾಹುಲ್‌ಗಾಂಧಿ ಬರೆದಿರುವ ಪತ್ರವನ್ನು ನಾನು ನೋಡಿಲ್ಲ ಎಂದು ಸ್ಪಷ್ಟಪಡಿಸಿದರು.

ಕರಾವಳಿ ಹಿಂದುತ್ವದ ಭದ್ರ ಕೋಟೆ ಎಂದು ಯಾರು ಹೇಳಿದ್ದಾರೆ, ಎಲ್ಲಾ ಧರ್ಮಕ್ಕೂ ಇದೊಂದು ಭದ್ರಕೋಟೆ. ಈ ಭಾಗದಲ್ಲಿ ನೀರು, ದೇವಾಲಯ, ದರ್ಗಾ, ಸಮುದ್ರ, ವಾತಾವರಣ, ಪರಿಸರ, ಶೈಕ್ಷಣಿಕ, ಧಾರ್ಮಿಕ ಸಂಸ್ಥೆಗಳು, ಬ್ಯಾಂಕ್‌ಗಳು ಎಲ್ಲವೂ ಇವೆ. ಇವುಗಳಲ್ಲಿ ಯಾವುದೇ ಜಾತಿ ಇದೆಯೇ? ಎಂದು ಪ್ರಶ್ನಿಸಿದರು. ಕೆಲವರು ಮಾತ್ರ ಬರೀ ಹಿಂದೂ ಎಂದು ಹೇಳುತ್ತಾರೆ. ಎಲ್ಲಾ ಜನಾಂಗವೂ ಒಂದೇ ಎಂಬುದು ನಮ ನಿಲುವು. ಎಲ್ಲಾ ವರ್ಗದವರನ್ನೂ ರಕ್ಷಣೆ ಮಾಡುತ್ತೇವೆ. ರಾಜ್ಯವೆಂದರೆ ಕರಾವಳಿ, ಮಲೆನಾಡು, ಹಳೆ ಮೈಸೂರು, ಉತ್ತರ ಕರ್ನಾಟಕ, ಮಧ್ಯ ಕರ್ನಾಟಕ, ಕಲ್ಯಾಣ ಕರ್ನಾಟಕ ಎಲ್ಲವನ್ನೂ ಸೇರಿಸಿಕೊಂಡಿದೆ ಎಂದು ವ್ಯಾಖ್ಯಾನಿಸಿದರು. ಕರಾವಳಿಯಲ್ಲಿ ಭಾವನೆಗಿಂತ ಜನರ ಬದುಕು ಮುಖ್ಯ. ಭಾವನೆಗಿಂತ ಬದುಕಿನ ಮೇಲೆ ರಾಜಕಾರಣ ಮಾಡಬೇಕು. ಈ ಭಾಗದಲ್ಲಿ ಇಬ್ಬರು ಶಾಸಕರು ಗೆದ್ದಿದ್ದಾರೆ. ಈ ಭಾಗದಲ್ಲಿ ಪಕ್ಷದ ಬಲವರ್ಧನೆಯಾಗಬೇಕು, ಜನರಿಗೆ ಒಳ್ಳೆಯದಾಗಬೇಕು. ಬಲಿಷ್ಠವಾದ ಸರ್ಕಾರವಿದೆ. ಮುಂದೆಯೂ ನಮದೇ ಸರ್ಕಾರ ಬರಲಿದೆ ಎಂದು ಅವರು ಹೇಳಿದರು. ಜನರು ಬಿಜೆಪಿಯನ್ನು ಮತ ಹಾಕಿ ಹೆಚ್ಚು ಗೆಲ್ಲಿಸಿದ್ದಾರೆ. ಕಾಂಗ್ರೆಸ್‌ನಿಂದ ಪ್ರತಿಕುಟುಂಬಕ್ಕೂ ಸಹಾಯವಾಗುತ್ತಿದೆ.



ಬಿಜೆಪಿಯಿಂದ ಏನಾಗುತ್ತಿದೆ ಎಂದು ಡಿ.ಕೆ.ಶಿವಕುಮಾರ್ ಪ್ರಶ್ನಿಸಿದರು.



## ನಿತ್ಯ ಪಂಚಾಂಗ 21.04.2025 ಸೋಮವಾರ



**ಶ್ರೀ ಕ್ರೋಧಿ ನಾಮ ಸಂವತ್ಸರ, ಉತ್ತರಾಯಣ ಶಿಶಿರ/ವಸಂತ ಋತು ಚಾಂದ್ರಮಾನ, ಫಾಲ್ಗುಣ ಬಹುಳ**

**ಸಪ್ತಮಿ, ಜ್ಯೇಷ್ಠ ನಕ್ಷತ್ರ, ಕೊಲ್ಲೂರು ಜಾತ್ರೆ, ಕೆಲವಡಿ ಜಾತ್ರೆ, ಹುಲಿಕೊಪ್ಪ ಬನ್ನಮಹಾಂಕಾಳಿ ರಥ, ಕಡಕೊಳ ಮಾಡಿವಾಳೇಶ್ವರ ಜಾತ್ರೆ**

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಶಾಸಕ ಮುನಿರತ್ನ ಪ್ರಾಸಿಕ್ಯೂಷನ್‌ಗೆ ಅನುಮತಿ

**ಬೆಂಗಳೂರು,ಏ,20;** ರಾಜರಾಜೇಶ್ವರಿ ನಗರ ವಿಧಾನಸಭಾ ಕ್ಷೇತ್ರದ ಶಾಸಕ ಮುನಿರತ್ನ ಅವರ ಮೇಲೆ ಚಾರ್ಜ್‌ಶೀಟ್ ಆಗಿರುವ ಪ್ರಕರಣವೊಂದರಲ್ಲಿ ಪ್ರಾಸಿಕ್ಯೂಷನ್‌ಗೆ ವಿಧಾನಸಭೆ ಸ್ಪೀಕರ್ ಯು.ಟಿ.ಖಾದರ್ ಅನುಮತಿ ನೀಡಿದ್ದಾರೆ. ಹನಿಟ್ರ್ಯಾಪ್ ನಡೆಸಲು ಎಚ್‌ಐವಿ ಸೋಂಕಿತ ಮಹಿಳೆಯರನ್ನು ಬಳಸಿಕೊಂಡಿದ್ದು, ದಲಿತರ ಮೇಲೆ ಜಾತಿನಿಂದನೆ ಒಳಗೊಂಡಂತೆ ಬಹಳ ಗಂಭೀರ ಆರೋಪಗಳನ್ನು ಶಾಸಕ ಮುನಿರತ್ನ ಎದುರಿಸುತ್ತಿದ್ದಾರೆ. ಅವರ ಮೇಲೆ ಎಫ್‌ಐಆರ್ ಕೂಡಾ ದಾಖಲಾಗಿದೆ. ಈ ಪ್ರಕರಣದಲ್ಲಿ ಪರಪ್ಪನ ಅಗ್ರಹಾರ ಜೈಲಿನಲ್ಲಿಯೂ ಇದ್ದರು. ಆ ನಂತರ ಜಾಮೀನು ಪಡೆದು ಹೊರಬಂದು ಕಳೆದ ಬಜೆಟ್ ಅಧಿವೇಶನದಲ್ಲೂ ಭಾಗಿಯಾಗಿದ್ದರು. ಬಜೆಟ್ ಅಧಿವೇಶನದಲ್ಲಿ ಸಚಿವ ಕೆ.ಎನ್.ರಾಜಣ್ಣ ಹನಿಟ್ರ್ಯಾಪ್ ನಡೆಯುತ್ತಿದೆ ಎಂದು ಹೇಳಿದ್ದು, ಆಗ ದೊಡ್ಡ ಚರ್ಚೆಯ ವಿಷಯವಾಗಿತ್ತು. ಬಿಜೆಪಿ ಶಾಸಕರು ದೊಡ್ಡ ಮಟ್ಟದ ಪ್ರತಿಭಟನೆಯನ್ನೂ ಮಾಡಿದ್ದರು. ಈ ವೇಳೆ ಹನಿಟ್ರ್ಯಾಪ್ ಹಾಗೂ ಜಾತಿನಿಂದನೆ ಆರೋಪ ಹೊತ್ತಿದ್ದ ಮುನಿರತ್ನ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದು ಟೀಕೆಗೆ ಗುರಿಯಾಗಿತ್ತು.


ಇದೀಗ ಜಾತಿನಿಂದನೆ ಕೇಸ್ ಶಾಸಕ ಮುನಿರತ್ನಗೆ ಸಂಕಷ್ಟ ತಂದೊಡ್ಡಿದೆ. ಪ್ರಾಸಿಕ್ಯೂಷನ್ಗೆ ಒಳಪಡಿಸಲು ಸ್ಪೀಕರ್ ಯು. ಟಿ.ಖಾದರ್ ಅನುಮತಿ ಕೊಟ್ಟಿದ್ದಾರೆ. ಈ ಸಂಬಂಧ ಒಳಾಡಳಿತ ಇಲಾಖೆ ಆದೇಶ ಹೊರಡಿಸಿದೆ. ಜಾತಿನಿಂದನೆ ಆರೋಪ ಸಂಬಂಧ ವೈಯಾಲಿಕಾವಲ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಪ್ರಕರಣದ ತನಿಖೆಯನ್ನು ಸಿಐಡಿಯ ಎಸ್‌ಐಟಿಗೆ ವಹಿಸಲಾಗಿತ್ತು. ತನಿಖೆ ನಡೆಸಿದ್ದ ಎಸ್‌ಐಟಿ ಕೋರ್ಟ್‌ಗೆ ಚಾರ್ಜ್‌ಶೀಟ್ ಸಲ್ಲಿಸಿತ್ತು. ಮುನಿರತ್ನ ಶಾಸಕರಾಗಿರುವ ಕಾರಣ ಪ್ರಾಸಿಕ್ಯೂಷನ್‌ಗೆ ಅನುಮತಿ ಕೋರಿ ಸ್ಪೀಕರ್ ಮೊರೆಹೋಗಿತ್ತು. ಇದೀಗ ಸ್ಪೀಕರ್ ಯು.ಟಿ.ಖಾದರ್ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದಾರೆ. ಇದರಿಂದ ಕೋರ್ಟ್ ವಿಚಾರಣೆ ನಡೆಸಲು ಅನುಕೂಲ ಆಗಲಿದೆ.

# ಎಲ್ಲಾ ಪೌರ ಕಾರ್ಮಿಕರ ಸೇವೆ ಕಾಯಂಗೊಳಿಸುವ ಕಾರ್ಯ ನಡೆಯುತ್ತಿದೆ: ಮುಖ್ಯಮಂತ್ರಿ ಸಿದ್ದರಾಮಯ್ಯ

**ಬೆಳಗಾವಿ,ಏ.20:** ಎಲ್ಲಾ ಪೌರ ಕಾರ್ಮಿಕರ ಸೇವೆಯನ್ನು ಕಾಯಂಗೊಳಿಸುವ ಕಾರ್ಯ ನಡೆಯುತ್ತಿದೆ ಎಂದು ಸಿ.ಎಂ ಸಿದ್ದರಾಮಯ್ಯ ಅವರು ನುಡಿದರು.

ಸ್ಮಾರ್ಟ್ ಸಿಟಿ ಅನುದಾನದ ಅಡಿಯಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಬೆಳಗಾವಿಯ ಟಿಳಕವಾಡಿಯಲ್ಲಿ ಆಧುನಿಕ ಸೌಲಭ್ಯಗಳುಳ್ಳ ಬಹುಮಹಡಿ ಕಲಾ ಮಂದಿರವನ್ನು ಲೋಕಾರ್ಪಣೆಗೊಳಿಸಿದ ಬಳಿಕ ಮಾತನಾಡಿದರು.

ಈಗಾಗಲೇ ಗುತ್ತಿಗೆ ನೌಕರರನ್ನು ಕನಿಷ್ಠ ವೇತನ ಅಡಿಯಲ್ಲಿ ತರಲಾಗಿದೆ. ದನ್ನು ಮಾಡಿದ್ದು ನಮ್ಮ ಸರ್ಕಾರವೇ, ಈಗ ಕಾಯಂ ಮಾಡುವುದೂ ಕೂಡ ನಮ್ಮ ಸರ್ಕಾರವೇ ಎಂದು ತಿಳಿಸಿದರು. ಬೆಳಗಾವಿಯಲ್ಲಿ ಸ್ಮಾರ್ಟ್‌ಸಿಟಿ ಯೋಜನೆ ಅಡಿಯಲ್ಲಿ 150 ಕಾರ್ಯಕ್ರಮಗಳನ್ನು ಕೈಗೆತ್ತಿಕೊಂಡು ಇದರಲ್ಲಿ 102 ಪೂರ್ಣಗೊಂಡಿವೆ. ಉಳಿದವು ಸದ್ಯದಲ್ಲೇ ಪೂರ್ಣಗೊಳ್ಳಲಿವೆ ಎಂದರು.




ಸ್ಮಾರ್ಟ್‌ಸಿಟಿ ಯೋಜನೆಯಲ್ಲಿ 6928 ಕೋಟಿ ಮೊತ್ತದ ಕೆಲಸಗಳು ನಡೆಯುತ್ತಿವೆ ಎಂದರು. ಬೆಳಗಾವಿಯ ಸಮಗ್ರ ಅಭಿವೃದ್ಧಿಗೆ ನಮ್ಮ ಸರ್ಕಾರ ನಿರಂತರವಾಗಿ ಯೋಜನೆ, ಕಾರ್ಯಕ್ರಮಗಳನ್ನು ರೂಪಿಸಿ ಜಾರಿಗೆ ತರುತ್ತಿದೆ ಎಂದರು.

### ಸಮೀಕ್ಷೆ ಓದಿ ಅಭಿಪ್ರಾಯ ತಿಳಿಸುವಂತೆ ಸೂಚನೆ

ಸಚಿವ ಸಂಪುಟ ಸಭೆಯಲ್ಲಿ ಯಾರೂ ಈ ಬಗ್ಗೆ ವಿರೋಧ ವ್ಯಕ್ತಪಡಿಸಿ ಯಾರೂ ಜೋರಾಗಿ ಮಾತನಾಡಿಲ್ಲ. ಸಮೀಕ್ಷೆಯನ್ನು ಓದಿಕೊಂಡು ಅಭಿಪ್ರಾಯಗಳನ್ನು ತಿಳಿಸುವಂತೆ ಸೂಚಿಸಲಾಗಿದ್ದು ಸಚಿವರು ಅಭಿಪ್ರಾಯ ತಿಳಿಸಿದ ನಂತರ ಪುನಃ ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ಮಾಡಿ ಅಂತಿಮ ತೀರ್ಮಾನಕ್ಕೆ ಬರಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು. ಬೆಳಗಾವಿ ಸಾಂಭ್ರಾ ವಿಮಾನ ನಿಲ್ದಾಣದಲ್ಲಿ ಮಾಧ್ಯಮದವರ ಜತೆ ಭಾನುವಾರ ಮಾತನಾಡಿದರು. ಮುಸಲ್ಮಾನರಿಗೆ, ಹಿಂದುಳಿದವರಿಗೆ ಮಾತ್ರವಲ್ಲದೆ, ಎಲ್ಲಾ ಧರ್ಮದ, ಎಲ್ಲಾ ಜಾತಿಯ ಬಡವರಿಗೆ ಶಿಕ್ಷಣ ಸಿಗಬೇಕು ,ಸಾಮಾಜಿಕ ಆರ್ಥಿಕ ಶಕ್ತಿ ತುಂಬಬೇಕು. ಇದೇ ನಮ್ಮ ಗುರಿ ಎಂದು ಮುಖ್ಯಮಂತ್ರಿ ನುಡಿದರು.ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆಯ ಮೂಲ ಪ್ರತಿ ಮುಖ್ಯಮಂತ್ರಿಗಳ ಬಳಿಯಿದೆ ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಮಾಡಿರುವ ಆರೋಪಕ್ಕೆ ಪ್ರತಿಕ್ರಿಯೆ ನೀಡಿ ಆಶೋಕ್ ಅವರು ಯಾವತ್ತಾದರೂ ಸತ್ಯವನ್ನು ಹೇಳಿದ್ದಾರೆಯೇ? ಅವರು ಸುಳ್ಳೇ ಹೇಳುವುದು.

ಮೂಲ ಪ್ರತಿ ನನ್ನ ಬಳಿಯಿರಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದ ಮುಖ್ಯಮಂತ್ರಿಗಳು ರಾಹುಲ್ ಗಾಂಧಿಯವರಿಗೆ ನಾವು ಪತ್ರ ಬರೆದಿಲ್ಲ ಆದರೆ ಅವರೊಂದಿಗೆ ಚರ್ಚೆ ಮಾಡಿ ಸಚಿವ ಸಂಪುಟ ಸಭೆಯಲ್ಲಿ ಸಮೀಕ್ಷೆಯ ವರದಿಯನ್ನು ಮಂಡಿಸಿದ್ದೇವೆ ಎಂದರು.

ಯಾವ ಜಾತಿಗೂ ಅನ್ಯಾಯವಾಗಬಾರದು ಎನ್ನುವುದು ಸರ್ಕಾರದ ಉದ್ದೇಶ. ಇದು ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆ. ಸಂವಿಧಾನ ಜಾರಿಯಾಗಿ 75 ವರ್ಷಗಳಾಗಿದ್ದರೂ ಬಡವ ಬಡವನಾಗಿಯೇ ಉಳಿಯಬೇಕೆ ಸಮಾನತೆ ಬೇಡವೇ, ಜಾತಿಗೆ ಅಂಟಿಕೊಂಡೇ ಇರಬೇಕೆ ಎಂದು ಮುಖ್ಯಮಂತ್ರಿಗಳು ಪ್ರಶ್ನಿಸಿದರು.

# ದಲಿತರಿಗೆ ಮುಖ್ಯಮಂತ್ರಿ ಪಟ್ಟ: ಸಚಿವ ಮುನಿಯಪ್ಪ ಹೇಳಿಕೆಗೆ ರಾಜಣ್ಣ ಬೆಂಬಲ

**ಚಿಕ್ಕಮಗಳೂರು,ಏ.20:** "ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಯಾರು ಯಾವ ಅಧಿಕಾರಕ್ಕೆ ಆಸೆಪಟ್ಟರೂ ತಪ್ಪಿಲ್ಲ. ಕೇಳಲು ಎಲ್ಲರಿಗೂ ಅರ್ಹತೆ ಇದೆ" ಎಂದು ಸಿಎಂ ಸ್ಥಾನಕ್ಕೆ ದಲಿತರಿಗೆ ಅವಕಾಶ ನೀಡಬೇಕು ಎಂಬ ಸಚಿವ ಕೆ.ಎಚ್.ಮುನಿಯಪ್ಪ ಹೇಳಿಕೆಗೆ ಸಚಿವ ಕೆ.ಎನ್.ರಾಜಣ್ಣ ದನಿಗೂಡಿಸಿದರು. ಕೆ.ಎನ್. ರಾಜಣ್ಣ , ಮುನಿಯಪ್ಪ ಯಾರನ್ನೇ ಸಿಎಂ ಮಾಡ್ಬೇಕು ಅಂದ್ರೂ ಅಂತಿಮವಾಗಿ ಹೈಕಮಾಂಡ್ ತೀರ್ಮಾನ ಮಾಡುತ್ತೆ ಎಂದು ತಿಳಿಸಿದರು." ಅಂತಿಮ ನಿರ್ಣಯವನ್ನು ಕಾಂಗ್ರೆಸ್ ಪಕ್ಷದ ಹೈಕಮಾಂಡ್ ತೆಗೆದುಕೊಳ್ಳುತ್ತದೆ. ಯಾರೆಲ್ಲ ಸಿಎಂ ಆಗಬೇಕು ಎನ್ನುತ್ತಾರೋ ಅವರಿಗೆಲ್ಲ ಧ್ವನಿಗೂಡಿಸುತ್ತೇನೆ" ಎಂದು ಹೇಳಿದರು. ಜಾತಿಗಣತಿ ಅನುಷ್ಠಾನಕ್ಕೆ ತರುವುದು ಹಾಗೂ ಆಯೋಗದ ಶಿಫಾರಸುಗಳನ್ನು ಅಂಗೀಕರಿಸುವ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ಅಪೂರ್ಣವಾಗಿದೆ. ಚರ್ಚೆ ಸಂಪೂರ್ಣವಾದ ನಂತರ ನಿರ್ಣಯವನ್ನು ತೆಗೆದುಕೊಳ್ಳುತ್ತೇವೆ" ಎಂದು ಹೇಳಿದರು. "ದಲಿತ ಮುಖ್ಯಮಂತ್ರಿಯ ಬೇಡಿಕೆ ಮೊದಲಿನಿಂದಲೂ ಇದೆ. ಯಾವ ಸಮಯದಲ್ಲಿ ಏನು ಮಾಡಬೇಕು ಎಂದು ಪಕ್ಷದ ಹೈಕಮಾಂಡ್ ನಿರ್ಧರಿಸಲಿದೆ. ಸ್ವಾತಂತ್ರ್ಯ ನಂತರ ರಾಜ್ಯದಲ್ಲಿ ಪರಿಶಿಷ್ಟರಿಗೆ ಸಿಎಂ ಸ್ಥಾನ ಸಿಕ್ಕಿಲ್ಲ ಎಂದು ನಮ್ಮ ಸಮಾಜದ ಸ್ವಾಮೀಜಿಗಳು ಹೇಳಿದ್ದಾರೆ. ಈ ಚರ್ಚೆ, ಬೇಡಿಕೆ ಹೊಸದಲ್ಲ. ಬಲಗೈ, ಎಡಗೈ ಎಂಬ ಭೇದವಿಲ್ಲ. ಎಲ್ಲರೂ ಸಹೋದರರೇ. ಧರ್ಮಸಿಂಗ್ ನಂತರ ಮಲ್ಲಿಕಾರ್ಜುನ ಖರ್ಗೆ ಸಿಎಂ ಆಗಬೇಕು ಎಂದು ನಾನೇ ಹೇಳಿದ್ದೆ. 2013ರ ಚುನಾವಣೆಯಲ್ಲಿ ಸೋಲು ಕಂಡಿದ್ದರಿಂದ ಅಂದು ಕೆಪಿಸಿಸಿ ಅಧ್ಯಕ್ಷರಾಗಿದ್ದ ಜಿ.ಪರಮೇಶ್ವರ ಅವರಿಗೆ ಅವಕಾಶ ತಪ್ಪಿತ್ತು. ಸಾಮಾಜಿಕ ನ್ಯಾಯದ ಪ್ರಕಾರ ದಲಿತರಿಗೂ ಅವಕಾಶ ಸಿಗಬೇಕು. ಅಂತಹ ಸಮಯ ಬಂದಾಗ ಪಕ್ಷದ ನಾಯಕರು ನಿರ್ಧಾರ ಮಾಡುತ್ತಾರೆ" ಎಂದು ಸಚಿವ ಕೆ.ಎಚ್.ಮುನಿಯಪ್ಪ ಹೇಳಿದ್ದರು.



ಬೆಳಗಾವಿಯಲ್ಲಿ ಬಹುಮಹಡಿ ಸ್ಮಾರ್ಟ್‌ಸಿಟಿ ಸಂಕೀರ್ಣವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಭಾನುವಾರ ಉದ್ಘಾಟಿಸಿದರು.

# ಕೇಂದ್ರ ಬಜೆಟ್‌ನಲ್ಲಿಯೂ ರೈಲು ಯೋಜನೆಗೆ ಅನುದಾನ

**ಕೊಪ್ಪಳ, ಏ.20:** ಉತ್ತರ ಕರ್ನಾಟಕ ಭಾಗದ ಜನರಿಗೆ ಪ್ರಮುಖವಾದ ಮಾಹಿತಿಯೊಂದಿದೆ. 257 ಕಿ.ಮೀ. ಉದ್ದದ ಗದಗ–ವಾಡಿ ರೈಲು ಮಾರ್ಗದ ಭಾಗವಾಗಿ ಹುಬ್ಬಳ್ಳಿ–ಕುಷ್ಟಗಿ ನಡುವೆ ರೈಲು ಸಂಚಾರ ನಡೆಯಲಿದೆ.

ಕೇಂದ್ರ ಸರ್ಕಾರ 2025–26ನೇ ಸಾಲಿನ ಕೇಂದ್ರ ಬಜೆಟ್‌ನಲ್ಲಿಯೂ ಈ ರೈಲು ಯೋಜನೆಗೆ 549.45 ಕೋಟಿ ಅನುದಾನ ನೀಡಿದೆ. ದಶಕಗಳ ಬೇಡಿಕೆ ಈಗ ಈಡೇರಿದ್ದು, ಕೆಲವು ದಿನಗಳ ಹಿಂದೆ ರೈಲಿನ ಪ್ರಾಯೋಗಿಕ ಸಂಚಾರವು ಪೂರ್ಣಗೊಂಡಿದೆ.ಕೊಪ್ಪಳ ನಗರದ ಪ್ರವಾಸಿ ಮಂದಿರದಲ್ಲಿ ಹುಬ್ಬಳ್ಳಿ–ಕುಷ್ಟಗಿ ರೈಲು ಆರಂಭದ ಕುರಿತು ಯಲಬುರ್ಗಾ ಕ್ಷೇತ್ರದ ಶಾಸಕ ಮತ್ತು ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ ಮಾತನಾಡಿದ್ದರು. "ನಮ್ಮ ಕಲ್ಯಾಣ ಕರ್ನಾಟಕ ಭಾಗದ ಗದಗ–ವಾಡಿ ಮತ್ತು ಮುನಿರಾಬಾದ್–ಮಹೆಬೂಬನಗರ ರೈಲ್ವೆ ಮಾರ್ಗ ಯೋಜನೆಯಗಳು ಮುಂಬರುವ ಮೂರು ವರ್ಷಗಳಲ್ಲಿ ಪೂರ್ಣಗೊಳ್ಳಲಿವೆ" ಎಂದು ಹೇಳಿದ್ದರು."ಗದಗ–ವಾಡಿ ರೈಲು ಮಾರ್ಗ ಯೋಜನೆಯಲ್ಲಿ ತಳಕಲ್ಲಿಂದ ಕುಕನೂರು, ಯಲಬುರ್ಗಾ, ಕುಷ್ಟಗಿ ತನಕ ಸುಮಾರು 58 ಕಿ. ಮೀ. ವರೆಗೆ ಕಾಮಗಾರಿಯು ಪೂರ್ಣಗೊಂಡಿದೆ. ವಾಡಿಯಿಂದ ಶಹಪುರ ತನಕ 48 ಕಿ. ಮೀ. ರೈಲು ಮಾರ್ಗ ನಿರ್ಮಾಣ 3 ರಿಂದ 6 ತಿಂಗಳಲ್ಲಿ ಮುಕ್ತಾಯವಾಗಲಿದ್ದು, ಇದರಿಂದ ಒಟ್ಟು 106 ಕಿ. ಮೀ. ವರೆಗೆ ಕಾಮಗಾರಿ ಪೂರ್ಣಗೊಳ್ಳಲಿದೆ" ಎಂದು ಬಸವರಾಜ ರಾಯರಡ್ಡಿ ಮಾಹಿತಿ ನೀಡಿದ್ದರು. ಗದಗ–ವಾಡಿ ರೈಲ್ವೆ ಮಾರ್ಗದ ಪೂರ್ಣಗೊಂಡಿರುವ 58 ಕಿ. ಮೀ. ರೈಲು ಮಾರ್ಗದಲ್ಲಿ ಹುಬ್ಬಳ್ಳಿ–ಕುಷ್ಟಗಿ ನಡುವೆ ರೈಲು ಸೇವೆ ಆರಂಭಿಸಬೇಕೆಂದು ರಾಜ್ಯ ಸರ್ಕಾರ ಕೇಂದ್ರ ರೈಲ್ವೆ ಖಾತೆ ಸಚಿವ ಅಶ್ವಿನಿ ವೈಷ್ಣವ್, ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣಗೆ ಪತ್ರವನ್ನು ಬರೆದಿತ್ತು. ಈಗ ದಿನಾಂಕ ಸಹ ನಿಗದಿಯಾಗಿದ್ದು, ಜನರ ಬೇಡಿಕೆಯಂತೆ ಹುಬ್ಬಳ್ಳಿ–ಕುಷ್ಟಗಿ ನಡುವೆ ರೈಲು ಸಂಚಾರವನ್ನು ನಡೆಸಲಿದೆ.: ಸದ್ಯದ ಮಾಹಿತಿ ಪ್ರಕಾರ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಹುಬ್ಬಳ್ಳಿ–ಕುಷ್ಟಗಿ ನಡುವೆ ರೈಲು ಸಂಚಾರ ಆರಂಭಕ್ಕೆ ಒಪ್ಪಿಗೆ ನೀಡಿದ್ದಾರೆ. ಮೇ 10 ರಿಂದ ಹುಬ್ಬಳ್ಳಿ–ಕುಷ್ಟಗಿ ನಡುವೆ ಡೆಮು ರೈಲು ಸಂಚಾರವನ್ನು ನಡೆಸಲಿದೆ. ರೈಲಿನ ವೇಳಾಪಟ್ಟಿ, ದರದ ಮಾಹಿತಿಯನ್ನು ರೈಲ್ವೆ ಇಲಾಖೆ ಇನ್ನಷ್ಟೇ ಬಿಡುಗಡೆ ಮಾಡಬೇಕಿದೆ. ಗದಗ–ವಾಡಿ ರೈಲುಮಾರ್ಗದ ಭಾಗವಾಗಿ ಕುಷ್ಟಗಿ ತನಕ ಕಾಮಗಾರಿ ಪೂರ್ಣಗೊಂಡಿದೆ. ಮಾರ್ಚ್ ತಿಂಗಳ ಅಂತ್ಯದಲ್ಲಿ ರೈಲ್ವೆ ಇಲಾಖೆ ಅಧಿಕಾರಿಗಳು, ರೈಲ್ವೆ ಸುರಕ್ಷತಾ ಆಯುಕ್ತರು ಈ ಮಾರ್ಗದಲ್ಲಿ ವೇಗ ಮತ್ತು ವಿವಿಧ ಪರೀಕ್ಷೆಗಳನ್ನು ನಡೆಸಿದ್ದರು. ಪ್ರಾಯೋಗಿಕ ಪರೀಕ್ಷೆ ಯಶಸ್ವಿಯಾಗಿತ್ತು ಮತ್ತು ರೈಲು ಓಡಿಸಲು ಒಪ್ಪಿಗೆಯೂ ಸಿಕ್ಕಿತ್ತು.ಕುಷ್ಟಗಿ ರೈಲು ನಿಲ್ದಾಣದ ನಿರ್ಮಾಣ ಕಾರ್ಯವೂ ಅಂತಿಮಗೊಂಡಿದೆ. ರೈಲ್ವೆ ಇಲಾಖೆ ಇಂಜಿನಿಯರ್, ಅಧಿಕಾರಿಗಳು ಗಂಟೆಗೆ 130 ಕಿ. ಮೀ. ವೇಗದಲ್ಲಿ ಹುಬ್ಬಳ್ಳಿ–ಕುಷ್ಟಗಿ ನಡುವೆ ರೈಲು ಓಡಿಸಿ ವೇಗದ ಪರೀಕ್ಷೆ, ಅತಿಭಾರದ ಪರೀಕ್ಷೆಯನ್ನು ನಡೆಸಿದ್ದರು. ಕುಷ್ಟಗಿ ನಿಲ್ದಾಣಕ್ಕೆ ರೈಲು ಆಗಮಿಸುತ್ತಿದ್ದಂತೆಯೇ ಜನರು ಸಂಭ್ರಮಿಸಿದ್ದರು, ಅಧಿಕಾರಿಗಳನ್ನು ಆತ್ಮೀಯವಾಗಿ ಬರಮಾಡಿಕೊಂಡಿದ್ದರು. ಗದಗ–ವಾಡಿ ಉತ್ತರ ಕರ್ನಾಟಕ ಭಾಗದ ಪ್ರಮುಖ ರೈಲ್ವೇ ಯೋಜನೆಯಾಗಿದೆ. ಈ ರೈಲುಮಾರ್ಗದ ವೆಚ್ಚ 1922 ಕೋಟಿ ರೂ. ಗಳು. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಶೇ 50ರಷ್ಟು ವೆಚ್ಚ ಹಂಚಿಕೆ ಆಧಾರದ ಮೇಲೆ ಯೋಜನೆಯನ್ನು ನಿರ್ಮಾಣ ಮಾಡುತ್ತಿವೆ. ಕೆಲವು ದಿನಗಳ ಹಿಂದೆ ಕರ್ನಾಟಕದ ಮೂಲಸೌಕರ್ಯ ಅಭಿವೃದ್ಧಿ ಖಾತೆ ಸಚಿವ ಎಂ. ಬಿ. ಪಾಟೀಲ ಗದಗ– ವಾಡಿ ನಡುವಿನ 257 ಕಿ. ಮೀ. ರೈಲುಮಾರ್ಗವನ್ನು 2026ರ ಮಾರ್ಚ್‌ನಲ್ಲಿ ಪೂರ್ಣಗೊಳಿಸಲಾಗುತ್ತದೆ ಎಂದು ಹೇಳಿದ್ದರು. ಈ ಮಾರ್ಗದಲ್ಲಿ ಗದಗ–ತಳಕಲ್ ಹಳಿ ಇತ್ತು. ತಳಕಲ್–ಕುಷ್ಟಗಿ ನಡುವಿನ 57 ಕಿ. ಮೀ. ರೈಲುಮಾರ್ಗದ ಕಾಮಗಾರಿ ಹನುಮಾಪುರ ತನಕ ಮುಗಿದಿತ್ತು. ಈಗ ಕುಷ್ಟಗಿ ತನಕ ಕಾಮಗಾರಿಯನ್ನು ಮುಗಿಸಿ, ಪ್ರಾಯೋಗಿಕ ಸಂಚಾರವನ್ನು ಯಶಸ್ವಿಯಾಗಿದೆ.

# ವಿದ್ಯಾರ್ಥಿ ಸುಚಿವ್ರತ್‌ಗೆ ಉಚಿತ ಪ್ರವೇಶದ ಭರವಸೆ

ಬೀದರ್: ಜನಿವಾರ ತೆಗೆಯದ ಕಾರಣಕ್ಕೆ ಕೆಸಿಇಟಿ ಗಣಿತ ಪರೀಕ್ಷೆ ಬರೆಯಲು ಸಾಧ್ಯವಾಗದ ವಿದ್ಯಾರ್ಥಿ ಸುಚಿವ್ರತ್‌ಗೆ ಭಾಲ್ಕಿಯ ಭೀಮಣ್ಣ ಖಂಡ್ರೆ ತಾಂತ್ರಿಕ ವಿದ್ಯಾಲಯದಲ್ಲಿ ಉಚಿತ ಪ್ರವೇಶ ನೀಡುವುದಾಗಿ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ ಖಂಡ್ರೆ ಭರವಸೆ ನೀಡಿದ್ದಾರೆ.

ಭಾನುವಾರ ಸಚಿವ ರಹೀಂಖಾನ್ ಅವರ ಜೊತೆಯಲ್ಲಿ ಸುಚಿವ್ರತ್ ಕುಲಕರ್ಣಿ ಮನೆಗೆ ಭೇಟಿ ನೀಡಿ ವಿದ್ಯಾರ್ಥಿ ಹಾಗೂ ಕುಟುಂಬದ ಸದಸ್ಯರಿಗೆ ಆತ್ಮಸ್ಥೈರ್ಯವನ್ನು ಸಚಿವರು ತುಂಬಿದರು. ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಖಾಸಗಿ ಕಾಲೇಜಿನ ಸಿಬ್ಬಂದಿಯಿಂದ ಇಂತಹ ಲೋಪವಾಗಿದ್ದು, ಇದು ನೋವಿನ ಸಂಗತಿ. ಇನ್ನು ಮುಂದೆ ಇಂತಹ ಘಟನೆ ಮರುಕಳಿಸದಂತೆ ಎಚ್ಚರ ವಹಿಸಲು ಸೂಚಿಸಲಾಗಿದೆ. ಈ ಘಟನೆ ನಡೆಯಬಾರದಾಗಿತ್ತು. ಈ ಬಗ್ಗೆ ತಮ್ಮ ಗಮನಕ್ಕೆ ಬಂದ ಕೂಡಲೇ ತನಿಖೆ ನಡೆಸಿ 24 ಗಂಟೆಯೊಳಗೆ ವರದಿ ನೀಡುವಂತೆ ಜಿಲ್ಲಾಧಿಕಾರಿಗಳಿಗೆ ಸೂಚಿಸಿದ್ದೆ. ವರದಿ ಆಧಾರದ ಮೇಲೆ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮವೂ ಆಗಿದೆ ಎಂದರು.

ವಿದ್ಯಾರ್ಥಿಯ ಶೈಕ್ಷಣಿಕ ಭವಿಷ್ಯಕ್ಕೆ ತೊಂದರೆ ಆಗಬಾರದು ಎಂಬುದು ಎಲ್ಲರ ಭಾವನೆ, ಹೀಗಾಗಿ ಭಾಲ್ಕಿಯ ತಮ್ಮ ಎಂಜಿನಿಯರಿಂಗ್ ಕಾಲೇಜಿನಲ್ಲಿ ಉಚಿತ ಸೀಟ್ ನೀಡುವುದಾಗಿ ಭರವಸೆ ನೀಡಿದರು. ಸುಚಿವ್ರತ್ ಗೆ ಪ್ರತ್ಯೇಕವಾಗಿ ಪರೀಕ್ಷೆ ನಡೆಸಲು ಅವಕಾಶವಿದೆಯೇ ಎಂಬ ಸಾಧ್ಯತೆಗಳ ಬಗ್ಗೆ ಪರಿಶೀಲಿಸಲಾಗುತ್ತಿದೆ. ಈ ಬಗ್ಗೆ ಉನ್ನತ ಶಿಕ್ಷಣ ಸಚಿವರೊಂದಿಗೆ ಮಾತನಾಡಿರುವುದಾಗಿ ತಿಳಿಸಿದ ಈಶ್ವರ್ ಖಂಡ್ರೆ ವಿದ್ಯಾರ್ಥಿಗೆ ಕಾಮೆಡ್ ಕೆ ಪರೀಕ್ಷೆ ಬರೆಯಲೂ ವಿದ್ಯಾರ್ಥಿಗೆ ಅವಕಾಶವಿದೆ ಎಂದು ಹೇಳಿದರು.ಆ ಸೀಟು ಲಭಿಸಿದರೂ ನೆರವು ನೀಡಲಾಗುವುದು, ಸರ್ಕಾರ ನೊಂದ ವಿದ್ಯಾರ್ಥಿ ಮತ್ತು ಕುಟಂಬದ ಸದಸ್ಯರೊಂದಿಗಿದೆ ಸಚಿವ ಖಂಡ್ರೆ ಅಭಯ ನೀಡಿದರು.ಇತ್ತೀಚಿಗೆ ಮನ್ನಳ್ಳಿ ರಸ್ತೆಯ ಸಾಯಿಸ್ಫೂರ್ತಿ ಕಾಲೇಜಿನಲ್ಲಿ ಕೆಸಿಇಟಿ ಪರೀಕ್ಷೆ ಬರೆಯಲು ಹೋದ ಸ್ಥಳೀಯ ವಿದ್ಯಾರ್ಥಿ ಜನಿವಾರ ಹಾಕಿದ್ದಕ್ಕಾಗಿ ಪರೀಕ್ಷೆ ಬರೆಯಲು ಅವಕಾಶ ನೀಡದೆ ವಾಪಸ್ ಕಳಿಸಿರುವುದು ಅಮಾನವೀಯ ಸಂಗತಿಯಾಗಿದೆ. ಸಾಮಾಜಿಕ ಸಮಾನತೆಯ ಸಂದೇಶ ಸಾರಿದ ಮಹಾತ್ಮ ಬಸವೇಶ್ವರರ ಕರ್ಮಭೂಮಿಯಲ್ಲಿ ಈ ಘಟನೆ ನಡೆದಿದ್ದು ಇಡೀ ನಾಗರಿಕ ಸಮಾಜವೇ ತಲೆತಗ್ಗಿಸುವಂತೆ ಮಾಡಿದೆ. ಬ್ರಾಹ್ಮಣ ಸಮಾಜ ಈ ಅಮಾನವೀಯ ಘಟನೆಯನ್ನು ತೀವ್ರವಾಗಿ ಖಂಡಿಸುತ್ತದೆ" ಸಮುದಾಯದಿಂದ ಶನಿವಾರ ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದ್ದರು.ಜನಿವಾರ ತೆಗೆಯದಿದ್ದಕ್ಕೆ ಸಿಇಟಿ ಪರೀಕ್ಷೆಗೆ ಅವಕಾಶ ನೀಡಿಲ್ಲವೆಂದು ಆರೋಪಿಸಿ ಮತ್ತು ಕ್ರಮ ಕೈಗೊಳ್ಳಬೇಕು ಹಾಗೂ ವಿದ್ಯಾರ್ಥಿಗೆ ನ್ಯಾಯ ಕೊಡಿಸಬೇಕು ಎಂದು ಆಗ್ರಹಿಸಿ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಜಿಲ್ಲಾ ಘಟಕ ನಗರದಲ್ಲಿ ಪ್ರತಿಭಟನೆ ನಡೆಸಿತ್ತು. ನಗರದ ಡಾ. ಅಂಬೇಡ್ಕರ್ ವೃತ್ತದಿಂದ ಡಿಸಿ ಕಚೇರಿವರೆಗೆ ರ್‍ಯಾಲಿ ನಡೆದಿತ್ತು.ಜನಿವಾರ ಬ್ರಾಹ್ಮಣ ಸಮಾಜಕ್ಕೆ ಅತ್ಯಂತ ಪವಿತ್ರವಾಗಿದೆ. ಸಿಇಟಿ ಪರೀಕ್ಷೆ ಬರೆಯಲು ಬಂದ ವಿದ್ಯಾರ್ಥಿ ಜೊತೆಗೆ ಜನಿವಾರ ವಿಷಯದಲ್ಲಿ ಕಿರಿಕಿರಿ ತೆಗೆದಿದ್ದು ಸರಿಯಲ್ಲ. ಕೆಇಎ ಪರೀಕ್ಷಾ ನಿಯಮದಲ್ಲಿ ಜನಿವಾರ ತೆಗೆಯಬೇಕು ಎಂಬ ನಿಯಮ ಇಲ್ಲದಿದ್ದರೂ ಇಲ್ಲಿನ ಸಿಬ್ಬಂದಿ ಜನಿವಾರ ತೆಗೆಯುವಂತೆ ಹೇಳಿದ್ದಾರೆ. ಮಾತ್ರವಲ್ಲದೆ, ತೆಗೆಯದಿದ್ದಕ್ಕೆ ವಿದ್ಯಾರ್ಥಿಗೆ ಗಣಿತ ಪರೀಕ್ಷೆಯಿಂದ ವಂಚಿತಗೊಳಿಸಿರುವುದು ಅಕ್ಷಮ್ಯ ಅಪರಾಧವಾಗಿದೆ" ಎಂದು ಬ್ರಾಹ್ಮಣ ಸಭಾದ ಪ್ರಮುಖರು ಹೇಳಿದ್ದರು.

**ಜನಿವಾರ ತೆಗೆಯದ ಕಾರಣಕ್ಕೆ ಕೆಸಿಇಟಿ ಗಣಿತ ಪರೀಕ್ಷೆ ಬರೆಯಲು ಸಾಧ್ಯವಾಗದ ವಿದ್ಯಾರ್ಥಿ ಸುಚಿವ್ರತ್ ಕುಲಕರ್ಣಿಗೆ ಭಾಲ್ಕಿಯ ಭೀಮಣ್ಣ ಖಂಡ್ರೆ ತಾಂತ್ರಿಕ ವಿದ್ಯಾಲಯ (ಬಿಕೆಐಟಿ)ದಲ್ಲಿ ಉಚಿತ ಪ್ರವೇಶ ನೀಡುವುದಾಗಿ ಘೋಷಿಸಿರುವ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ ಖಂಡ್ರೆ ಅವರ ಔದಾರ್ಯಕ್ಕೆ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಅಭಿನಂದನೆ ಸಲ್ಲಿಸಿದೆ.**

# ಭಾರತ್ ಗ್ಲೋಬಲ್ ಕಲ್ಚರಲ್ ಎಕ್ಸ್ ಪೋಗೆ ಖಾದರ್ ಚಾಲನೆ

**ಬೆಂಗಳೂರು,ಏ.20:** ಭಾರತ್ ಗ್ಲೋಬಲ್ ಕಲ್ಚರಲ್ ಎಕ್ಸ್ ಪೋ ಫೆಬ್ರವರಿ 2026ಗೆ ರಾಜ್ಯ ವಿಧಾನ ಸಭೆಯ ಸಭಾಧ್ಯಕ್ಷ ಡಾ.ಯು.ಟಿ.ಖಾದರ್ ಹಾಗೂ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಎಸ್.ಈ.ಸುಧೀಂದ್ರ ಅವರು ಉದ್ಘಾಟನೆ ಮಾಡಿ ಬೈಕ್ Rallyಗೆ ಚಾಲನೆ ನೀಡಿದರು. ವಿಧಾನಸಭೆಯ ಸಭಾಧ್ಯಕ್ಷರು ತಮ್ಮ ಉದ್ಘಾಟನಾ ನುಡಿಯಲ್ಲಿ ಇಂತಹ ಕ್ರೀಡಾಸ್ಪರ್ಧೆಗಳ ಖಿಚಿಟಟಥಿ ಗಳು ಸಮಾಜದಲ್ಲಿ ಸಾಮರಸ್ಯತೆ, ಒಂದುಗೂಡಿ ಮುನ್ನಡೆಯುವುದು, ಸಾಂಸ್ಕೃತಿಕ, ಕಲೆ, ಕ್ರೀಡಾ ಪ್ರತಿಭೆಗಳನ್ನು ಭಾರತ ಮತ್ತು ಜಾಗತಿಕ ಮಟ್ಟದಲ್ಲಿ ಹೆಸರು ಮಾಡಲು ಉತ್ತಮ ಅವಕಾಶಗಳ ಒಂದು ವೇದಿಕೆಯನ್ನು ನಿರ್ಮಿಸಲು ನೆರವಾಗಲಿವೆ ಎಂದು ಅಭಿಪ್ರಾಯಪಟ್ಟರು

ಎಸ್.ಈ. ಸುಧೀಂದ್ರ ಅವರು ಈ ಸಂದರ್ಭದಲ್ಲಿ ಮಾತನಾಡುತ್ತಾ ವಿಧಾನಸಭೆ ಅಧ್ಯಕ್ಷರ ಮಾನವತಾದಿ ಗುಣಗಳು ಎಲ್ಲರನ್ನು ಸಮಾನವಾಗಿ ಕಾಣುವ ಅವರ ಉದಾತ ಮನೋಭಾವ ಹಾಗೂ ಎಲ್ಲರನ್ನ ಒಟ್ಟಿಗೆ ಕರೆದೊಯ್ಯುವ ಅವರ ನಡತೆ ಸಮಾಜಕ್ಕೆ ಮಾರ್ಗದರ್ಶಕವಾಗಿದೆ. ವಿಧಾನಸಭಾಧ್ಯಕ್ಷರು ಇತ್ತೀಚಿಗೆ ಮೊಟ್ಟಮೊದಲ ಬಾರಿಗೆ ಪ್ರಜಾಪ್ರಭುತ್ವದ ದೇಗುಲ ವಿಧಾನಸೌಧದಲ್ಲಿ ಪುಸ್ತಕ ಪ್ರದರ್ಶನವನ್ನು ಏರ್ಪಡಿಸಿ ಸಾರ್ವಜನಿಕರಿಗೆ ಮುಕ್ತ ಪ್ರವೇಶ ನೀಡಿದ್ದು ಇದಕ್ಕೆ ನಿದರ್ಶನವಾಗಿದೆ ಎಂದು ಪ್ರಶಂತಿಸಿದರು. ಮಂಡಳಿಯ ಅಧ್ಯಕ್ಷರು ಸಾಂಸ್ಕೃತಿಕ ಐಕ್ಯತೆ, ನಾವಿನ್ಯತೆ ಮತ್ತು ನವೋತ್ಸಾಹ ಇಡೀ ಜಗತ್ತಿಗೆ ಸಾರುವ ಮಹೋದ್ದೇಶದೊಂದಿಗೆ ಆಯೋಜಿಸಲಾಗಿರುವ ಭಾರತ್ ಗ್ಲೋಬಲ್ ಎಕ್ಸ್‌ಪೋ ಫೆಬ್ರವರಿ 20206 ಅತ್ಯಂತ ಮಹತ್ವದ್ದಾಗಿದೆ ಎಂದು ತಿಳಿಸಿದರು. ಈ ಬೈಕ್ Rally ಯ ಉದ್ದೇಶವು "ಜಾಗತಿಕ ಮಟ್ಟದಲ್ಲಿ ಆರ್ಥಿಕ ಮತ್ತು ಸಾಮಾಜಿಕ ಬೆಳವಣಿಗೆಗಳು ಪ್ರಸ್ತುತ ಸನ್ನಿವೇಶದಲ್ಲಿ ಅತಿ ಮುಖ್ಯವಾಗಿ ಅವಶ್ಯಕತೆಯಾಗಿರುವ ನೀರಿನ ಮರುಬಳಕೆಗೆ ಆದ್ಯತೆ ಪ್ರವಾಸ ಮತ್ತು ಸಂಸ್ಕೃತಿಯನ್ನು ಪ್ರಚುರ ಪಡಿಸಲು" ನೆರವಾಗಲಿವೆ ಎಂಬುದರಲ್ಲಿ ಯಾವುದೇ ಸಂಶಯವಿಲ್ಲ ಎಂದು ಅಭಿಪ್ರಾಯಪಟ್ಟರು.




ಮಂಡಳಿಯ ಅಧ್ಯಕ್ಷರು ಕರ್ನಾಟಕ ರಾಜ್ಯ ಜನಪ್ರಿಯ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯನವರ ಆದ್ಯತೆ, ದೂರದೃಷ್ಟಿ ಚಿಂತನೆಗಳು ಯಾವಾಗಲೂ ಜಾಗತಿಕ ಮಟ್ಟದಲ್ಲಿ ಕರ್ನಾಟಕ ರಾಜ್ಯದ ಆಟೋಮೊಬೈಲ್, ಬ್ಯಾಂಕಿಂಗ್, ಫೈನಾನ್ಸಿಯಲ್, ವಿಮೆ,ವಿಜ್ಞಾನ, ತಾಂತ್ರಿಕತೆ, ಆರೋಗ್ಯ ,ಕ್ರೀಡೆ ,ಶಿಕ್ಷಣ, ಆರ್ಟಿಫಿಶಿಯಲ್ ಇಂಟಲಿಜೆನ್ಸ್, ರಿಯಲ್ ಎಸ್ಟೇಟ್ , ಸ್ಮಾರ್ಟ್‌ಸಿಟಿ ಹಾಗೂ ಸ್ಟಾರ್ಟ್ಸ್‌ಅಪ್ ಗಳನ್ನು ಉನ್ನತಿಕರಣ ಮತ್ತು ಜಾಗತೀಕರಣ ಮಟ್ಟಕ್ಕೆ ಕೊಂಡೊಯ್ಯಲು ಪೂರಕವಾಗಿದ್ದು, ಈ ರೀತಿಯ ಕಾರ್ಯಕ್ರಮಗಳು ನಿರೀಕ್ಷಿತ ಪರಿಣಾಮವನ್ನು ಜಾಗತಿಕ ಮಟ್ಟದಲ್ಲಿ ಬಿಂಬಿಸಲು ಅನುಕೂಲವಾಗಲಿದ್ದು ಮುಂದಿನ ದಿನಗಳಲ್ಲಿ ಕ್ಷೇತ್ರಗಳ ಅಭಿವೃದ್ಧಿಗೆ ನೆರವಾಗಲಿವೆ ಎಂದು ತಿಳಿಸಿದರು.

ಈ ಭಾರತ್ ಗ್ಲೋಬಲ್ ಕಲ್ಚರಲ್ ಎಕ್ಸ್ಪೋ ಫೆಬ್ರವರಿ 2026 ವ್ಯಾಪಾರ ಉದ್ಯಮ ಹಾಗೂ ಸಾಂಸ್ಕೃತಿಕ ವಿಭಾಗಗಳಲ್ಲಿ ಅಂತರಾಷ್ಟ್ರೀಯ ಮಟ್ಟದಲ್ಲಿ ಸಣ್ಣ, ಅತಿ ಸಣ್ಣ ಹಾಗೂ ಮಧ್ಯಮ ಗಾತ್ರದ ಉದ್ದಿಮೆಗಳು ಹಾಗೂ ಸ್ಟಾರ್ಟ್ ತಮ್ಮ ವ್ಯಾಪಾರ ಕ್ಷೇತ್ರವನ್ನು ವಿಸ್ತರಿಸಲು ಒಂದೇ ಸೂರಿನಡಿ ವೇದಿಕೆ ನಿರ್ಮಾಣ ಮಾಡಲು ಅನುಕೂಲವಾಗಲಿದ್ದು ಉತ್ತೇಜನ ದೊರೆಯಲಿದೆ ಎಂದು ಪ್ರತಿಪಾದಿಸಿದರು. ಈ ಕಾರ್ಯಕ್ರಮದ ಆಯೋಜನೆಯು ಸ್ಪರ್ಧಾಳುಗಳಿಗೆ ದೇಶದ, ಜಾಗತಿಕ ಮಟ್ಟದಲ್ಲಿ ಹೂಡಿಕೆದಾರರು, ಖರೀದಿದಾರರು, ಸರ್ಕಾರದ ಅಧಿಕಾರಿಗಳು ಮತ್ತು ಮಾಧ್ಯಮ ಪ್ರತಿನಿಧಿಗಳೊಂದಿಗೆ ಸಹಯೋಗ ಹೊಂದಲು ಒಂದು ಅತ್ಯುತ್ತಮ ಅವಕಾಶವನ್ನು ಕಲ್ಪಿಸಿ ಈ ಸ್ಪರ್ಧಾಳುಗಳ ಉನ್ನತ ಭವಿಷ್ಯದ ನಿರ್ಮಾಣಕ್ಕೆ ಅವಕಾಶವನ್ನು ಒದಗಿಸಲಿದೆ ಎಂಬ ಆಶಯವನ್ನು ವ್ಯಕ್ತಪಡಿಸಿದರು.

ಈ ಕಾರ್ಯಕ್ರಮದಲ್ಲಿ ಮಾಜಿ ವಿಧಾನಪರಿಷತ್ ಸದಸ್ಯ ಎಸ್.ವಿ ಉಗ್ರಪ್ಪನವರು, ಮಾಜಿ ಮೇಯರ್ ಸಂಪತ್ ರಾಜ್, ಸುನೀತಾ ಹಾಗೂ ಜಯಶ್ರೀ ಅವರು ಭಾಗವಹಿಸಿದ್ದರು.

# ಅಪಘಾತಕ್ಕೀಡಾದ ಬೈಕ್ ಸವಾರ ಚಿಕಿತ್ಸೆ ಕೊಡಿಸಿದ ಸಚಿವ ಜೋಶಿ

**ಹುಬ್ಬಳ್ಳಿ,ಏ,20:** ರಸ್ತೆ ಅಪಘಾತದಲ್ಲಿ ತೀವ್ರ ಗಾಯಗೊಂಡ ಬೈಕ್ ಸವಾರನನ್ನು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರು ತಕ್ಷಣ ತಮ್ಮ ಬೆಂಗಾವಲು ಪಡೆಯ ವಾಹನದಲ್ಲೇ ಆಸ್ಪತ್ರೆಗೆ ಸಾಗಿಸಿ ಚಿಕಿತ್ಸೆ ಕೊಡಿಸುವ ಮೂಲಕ ಮಾನವೀಯತೆ ಮೆರೆದಿದ್ದಾರೆ. ನಗರದ ಶಿರೂರು ಪಾರ್ಕ್ ರಸ್ತೆಯಲ್ಲಿ ಇಂದು ಮಧ್ಯಾಹ್ನ ಸಚಿವರು ಬೆಂಗಾವಲು ಪಡೆ ವಾಹನದೊಂದಿಗೆ ಕಾರ್ಯಕ್ರಮವೊಂದಕ್ಕೆ ತೆರಳುತ್ತಿದ್ದರು. ಈ ವೇಳೆ ದ್ವಿಚಕ್ರ ವಾಹನ ಸವಾರನನ್ನು ಆಕಸ್ಮಿಕ ಅಪಘಾತಕ್ಕೀಡಾಗಿ ತೀವ್ರ ಗಾಯಗೊಂಡಿರುವುದು ಕಂಡುಬಂತು. ಗಾಯಾಳುಗಳ ಸ್ಥಿತಿ ನೋಡಿದ ಸಚಿವರು ತಕ್ಷಣವೇ ತಮ್ಮ ಬೆಂಗಾವಲು ಪಡೆಯ ವಾಹನದಲ್ಲಿ ಕಿಮ್ಸ್ ಗೆ ಕಳಿಸಿಕೊಟ್ಟರು. ಅಲ್ಲದೇ, ಕಿಮ್ಸ್ ನಿರ್ದೇಶಕರಿಗೆ ಸ್ವತಃ ಕರೆಮಾಡಿದ ಸಚಿವರು ಗಾಯಾಳುಗಳಿಗೆ ತ್ವರಿತ ಚಿಕಿತ್ಸೆ ನೀಡಿ ಉಪಚರಿಸುವಂತೆ ನಿರ್ದೇಶನ ಸಹ ನೀಡಿದರು.



**ಸದಾ ಸಹಾಯಕ್ಕೆ ನಿಲ್ಲುವ ಸಚಿವರು:** ಅಪಘಾತ ಸಂಭವಿಸಿ ಅಪರಿಚಿತರು ರಕ್ತದ ಮಡುವಿನಲ್ಲಿ ಬಿದ್ದಿದ್ದರೆ ಕೆಲವರು ನಮಗೇಕೆ ಉಸಾಬರಿ ಎಂದು ತಮ್ಮ ಪಾಡಿಗೆ ತಾವು ಹೋಗುವುದನ್ನು ಕಂಡಿದ್ದೇವೆ. ಆದರೆ, ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರು ಈ ವಿಚಾರದಲ್ಲಿ ವಿಭಿನ್ನ. ಎಲ್ಲಿ...ಯಾರೇ... ಅಪಘಾತಕ್ಕೆ ಈಡಾಗಿರಲಿ ಮೊದಲು ರಕ್ಷಣಾ ಕಾರ್ಯಕ್ಕೆ ಇಳಿಯುತ್ತಾರೆ. 'ಜೀವ ರಕ್ಷಣೆ ಮೊದಲು – ಕಾನೂನು ಕಟ್ಟಳೆಗಳೆಲ್ಲ ಆಮೇಲೆ' ಎನ್ನುವಂತೆ ಗಾಯಾಳುಗಳ ಚಿಕಿತ್ಸೆಗೆ ಸ್ಪಂದಿಸುತ್ತಾರೆ. ಇತ್ತೀಚೆಗೆ ಬೆಳಗಾವಿಗೆ ತೆರಳುವಾಗ ಸಹ ಇಂಥದ್ದೇ ಒಂದು ಘಟನೆಯಲ್ಲಿ ಗಾಯಾಳುಗಳ ನೆರವಿಗೆ ಧಾವಿಸಿದ್ದರು ಸಚಿವರು.

ಧಾರವಾಡ ಸಮೀಪ ರಾಷ್ಟ್ರೀಯ ಹೆದ್ದಾರಿಯಲ್ಲಿ ಅಪಘಾತದಲ್ಲಿ ತೀವ್ರ ಗಾಯಗೊಂಡವರನ್ನು ಬೆಂಗಾವಲು ಪಡೆ ವಾಹನದಲ್ಲಿ ಆಸ್ಪತ್ರೆಗೆ ಸಾಗಿಸಿ ಮಾನವೀಯತೆ ತೋರಿದ್ದರು. ಇಂದು ಸಹ ಹುಬ್ಬಳ್ಳಿಯ ಶಿರೂರು ಪಾರ್ಕ್ ರಸ್ತೆ ಬಳಿ ವಾಹನದಲ್ಲಿ ಕಾರ್ಯಕ್ರಮವೊಂದಕ್ಕೆ ತೆರಳುತ್ತಿದ್ದ ಸಚಿವರು, ಅಪಘಾತವೊಂದರಲ್ಲಿ ರಕ್ತದ ಮಡುವಿನಲ್ಲಿದ್ದ ಗಾಯಾಳು ಸ್ಥಿತಿ ಕಂಡು ಸಹಾಯಕ್ಕೆ ನಿಂತರು.

ಬೆಂಗಾವಲು ಪಡೆ ವಾಹನದಲ್ಲೇ ಗಾಯಾಳುವನ್ನು ಆಸ್ಪತ್ರೆಗೆ ಕಳಿಸಿ ಕಿಮ್ಸ್ ವೈದ್ಯರಿಗೂ ಫೋನ್ ಕರೆ ಮಾಡಿ ತಿಳಿಸಿ ತ್ವರಿತ ಚಿಕಿತ್ಸೆಗೆ ಸ್ಪಂದಿಸಿದರು. ಅಲ್ಲದೇ, "ಅಮೂಲ್ಯ ಜೀವ ಉಳಿಸಿಕೊಳ್ಳಲು ದಯವಿಟ್ಟು ಹೆಲ್ಮೆಟ್ ಧರಿಸಿಯೇ ವಾಹನ ಏರಿ" ಎಂದು ನೆರೆದವರಲ್ಲಿ ಕಳಕಳಿಯಿಂದ ಮನವಿ ಮಾಡಿದರು. ಸಚಿವರ ಮಾನವೀಯ ಕಾರ್ಯಕ್ಕೆ ಸ್ಥಳದಲ್ಲಿದ್ದ ಸಾರ್ವಜನಿಕರಿಂದ ಮೆಚ್ಚುಗೆ ವ್ಯಕ್ತವಾಯಿತು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಕೇಂದ್ರ ಒಪ್ಪಿಗೆ ಕೊಟ್ಟರೆ ನಾಳೆಯೇ ಮಹದಾಯಿ ಯೋಜನೆ ಜಾರಿ:ಸಿಎಂ

## ಒಣ ಬೇಸಾಯ ಮಾಡುವ ರೈತರೇ ಹೆಚ್ಚು: ಸಮಗ್ರ ಕೃಷಿ-ಕೃಷಿಕರ ಪ್ರಗತಿಗೆ ಕ್ರಮ: ಸಿ.ಎಂ

## ನಗರ ಪ್ರದೇಶಕ್ಕೆ ರೈತರ ವಲಸೆಯಿಂದ ಕೃಷಿಗೆ ಪೆಟ್ಟು: ಸಿದ್ದರಾಮಯ್ಯ ಕಳವಳ

**ಬೆಳಗಾವಿ ಏ 20:** ರೈತರು, ಶಿಕ್ಷಕರು, ಸೈನಿಕರು ದೇಶದ ರಕ್ಷಕರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೆಚ್ಚುಗೆ ವ್ಯಕ್ತಪಡಿಸಿದರು. ಕೃಷಿ ಇಲಾಖೆ ಸಹಾಯಧನದ ಅಡಿಯಲ್ಲಿ ಸುಮಾರು 400 ಕೋಟಿ ವೆಚ್ಚದ ಕೃಷಿಯಂತ್ರ ಮತ್ತು ಸಲಕರಣೆಗಳನ್ನು ರೈತರಿಗೆ ವಿತರಿಸಿ ಮಾತನಾಡಿದರು. ಕೃಷಿಕರಿಗೆ ಶೇ40 ರಷ್ಟು , ಪರಿಶಿಷ್ಟ ಸಮಾಜದ ಕೃಷಿಕರಿಗೆ ಶೇ50 ರಷ್ಟು ರಿಯಾಯ್ತಿಯಲ್ಲಿ ಕೃಷಿ ಯಂತ್ರೋಪಕರಣಗಳನ್ನು ವಿತರಣೆ ಮಾಡಿದ್ದೇವೆ. ಕೃಷಿ ಕಾರ್ಮಿಕರ ಕೊರತೆಯಿಂದಾಗಿ ಕೃಷಿ ಯಂತ್ರಗಳ ಮೇಲಿನ ಅವಲಂಭನೆ ಹೆಚ್ಚಾಗಿದೆ. ಹೀಗಾಗಿ ರಿಯಾಯ್ತಿ ಬೆಲೆಯಲ್ಲಿ ಕೃಷಿಯಂತ್ರಗಳ ವಿತರಣೆ ಸರ್ಕಾರ ಮಾಡುತ್ತಿದೆ ಎಂದರು.

ಕೃಷಿಭಾಗ್ಯವನ್ನು ಒಣಕೃಷಿ ಬೆಳೆಗಾರರಿಗೆ ಜಾರಿಗೆ ತಂದಿದ್ದೇವೆ. ಕಳೆದ ವರ್ಷ 25 ಸಾವಿರಕ್ಕೂ ಹೆಚ್ಚು ಕೃಷಿ ಹೊಂಡ ಮಾಡಿಸಿದ್ದೇವೆ. ಈ ವರ್ಷ ಇದು ಇನ್ನೂ ಹೆಚ್ಚಾಗುತ್ತದೆ. ಕೃಷಿಹೊಂಡ ಬಹಳ ಉಪಯುಕ್ತ ಯೋಜನೆಯಾಗಿದೆ ಎಂದು ತಜ್ಞರು ವರದಿ ನೀಡಿದ್ದಾರೆ ಎಂದರು. ಈಗ ಆಹಾರ ಉತ್ಪಾದನೆಯಲ್ಲಿ ಸ್ವಾವಲಂಭಿಯಾಗಿದ್ದೇವೆ. ನಮ್ಮ ಸರ್ಕಾರ ಬಂದ ಮೇಲೆ ಆಹಾರ ಉತ್ಪಾದಕರಾದ ನಿಮ್ಮ ಕಾರಣದಿಂದ 10 ಕೆಜಿ ಅಕ್ಕಿ ಕೊಡುವ ಅನ್ನಭಾಗ್ಯ ಯೋಜನೆಯನ್ನು ಕೊಡಲು ಶುರು ಮಾಡಿದೆವು ಎಂದರು. ನೀರಾವರಿ ಯೋಜನೆಗಳಿಗೆ ನಮ್ಮ ಸರ್ಕಾರ 23 ಸಾವಿರ ಕೋಟಿ ಖರ್ಚು ಮಾಡುತ್ತಿದೆ. ಭದ್ರಾ ಮೇಲ್ದಂಡೆ



ಯೋಜನೆಗೆ ಇವತ್ತಿನವರೆಗೂ ಒಂದು. ಪೈಸೆಯನ್ನೂ ಕೇಂದ್ರ ಸರ್ಕಾರ ಕೊಟ್ಟಿಲ್ಲ. ಮಹದಾಯಿ, ಮೇಕೆದಾಟು ಯೋಜನೆಗೆ ಕೇಂದ್ರ ಸರ್ಕಾರ ಒಪ್ಪಿಗೆಯನ್ನೇ ಕೊಡುತ್ತಿಲ್ಲ. ಕೇಂದ್ರ ಸರ್ಕಾರ ಒಪ್ಪಿಗೆ ಕೊಟ್ಟರೆ ತಕ್ಷಣ ಈ ಎಲ್ಲಾ ನೀರಾವರಿ ಯೋಜನೆಗಳನ್ನು ಆರಂಭಿಸಲು ಸರ್ಕಾರ ಸಿದ್ಧವಿದೆ ಎಂದು ಘೋಷಿಸಿದರು.

## ಈಗ ಇರುವುದು ಮೂಲ ವರದಿ ಅಲ್ಲ, ಅಸಲಿ ವರದಿ ಸಿಎಂ ಸಿದ್ದರಾಮಯ್ಯ ಮನೆಯಲ್ಲಿದೆ: ಪ್ರತಿಪಕ್ಷ ನಾಯಕ ಅಶೋಕ ಟೀಕೆ

# ಸಾವಿರಾರು ವರ್ಷಗಳಿಂದ ನಂಬಿಕೊಂಡು ಬಂದ ನಂಬಿಕೆಯನ್ನೇ ಸರ್ಕಾರ ಕಿತ್ತುಹಾಕಿದೆ

**ಬೆಂಗಳೂರು, ಏಪ್ರಿಲ್ 20:** ಹಿಂದುಳಿದ ವರ್ಗಗಳ ಶಾಶ್ವತ ಆಯೋಗದ ಮಾಜಿ ಅಧ್ಯಕ್ಷ ಜಯಪ್ರಕಾಶ್ ಹೆಗ್ಡೆ ಸರ್ಕಾರಕ್ಕೆ ಬರೆದ ಪತ್ರದ ಪ್ರಕಾರ, ಜಾತಿ ಗಣತಿ ವರದಿಯ ಮೂಲ ಪ್ರತಿ ಲಭ್ಯವಾಗಿಲ್ಲ. ಈಗ ಇರುವುದು ನಕಲಿ ವರದಿ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದರು. ಶಾಶ್ವತ ಹಿಂದುಳಿದ ವರ್ಗಗಳ ಆಯೋಗ ನಡೆಸಿದ ಸಾಮಾಜಿಕ, ಶೈಕ್ಷಣಿಕ ಸಮೀಕ್ಷಾ ವರದಿಯ ಮೂಲ ಹಸ್ತಪ್ರತಿ ನಾಪತ್ತೆ ಪ್ರಕರಣದ ಬಗ್ಗೆ ನ್ಯಾಯಾಂಗ ತನಿಖೆ ನಡೆಸಬೇಕು ಆಗ್ರಹಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2021 ರ ಅಕ್ಟೋಬರ್‌ನಲ್ಲಿ ಆಯೋಗದ ಅಧ್ಯಕ್ಷರಾಗಿದ್ದ ಜಯಪ್ರಕಾಶ್ ಹೆಗ್ಡೆ ಅವರು ಸರ್ಕಾರಕ್ಕೆ ಪತ್ರ ಬರೆದು ಜಾತಿಗಣತಿ ವರದಿ ಕಾಣೆಯಾಗಿದೆ ಎಂದು ಹೇಳಿದ್ದಾರೆ. ಸೀಲ್ಡ್ ಬಾಕ್ಸ್ ತೆರೆದಾಗ ಮುದ್ರಿತ ವರದಿಯಲ್ಲಿ ಆಯೋಗದ ಸದಸ್ಯ ಕಾರ್ಯದರ್ಶಿ ಸಹಿ ಇಲ್ಲ. ಇದರ ಜೊತೆಗೆ ಮೂಲ ಹಸ್ತಪ್ರತಿ ಇರಲಿಲ್ಲ ಎಂದು ಸರ್ಕಾರಕ್ಕೆ ಪತ್ರ ಬರೆದಿದ್ದರು ಎಂದು ಅವರು ಹೇಳಿದ್ದರು. ಸರ್ಕಾರ ಈಗ ಹೇಳಲಿ. ಈ ಜಾತಿಗಣತಿ ವರದಿ ನೈಜತೆಯಿಂದ ಕೂಡಿದೆಯೋ, ಮೂಲ ವರದಿಯ ಹಸ್ತಪ್ರತಿಯೇ ಮೊಹರು ಮಾಡಿದ ಪೆಟ್ಟಿಗೆಯಲ್ಲಿ ಇಲ್ಲ ಎಂದ ಮೇಲೆ ವರದಿ ಹೇಗೆ ನೈಜತೆಯಿಂದ ಕೂಡಿರುತ್ತದೆ?. ಇದು ರಕ್ತ ಕಣ್ಣೀರು ಸಿನಿಮಾ ಎಂದು ವ್ಯಂಗ್ಯವಾಡಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆಡಳಿತ ವೈಫಲ್ಯವನ್ನು ಮುಚ್ಚಿಕೊಳ್ಳಲು ಜಾತಿಗಣತಿ ವಿಚಾರವನ್ನು ಹೊರಗೆ ತಂದರು.

ಅವರು ಯಾವಾಗ ಬೇಕೋ ಆಗ ವರದಿ ನೀಡುತ್ತಾರೆ. ಇದಕ್ಕೆ ತಮೊಂದಿಗೆ ನಾಟಕ ಕಂಪನಿಯನ್ನು ಇಟ್ಟುಕೊಂಡಿದ್ದಾರೆ. ಇದು ಶಕುನಿ ಸರ್ಕಾರ. ಅಭಿವೃದ್ಧಿ ಬೇಕಾಗಿಲ್ಲ ಎಂದು ಟೀಕಾಪ್ರಹಾರ ನಡೆಸಿದರು. ಆಯೋಗದ ಅಧ್ಯಕ್ಷರೇ ವರದಿಯ ಮೂಲಪ್ರತಿ ಇಲ್ಲ ಎಂದಿದ್ದಾರೆ. ಅವರು ಸಮೀಕ್ಷೆ ಮಾಡಿದ್ದು 6 ಕೋಟಿ ಜನರನ್ನು. ಉಳಿದ ಒಂದು ಕೋಟಿ ಜನರಿಗೆ ನಾಮವೇ ಎಂದು ಪ್ರಶ್ನಿಸಿದ ಅವರು, ಜಾತಿಗಣತಿಯ ಮೂಲ ಪ್ರತಿ ಸಿದ್ದರಾಮಯ್ಯನವರ ಮನೆಯಲ್ಲಿದೆ. ಈಗ ಮಂಡಿಸಿರುವ ವರದಿ ನಕಲಿ ಎಂದು ಆರೋಪಿಸಿದರು. ಸಮೀಕ್ಷೆ ಮಾಡುವವರು ಮಠಕ್ಕೆ ಬಂದಿಲ್ಲ ಎಂದು ಸಿದ್ದಗಂಗಾ ಮಠದ ಶ್ರೀಗಳೇ ಹೇಳಿದ್ದಾರೆ. ಕಾಂಗ್ರೆಸ್‌ನ ಕೆಲ ಶಾಸಕರೂ ಸಹ ನಮ್ಮ ಮನೆಗಳಿಗೆ ಬಂದಿಲ್ಲ ಎಂದು ಹೇಳಿದ್ದಾರೆ. ಹಾಗಾದರೆ ಸಮೀಕ್ಷೆಗಳಿಗೆ ಖರ್ಚು ಮಾಡಿದ್ದ 169 ಕೋಟಿ ರೂ. ದೊಡ್ಡ ಹಗರಣವಾಗಿದೆ. ಮುಂದೆ ನಮ ಸರ್ಕಾರ ಅಧಿಕಾರಕ್ಕೆ ಬಂದಾಗ ಈ ಹಗರಣದ ತನಿಖೆ ಮಾಡಿಸುತ್ತೇವೆ ಎಂದರು. ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯನ್ನು ಯಾರ್ಯಾರು ಮಾಡಿದ್ದರು, ಯಾವ ಏಜೆನ್ಸಿಗೆ ಕೊಟ್ಟಿದ್ದರು. ಯಾವ ಶಿಕ್ಷಕರು ಹೋಗಿದ್ದರು ಎಂಬ ಮಾಹಿತಿ ನೀಡಲಿ. ಜಾತಿಗಣತಿಗೆ ನಾವು ವಿರೋಧವಿಲ್ಲ. ತುಳಿತಕ್ಕೊಳಗಾದ ಜಾತಿಗಳಿಗೆ ನ್ಯಾಯ ಸಿಗಬೇಕು. ಮನೆಮನೆಗೆ ಹೋಗಿ ಸಮೀಕ್ಷೆ ಮಾಡಿರುವ ದಾಖಲೆಗಳು ಬಹಿರಂಗವಾಗಬೇಕು.

ಇದರ ಹಿಂದಿನ ನಿರ್ದೇಶಕರು, ಸ್ಕ್ರೀನ್ ಪ್ಲೇ ಎಲ್ಲವೂ ಸಿದ್ದರಾಮಯ್ಯನವರು ಎಂದು ಆಪಾದಿಸಿದರು. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಜನಿವಾರಕ್ಕೆ ಕತ್ತರಿ, ಶಿವದಾರ ಶಿವನ ಪಾದ, ಉಡುದಾರಕ್ಕೆ ಊರುಗೋಲಿಲ್ಲ, ತಾಳಿಗೆ ಭಾಗ್ಯವಿಲ್ಲ, ಹಿಜಾಬ್‌ಗೆ ಬಹುಪರಾಕ್ ನಡೆಯುತ್ತಿದೆ ಎಂದು ಅಶೋಕ್ ಇದೇ ಸಂದರ್ಭದಲ್ಲಿ ಆರೋಪಿಸಿದರು.ಬಾಬಾ ಸಾಹೇಬ ಬಿ.ಆರ್.ಅಂಬೇಡ್ಕರ್ ಅವರ




ಸಂವಿಧಾನಬದ್ಧ ಸರ್ಕಾರ ಇದಲ್ಲ. ಧಾರವಾಡದಲ್ಲೂ ನಂದನ್ ಎಂಬ ವಿದ್ಯಾರ್ಥಿಯ ಜನಿವಾರ ಕತ್ತರಿಸಿದ ಪ್ರಕರಣ ನಡೆದಿದೆ. ಜನಿವಾರ ತೆಗಿ ಎಂದು ಸಿಇಟಿ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳ ಭಾವನೆಯನ್ನು ಘಾಸಿ ಮಾಡಿದ್ದಾರೆ. ಹಿಜಾಬ್ ತೆಗೆದಿದ್ದಕ್ಕೆ ಬಾಯಿಬಾಯಿ ಬಡಿದುಕೊಂಡರು ಎಂದು ಟೀಕಿಸಿದರು. ಮಹಿಳೆಯರ ತಾಳಿಗೆ ಕೈ ಹಾಕಿದ ಕಾಂಗ್ರೆಸ್ ಸರ್ವನಾಶವಾಗುತ್ತದೆ. ತಾಳಿ, ಓಲೆ ಎಲ್ಲವನ್ನೂ ತೆಗೆಸಿದ್ದಾರೆ. ಕಾಂಗ್ರೆಸ್ ಸರ್ಕಾರ ಹಿಂದೂಗಳನ್ನು ಅಪಮಾನಿಸಿ ದಮನ ಮಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಕೇಂದ್ರ ಹಾಗೂ ರಾಜ್ಯ ಮಾನವ ಹಕ್ಕುಗಳ ಆಯೋಗ ಸರ್ಕಾರದ ಮೇಲೆ ಕ್ರಮ ಕೈಗೊಳ್ಳಬೇಕು ಎಂದ ಅವರು, ಈ ಸಂಬಂಧ ಕೇಂದ್ರ ಮಹಿಳಾ ಆಯೋಗಕ್ಕೆ ಪತ್ರ ಬರೆಯುವುದಾಗಿ ಹೇಳಿದರು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಯಾವ ಧರ್ಮ ಕಾಪಾಡುತ್ತಾರೆ ಎಂಬುದನ್ನು ಹೇಳಲಿ. ಕುಕ್ಕರ್ ಬಾಂಬ್ ಹಾಕಿದವರನ್ನು ಬ್ರದರ್ ಎಂದು ಕರೆದವರು ಎಂದು ಮೂದಲಿಸಿದರು.ಪಿಎಸ್‌ಐ ಪರಶುರಾಮು ಸಾವಿನ ಪ್ರಕರಣದಲ್ಲಿ ಶಾಸಕ ಚನ್ನಾರೆಡ್ಡಿ ಪಾಟೀಲ್ ಅವರ ಮೇಲಿನ ಆರೋಪಕ್ಕೆ ಬಿ ರಿಪೋರ್ಟ್ ಹಾಕುವ ಮೂಲಕ ಮುಚ್ಚಿ ಹಾಕುವ ಯತ್ನ ನಡೆದಿದೆ ಎಂದು ಅಶೋಕ್ ಆರೋಪಿಸಿದರು.ವಾಣಿವಿಲಾಸ ಆಸ್ಪತ್ರೆಯಲ್ಲಿ ಮತ್ತೊಬ್ಬ ಬಾಣಂತಿ ಸಾವಾಗಿದೆ. ಈ ಸರ್ಕಾರಕ್ಕೆ ಮಹಿಳೆಯರ ರಕ್ಷಣೆಯ ಬಗ್ಗೆ ಕಾಳಜಿ ಇಲ್ಲ ಎಂದು ಟೀಕಿಸಿದರು.

# ಎಲ್ಲಾ ಜಾತಿಯ ಬಡವರಿಗೆ ಶಿಕ್ಷಣ ಸಿಗಲಿ, ಸಾಮಾಜಿಕ ಆರ್ಥಿಕ ಶಕ್ತಿ ತುಂಬಬೇಕು: ಮುಖ್ಯಮಂತ್ರಿ ಸಿದ್ದರಾಮಯ್ಯ

## ಸಾಮಾಜಿಕ ಸಮೀಕ್ಷೆಯ ಮೂಲಪ್ರತಿ ನನ್ನ ಬಳಿ ಇರಲು ಹೇಗೆ ಸಾಧ್ಯ: ಅಶೋಕ್ ಆರೋಪಕ್ಕೆ ಸಿಎಂ ತಿರುಗೇಟು




**ಬೆಳಗಾವಿ, ಏಪ್ರಿಲ್ 22:** ಮುಸಲ್ಮಾನರಿಗೆ, ಹಿಂದುಳಿದವರಿಗೆ ಮಾತ್ರವಲ್ಲದೆ , ಎಲ್ಲಾ ಧರ್ಮದ, ಎಲ್ಲಾ ಜಾತಿಯ ಬಡವರಿಗೆ ಶಿಕ್ಷಣ ಸಿಗಬೇಕು , ಸಾಮಾಜಿಕ ಆರ್ಥಿಕ ಶಕ್ತಿ ತುಂಬಬೇಕು. ಇದೇ ನಮ್ಮ ಗುರಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನುಡಿದರು. ಅವರು ಇಂದು ಬೆಳಗಾವಿ ಸಾಂಭ್ರಾ ವಿಮಾನ ನಿಲ್ದಾಣದಲ್ಲಿ ಮಾಧ್ಯಮದವರ ಜೊತೆ ಮಾತನಾಡಿದರು. ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆಯ ಮೂಲಪ್ರತಿ ಮುಖ್ಯಮಂತ್ರಿಗಳ ಬಳಿಯಿದೆ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು ಮಾಡಿರುವ ಆರೋಪಕ್ಕೆ ಪ್ರತಿಕ್ರಿಯೆ ನೀಡಿ ಆಶೋಕ್ ಅವರು ಯಾವತ್ತಾದರೂ ಸತ್ಯವನ್ನು ಹೇಳಿದ್ದಾರೆಯೇ? ಅವರು ಸುಳ್ಳೇ ಹೇಳುವುದು. ಮೂಲಪ್ರತಿ ನನ್ನ ಬಳಿಯಿರಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದ ಮುಖ್ಯಮಂತ್ರಿಗಳು ರಾಹುಲ್ ಗಾಂಧಿಯವರಿಗೆ ನಾವು ಪತ್ರ ಬರೆದಿಲ್ಲ ಆದರೆ ಅವರೊಂದಿಗೆ ಚರ್ಚೆ ಮಾಡಿ ಸಚಿವ ಸಂಪುಟ ಸಭೆಯಲ್ಲಿ ಸಮೀಕ್ಷೆಯ ವರದಿಯನ್ನು ಮಂಡಿಸಿದ್ದೇವೆ ಎಂದರು.

### ಜಾತಿಗಣತಿ: ಸಚಿವರ ಅಭಿಪ್ರಾಯದ ನಂತರ ಅಂತಿಮ ತೀರ್ಮಾನ

ಕಾಂಗ್ರೆಸ್ ಶಾಸಕರೇ ಈ ಬಗ್ಗೆ ವಿರೋಧ ವ್ಯಕ್ತಪಡಿಸಿರುವ ಬಗ್ಗೆ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿ ಸಚಿವ ಸಂಪುಟ ಸಭೆಯಲ್ಲಿ ಯಾರೂ ಈ ಬಗ್ಗೆ ವಿರೋಧ ವ್ಯಕ್ತಪಡಿಸಿ ಯಾರೂ ಜೋರಾಗಿ ಮಾತನಾಡಿಲ್ಲ. ಸಮೀಕ್ಷೆಯನ್ನು ಓದಿಕೊಂಡು ಅಭಿಪ್ರಾಯಗಳನ್ನು ತಿಳಿಸುವಂತೆ ಸೂಚಿಸಲಾಗಿದ್ದು ಸಚಿವರು ಅಭಿಪ್ರಾಯ ತಿಳಿಸಿದ ನಂತರ ಪುನಃ ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ಮಾಡಿ ಅಂತಿಮ ತೀರ್ಮಾನಕ್ಕೆ ಬರಲಾಗುವುದು ಎಂದರು.

### ಯಾವ ಜಾತಿಗೂ ಅನ್ಯಾಯವಾಗಬಾರದು

ಯಾವ ಜಾತಿಗೂ ಅನ್ಯಾಯವಾಗಬಾರದು ಎನ್ನುವುದು ಸರ್ಕಾರದ ಉದ್ದೇಶ. ಇದು ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆ. ಸಂವಿಧಾನ ಜಾರಿಯಾಗಿ 75 ವರ್ಷಗಳಾಗಿದ್ದರೂ ಬಡವ ಬಡವನಾಗಿಯೇ ಉಳಿಯಬೇಕೆ ಸಮಾನತೆ ಬೇಡವೇ, ಜಾತಿಗೆ ಅಂಟಿಕೊಂಡೇ ಇರಬೇಕೆ ಎಂದು ಮುಖ್ಯಮಂತ್ರಿಗಳು ಪ್ರಶ್ನಿಸಿದರು.

# ಶೇಖ್ ಹಸೀನಾ ವಿರುದ್ಧ ರೆಡ್ ಕಾರ್ನರ್ ನೋಟಿಸ್: ಇಂಟರ್‌ಪೋಲ್ ಮೊರೆಹೋದ ಬಾಂಗ್ಲಾ

**ನವದೆಹಲಿ, ಏಪ್ರಿಲ್ 20:** ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಸೇರಿದಂತೆ 12 ಜನರ ವಿರುದ್ಧ ರೆಡ್ ಕಾರ್ನರ್ ನೋಟಿಸ್ ಹೊರಡಿಸುವಂತೆ ಎನ್‌ಸಿಬಿ ಇಂಟಪೋಲ್‌ಗೆ ಮನವಿ ಸಲ್ಲಿಸಿದೆ ಎಂದು ವರದಿಯಾಗಿದೆ. ಹಸೀನಾ ಸರ್ಕಾರದ ವಿರುದ್ಧ ವಿದ್ಯಾರ್ಥಿಗಳು ದೇಶದಾದ್ಯಂತ ಪ್ರತಿಭಟನೆ ನಡೆಸಿದ್ದ ವೇಳೆ ಸುಮಾರು 753 ಜನ ಮೃತಪಟ್ಟು, ಸಾವಿರಾರು ಮಂದಿ ಗಾಯಗೊಂಡಿದ್ದರು. ಈ ಕ್ರಮವನ್ನು ದೇಶದ ಜನರ ಮೇಲೆ ನಡೆಸಿದ ನರಮೇಧ ಎಂದು



ಮಧ್ಯಂತರ ಸರ್ಕಾರದ ಮುಖ್ಯಸ್ಥರಾಗಿ ಮುಹಮ್ಮದ್ ಯೂನಸ್ ಹೇಳಿದ್ದರು. ನರಮೇಧ ಆರೋಪದ ಮೇಲೆ ಬಾಂಗ್ಲಾದೇಶದ ಅಂತಾರಾಷ್ಟ್ರೀಯ ಅಪರಾಧ ನ್ಯಾಯಮಂಡಳಿ ಹಸೀನಾ ಹಾಗೂ ಮಾಜಿ ಸಚಿವರು, ಸಲಹೆಗಾರರ ವಿರುದ್ಧ ಬಂಧನ ವಾರಂಟ್ ಹೊರಡಿಸಿತ್ತು. ಈ ಘಟನೆಯ ನಂತರ ಹಸೀನಾ 2024ರ ಆಗಸ್ಟ್ 5ರಂದು ಪ್ರಧಾನಿ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿ ಭಾರತಕ್ಕೆ ಪಲಾಯನ ಮಾಡಿದ್ದರು.

### ರೆಡ್ ಕಾರ್ನರ್ ನೋಟಿಸ್ ಅಂದರೆ ಏನು?

ಅಪರಾಧ ಕೃತ್ಯಗಳಲ್ಲಿ ಬೇಕಾಗಿರುವ ಮತ್ತು ಗಡೀಪಾರಿನ ಶಿಕ್ಷೆಗೆ ಗುರಿಯಾಗಿರುವ ವ್ಯಕ್ತಿಯ ಪತ್ತೆ ಮತ್ತು ಬಂಧನಕ್ಕೆ ಸಹಕಾರ ಕೋರಿ ಹೊರಡಿಸಲಾಗುವ ನೋಟಿಸ್.

# ಸಾಮಾಜಿಕ – ಶೈಕ್ಷಣಿಕ ವರದಿ; ಹೈಕಮಾಂಡ್‌ಗೆ ಸಿಎಂ ಮೊರೆ

**ಬೆಂಗಳೂರು, ಏ, 20;** ಸಾಮಾಜಿಕ, ಶೈಕ್ಷಣಿಕ ವರದಿ ಬಗ್ಗೆ ರಾಜ್ಯದಲ್ಲಿ ಭಾರೀ ಚರ್ಚೆ ಹಾಗೂ ವಿರೋಧಕ್ಕೆ ಕಾರಣವಾಗಿದ್ದು, ವಿವಾದ ಇದೀಗ ಹೈಕಮಾಂಡ್ ಅಂಗಳಕ್ಕೆ ತಲುಪಿದೆ. ವರಿಷ್ಠರ ಸಲಹೆ, ಸೂಚನೆ ಪಡೆದು ಮುಖ್ಯಮಂತ್ರಿ ಸಿದ್ದರಾಮಯ್ಯ ಮುಂದಿನ ಕ್ರಮ ತೆಗೆದುಕೊಳ್ಳುವ ಸಾಧ್ಯತೆಯಿದೆ. ವರದಿಗೆ ಸಚಿವ ಸಂಪುಟದಲ್ಲೇ ಅಪಸ್ವರ ವ್ಯಕ್ತವಾಗಿದೆ. ಒಕ್ಕಲಿಗ, ಲಿಂಗಾಯತ ನಾಯಕರು ವರದಿ ಮರುಪರಿಶೀಲಿಸ ಬೇಕೆಂದು ಆಗ್ರಹಿಸಿದ್ದಾರೆ. ಹೀಗಾಗಿ ವಿಪಕ್ಷಗಳು ಇದನ್ನೇ ಅಸ್ತ್ರವಾಗಿಸಿಕೊಂಡು ಸರ್ಕಾರದ ಕಾಲೆಳೆಯುವ ಪ್ರಯತ್ನ ಮಾಡುತ್ತಿವೆ. ಈ ಎಲ್ಲಾ ಬೆಳವಣಿಗೆ ನಡುವಲ್ಲೇ ವರದಿಯು ಕಾಂಗ್ರೆಸ್ ಹೈಕಮಾಂಡ್ ಅಂಗಳ ತಲುಪಿದೆ. ಎರಡು ಬಾರಿ ಮುಂದೂಡಲ್ಪಟ್ಟಿದ್ದ ವರದಿಯನ್ನು ಅಂತಿಮವಾಗಿ ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಮಂಡನೆ ಮಾಡಲಾಗಿದ್ದು, ವರದಿಗೆ ಸ್ವಪಕ್ಷದ ನಾಯಕರೇ ವಿರೋಧ ವ್ಯಕ್ತಪಡಿಸಿದ್ದಾರೆ. ಸಂಪುಟದಲ್ಲಿ ವರದಿ ಮಂಡನೆ ಮಾಡುವುದಕ್ಕೂ ಮುನ್ನ ಮುಖ್ಯಮಂತ್ರಿ ಸಿದ್ದರಾಮಯ್ಯ, ಲೋಕಸಭೆ ಪ್ರತಿಪಕ್ಷದ ನಾಯಕರೂ ಆಗಿರುವ ಕಾಂಗ್ರೆಸ್ ವರಿಷ್ಠ ರಾಹುಲ್ ಗಾಂಧಿ ಅವರೊಂದಿಗೆ ಚರ್ಚಿಸಿದ್ದು, ರಾಹುಲ್ ಗ್ರೀನ್ ಸಿಗ್ನಲ್ ಕೊಟ್ಟ ಬಳಿಕವೇ ಈ ವರದಿಯನ್ನು ಸಂಪುಟ ಸಭೆಯಲ್ಲಿ ಮಂಡಿಸಿದ್ದಾರೆ. ಇದೀಗ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಅಭಿಪ್ರಾಯ ಪಡೆದು ಮುಂದಿನ ಹೆಜ್ಜೆ ಇಡಲು ನಿರ್ಧರಿಸಿದ್ದಾರೆ. ಹೀಗಾಗಿ ಇದೀಗ ಸಂಪುಟ ಸಭೆಯಲ್ಲಿ ನಡೆದ ಬೆಳವಣಿಗೆಗಳ ಕುರಿತು ರಾಹುಲ್ ಗಾಂಧಿಯವರಿಗೆ ಮಾಹಿತಿ ನೀಡಲು ನಿರ್ಧರಿಸಿದ್ದಾರೆ. ಕೆಲ ಸಚಿವರು ವರದಿಗೆ ವಿರೋಧ ವ್ಯಕ್ತಪಡಿಸಿದ್ದು, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಇತರ ಹೈಕಮಾಂಡ್ ನಾಯಕರನ್ನು ಭೇಟಿ ಮಾಡಿ ದೂರು ನೀಡುವ ಸಾಧ್ಯತೆಗಳಿವೆ. ಹೀಗಾಗಿ ಇದನ್ನು ತಡೆಯಲು ಮುಖ್ಯಮಂತ್ರಿಗಳು ಸಚಿವ ಅಭಿಪ್ರಾಯಗಳನ್ನು ಕಾಗದದ ಮೇಲೆ ಸಂಗ್ರಹಿಸಿ ಹೈಕಮಾಂಡ್ಗೆ ಕಳುಹಿಸಲಿದ್ದಾರೆ.

ಲಿಂಗಾಯತ ಮತ್ತು ಒಕ್ಕಲಿಗ ಸಮುದಾಯದ ಸಚಿವರುಗಳು ಜಾತಿ ಗಣತಿಗೆ ಆಕ್ಷೇಪಿಸಿ ಸಂಪುಟದಲ್ಲಿ ಧ್ವನಿ ಎತ್ತಿದ್ದರು. ಹಿಂದುಳಿದ, ಅಲ್ಪಸಂಖ್ಯಾತ, ದಲಿತ ಸಮಾಜದಿಂದ ಬಂದಿರುವ ಸಚಿವರುಗಳು ವರದಿ ಪರ ವಹಿಸಿದ್ದರು. ತಟಸ್ಥ ನಿಲುವು ತಳೆದವರೂ ಇದ್ದರು. ಈ ಎಲ್ಲ ಅಂಶಗಳ ಬಗ್ಗೆಯೂ ಹೈಕಮಾಂಡ್ಗೆ ವಿಸ್ತ್ರುತವಾದ ಮಾಹಿತಿ ನೀಡಲಿದ್ದಾರೆ. ಲಿಂಗಾಯತರು ಮತ್ತು ವೀರಶೈವರಿಗೆ ಪ್ರತ್ಯೇಕ ಧರ್ಮದ ಸ್ಥಾನಮಾನ ನೀಡುವ ಸಿದ್ದರಾಮಯ್ಯ ಪ್ರಸ್ತಾವನೆಯಿಂದಾಗಿ 2018ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಸೋಲು ಅನುಭವಿಸಿದ ವಿಷಯ ಇನ್ನೂ ಕಾಂಗ್ರೆಸ್ ವಲಯದಲ್ಲಿ ದುಸ್ವಪ್ನವಾಗಿ ಕಾಡುತ್ತಿದೆ. ಸಂಪುಟ ಸಭೆಯಲ್ಲಿನ ಚರ್ಚೆಯ ಬೆನ್ನಲ್ಲೇ ಸಿದ್ದರಾಮಯ್ಯ ಅವರು, ರಾಜ್ಯದ 20-30 ಕ್ಷೇತ್ರಗಳನ್ನು ಹೊರತುಪಡಿಸಿ, ಉಳಿದ ಸ್ಥಾನಗಳು ಅಹಿಂದ ಮತಗಳಿಂದ ನಿರ್ಧರಿಸಲ್ಪಡುತ್ತವೆ ಎಂಬುದನ್ನು ಸಾಬೀತುಪಡಿಸಲು ಪ್ರತಿಯೊಂದು ವಿಧಾನಸಭಾ ಕ್ಷೇತ್ರದ ಜಾತಿ ಜನಗಣತಿ ವರದಿಯನ್ನು ವರಿಷ್ಠರಿಗೆ ಸಲ್ಲಿಸಲು ಮುಂದಾಗಿದ್ದಾರೆ. ವರದಿ ಬಳಿಕ 2018 ರಲ್ಲಿ ಕಾಂಗ್ರೆಸ್ ಸೋಲಿಗೆ ವೀರಶೈವ ಪ್ರತ್ಯೇಕ ಧರ್ಮದ ಸ್ಥಾನಮಾನದ ವಿಷಯವೇ ಕಾರಣ ಎಂಬ ಗ್ರಹಿಕೆಯನ್ನು ನಿವಾರಿಸಲು ಸಿದ್ದರಾಮಯ್ಯ ಕಾರ್ಯತಂತ್ರ ರೂಪಿಸಿದ್ದಾರೆ. ಜಾತಿ ಗಣತಿ ವಿಚಾರವಾಗಿ ಕಾಂಗ್ರೆಸ್ ಪಕ್ಷದಲ್ಲೇ ಭಿನ್ನ ಅಭಿಪ್ರಾಯಗಳಿವೆ. ವರದಿಯಲ್ಲಿರುವ ಅಂಕಿ-ಅಂಶಗಳ ಕುರಿತಾಗಿ ಕಾಂಗ್ರೆಸ್ ಪಕ್ಷದ ಕೆಲವು ಸಚಿವರು ಹಾಗೂ ಶಾಸಕರಲ್ಲಿ ಗೊಂದಲಗಳಿದ್ದು, ಅದನ್ನು ಬಗೆಹರಿಸುವುದು ಸಿದ್ದರಾಮಯ್ಯ ಅವರಿಗೆ ಸವಾಲಾಗಿದೆ. ಸಚಿವರಾದ ಡಾ.ಜಿ.ಪರಮೇಶ್ವರ್, ಎಸ್. ಮಹದೇವಪ್ಪ, ಭೈರತಿ ಸುರೇಶ್, ಶಿವರಾಜ್ ತಂಗಡಗಿ, ಪ್ರಿಯಾಂಕ್ ಖರ್ಗೆ ಸೇರಿದಂತೆ ಬಹುತೇಕ ಸಚಿವರು ವರದಿಯ ಪರವಾಗಿದ್ದಾರೆ. ಲಿಂಗಾಯತ ಮತ್ತು ಒಕ್ಕಲಿಗ ಸಮುದಾಯದ ಹಿನ್ನೆಲೆಯ ಸಚಿವರು ಮತ್ತು ಶಾಸಕರ ಅಭಿಪ್ರಾಯಗಳು ಕುತೂಹಲಕ್ಕೆ ಕಾರಣವಾಗಿದೆ. ಶ್ಯಾಮನೂರು ಶಿವಶಂಕರಪ್ಪ ಅವರ ವಿರೋಧ ಸಿಎಂ ಸಿದ್ದರಾಮಯ್ಯ ಅವರಿಗೆ ಬಹುದೊಡ್ಡ ಸವಾಲಾಗಿದೆ. ಅಖಿಲ ಭಾರತ ವೀರಶೈವ ಮಹಾಸಭಾದ ಅಧ್ಯಕ್ಷ ಶಾಮನೂರು ಶಿವಶಂಕರಪ್ಪ ಅವರು ವರದಿಗೆ ನೇರವಾಗಿ ವಿರೋಧ ವ್ಯಕ್ತಪಡಿಸಿದ್ದಾರೆ. ಶಾಮನೂರು ಅವರ ಹೇಳಿಕೆಯನ್ನೇ ಮುಂದಿಟ್ಟುಕೊಂಡು ಕಾಂಗ್ರೆಸ್ ಸರ್ಕಾರದ ನಡೆಯ ವಿರುದ್ಧ ಬಿಜೆಪಿ ವಾಗ್ದಾಳಿ ನಡೆಸುತ್ತಿದೆ. ಅಲ್ಲದೆ ಹೊಸ ಗಣತಿಯನ್ನು ನಡೆಸಲು ಬಿಜೆಪಿ ನಾಯಕರು ಆಗ್ರಹಿಸುತ್ತಿದ್ದಾರೆ. ಈ ನಿಟ್ಟಿನಲ್ಲಿ ಇದನ್ನು ಬಗೆಹರಿಸುವುದು ಸವಾಲಾಗಿದೆ. ಜಾತಿ ಗಣತಿ ವಿಚಾರವಾಗಿ ಡಿಸಿಎಂ ಡಿ. ಕೆ.ಶಿವಕುಮಾರ್ ಎಚ್ಚರಿಕೆಯ ನಡೆಯನ್ನು ಅನುಸರಿಸುತ್ತಿದ್ದಾರೆ. ಡಿ.ಕೆ.ಶಿವಕುಮಾರ್ ಜಾತಿ ಗಣತಿಯನ್ನು ವಿರೋಧವೂ ಮಾಡಿಲ್ಲ, ಬೆಂಬಲವನ್ನೂ ನೀಡಿಲ್ಲ. ಹೇಳಿಕೆಗಳನ್ನು ನೀಡುವಾಗಲೂ ಅವರು ಎಚ್ಚರಿಕೆ ಹೆಜ್ಜೆ ಇಡುತ್ತಿದ್ದಾರೆ. ಜಾತಿ ಗಣತಿಗೆ ಶಾಮನೂರು ವಿರೋಧದ ಬಗ್ಗೆ ಮಾತನಾಡುವ ವೇಳೆ ವೀರಶೈವ ಮಹಾಸಭಾದವರು ಅವರ ಸಮಾಜ ರಕ್ಷಣೆ ಮಾಡಿಕೊಳ್ಳಲು ಹೊರಟಿದ್ದು, ಅವರನ್ನು ನಾವು ಏಕೆ ಟೀಕೆ ಮಾಡಬೇಕು?. ಪ್ರಜಾಪ್ರಭುತ್ವ, ಸಂವಿಧಾನದ ಪ್ರಕಾರವಾಗಿ ಅವರುಗಳು ತಮ ನಿಲುವುಗಳನ್ನು ಪ್ರತಿಪಾದನೆ ಮಾಡಲಿ ಎಂದು ಹೇಳುವ ಮೂಲಕ ಪರೋಕ್ಷವಾಗಿ ತಮ ಅಸಮಾಧಾನವನ್ನು ಇಲ್ಲಿ ಹೊರ ಹಾಕಿರುವುದು ಸ್ಪಷ್ಟವಾಗುತ್ತಿದೆ.

### ಒಕ್ಕಲಿಗರ ಸಚಿವರು, ಶಾಸಕರ ನಡೆ ಕುತೂಹಲ:

ಜಾತಿ ಗಣತಿ ಕುರಿತಾಗಿ ಒಕ್ಕಲಿಗ ಸಮುದಾಯದ ಇತರ ಶಾಸಕರು ಹಾಗೂ ಸಚಿವರ ನಡೆಯೂ ಕುತೂಹಲಕಾರಿಯಾಗಿದೆ. ಜಾತಿ ಗಣತಿ ಕುರಿತಾಗಿ ಈಗಾಗಲೇ ಹೇಳಿಕೆ ನೀಡಿರುವ ಕಾಂಗ್ರೆಸ್ ಶಾಸಕ ಡಾ. ಎಚ್.ಡಿ ರಂಗನಾಥ್ ವೈಜ್ಞಾನಿಕವಾಗಿ ಮತ್ತೆ ಜಾತಿ ಗಣತಿ ನಡೆಯಲಿ. ಜಾತಿ ಗಣತಿ ಬಹಿರಂಗವಾಗಿಲ್ಲ. ಆದರೆ ಸಣ್ಣ ಪುಟ್ಟ ಲೋಪಗಳು ಇರುವುದು ಕಂಡು ಬಂದಿದೆ. ಹೀಗಿರುವಾಗ ವೈಜ್ಞಾನಿಕವಾಗಿ ಮತ್ತೆ ಜಾತಿ ಗಣತಿ ಮಾಡಲಿ ಎಂದು ಆಗ್ರಹಿಸಿದ್ದಾರೆ.

### ಎಂ.ಬಿ. ಪಾಟೀಲ್, ಖಂಡ್ರೆ ನಡೆ ಏನು?

ಸಿದ್ದರಾಮಯ್ಯ ಸರ್ಕಾರದ ಪ್ರಭಾವಿ ಸಚಿವರಾಗಿರುವ ಎಂ.ಬಿ. ಪಾಟೀಲ್ ಹಾಗೂ ಈಶ್ವರ್ ಖಂಡ್ರೆ ಯಾವ ನಡೆಯನ್ನು ಅನುಸರಿಸುತ್ತಾರೆ ಎಂಬುವುದು ಕೂಡಾ ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ. ಸಚಿವ ಸಂಪುಟ ಸಭೆಯ ಸಂದರ್ಭದಲ್ಲೂ ಇಬ್ಬರು ನಾಯಕರು ಯಾವುದೇ ಸ್ಪಷ್ಟ ಹೇಳಿಕೆಯನ್ನು ನೀಡಿಲ್ಲ. ಇದೀಗ ಜಾತಿ ಗಣತಿ ವರದಿಯ ಅಂಕಿ- ಅಂಶಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ. ಹಾಗೂ ಚರ್ಚೆಗೂ ಕಾರಣವಾಗುತ್ತಿದೆ.

### ಪುನರ್ ಪರಿಶೀಲನೆಗೆ ಒತ್ತಾಯ ಜಾತಿ ಗಣತಿ ವರದಿ ಬಿಡುಗಡೆಗೆ

ಪರ-ವಿರೋಧ ವ್ಯಕ್ತವಾಗಿದೆ. ಕಾಂತರಾಜು ವರದಿಯನ್ನು ಒಕ್ಕಲಿಗ ಸಮುದಾಯದ ನಾಯಕರು ವಿರೋಧಿಸಿದ್ದಾರೆ. ಇತ್ತ ಕಾಂಗ್ರೆಸ್ ಹೈಕಮಾಂಡ್ ಜಾತಿ ಗಣತಿ ವರದಿಗೆ ಬೆಂಬಲಿಸಿದ್ದು, ವರದಿ ಬಿಡುಗಡೆಗೆ ಸೂಚಿಸಿದೆ. ಆದರೆ, ಇತ್ತ, ಸ್ವಸಮುದಾಯ ಜಾತಿ ಗಣತಿ ವರದಿಯನ್ನು ತೀವ್ರವಾಗಿ ವಿರೋಧಿಸುತ್ತಿದೆ. ಇದರಿಂದ ಉಪಮುಖ್ಯಮಂತ್ರಿ, ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ಗೆ ಈ ಜಾತಿ ಗಣತಿ ವರದಿಯನ್ನು ನುಂಗುವುದಕ್ಕೆ ಆಗದೇ ಉಗುಳುವುದಕ್ಕೆ ಆಗದ ಪರಿಸ್ಥಿತಿಯಲ್ಲಿ ಸಿಲುಕೊಂಡಿದ್ದು, ಮುಂದೆ ಡಿಕೆಶಿ ಯಾವ ಕಡೆ ಹೆಜ್ಜೆ ಇಡುತ್ತಾರೆ ಎನ್ನುವುದು ಕುತೂಹಲಕ್ಕೆ ಕಾರಣವಾಗಿದೆ.

# ಡಾ.ಎಚ್.ನರಸಿಂಹಯ್ಯ ವಿಜ್ಞಾನ, ಶೈಕ್ಷಣಿಕ, ಸಾಂಸ್ಕೃತಿಕ – ಪ್ರವಾಸೋದ್ಯಮ ಅಭಿವೃದ್ಧಿ ಪ್ರಾಧಿಕಾರದ ಅಭಿವೃದ್ಧಿಗೆ ಸರ್ಕಾರದಿಂದ ನೆರವು



**ಬೆಂಗಳೂರು, ಏಪ್ರಿಲ್ 20:** ಡಾ. ಎಚ್. ನರಸಿಂಹಯ್ಯ ವಿಜ್ಞಾನ, ಶೈಕ್ಷಣಿಕ, ಸಾಂಸ್ಕೃತಿಕ ಹಾಗೂ ಪ್ರವಾಸೋದ್ಯಮ ಅಭಿವೃದ್ಧಿ ಪ್ರಾಧಿಕಾರದ ಅಭಿವೃದ್ಧಿಗೆ ಸರ್ಕಾರದ ವತಿಯಿಂದ ಅಗತ್ಯ ನೆರವು ನೀಡಲಾಗುವುದು ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್ ಎಸ್ ಬೋಸರಾಜು ತಿಳಿಸಿದರು.

ಶನಿವಾರ ಡಾ. ಎಚ್. ನರಸಿಂಹಯ್ಯ ಉಪಪ್ರಾದೇಶಿಕ ವಿಜ್ಞಾನ ಕೇಂದ್ರಕ್ಕೆ ಭೇಟಿ ನೀಡಿದ ಅವರು ಕಾಂಗ್ರೆಸ್ ಸರ್ಕಾರ ಈಗಾಗಲೇ ಬಜೆಟ್ ಅಧಿವೇಶನದಲ್ಲಿ ಡಾ. ಎಚ್. ನರಸಿಂಹಯ್ಯ ವಿಜ್ಞಾನ, ಶೈಕ್ಷಣಿಕ, ಸಾಂಸ್ಕೃತಿಕ ಹಾಗೂ ಪ್ರವಾಸೋದ್ಯಮ ಅಭಿವೃದ್ಧಿ ಪ್ರಾಧಿಕಾರದ ರಚನೆಗೆ ಮಸೂದೆ ಮಂಡಿಸಿ, ಉಭಯ ಸದನದಲ್ಲಿ ಅಂಗೀಕರಿಸಿದೆ. ಇದಕ್ಕೆ ರಾಜ್ಯಪಾಲರು ಸಹಿ ಹಾಕುವ ಮೂಲಕ ವಿದೇಯಕ ಅಂಗಿಕರಿಸಲಾಗಿದೆ. ಶೀಘ್ರದಲ್ಲೇ ಸುಮಾರು 136 ಎಕರೆ ಜಾಗದಲ್ಲಿ ಪ್ರಾಧಿಕಾರ ರಚನೆಯಾಗಲಿದೆ. ಈ ಪ್ರಾಧಿಕಾರ ರಚನೆಯಿಂದ ಈ ಭಾಗದ ಸರ್ವತೋಮುಖ ಅಭಿವೃದ್ಧಿಯ ಜೊತೆಗೆ ಪ್ರವಾಸೋದ್ಯಮಕ್ಕೆ ಹೆಚ್ಚಿನ ಉತ್ತೇಜನ ನೀಡಲಾಗುವುದು ಎಂದರು.

ಮಾನವ ಕಲ್ಯಾಣಕ್ಕಾಗಿ ವಿಜ್ಞಾನ ಮತ್ತು ತಂತ್ರಜ್ಞಾನವನ್ನು ಜನಪ್ರಿಯಗೊಳಿಸುವುದು, ಸ್ಥಳೀಯ ಸಂಸ್ಕೃತಿ ಪರಂಪರೆಯನ್ನು ರಕ್ಷಿಸುವುದು, ಸಮಾಜ ಅಧ್ಯಯನಗಳು, ಕಲೆ ಮತ್ತು ಸಂಸ್ಕೃತಿ ಒಳಗೊಂಡಂತೆ ಇತರೆ ಶೈಕ್ಷಣಿಕ ನವೀನಾತ್ಮಕ ಚಟುವಟಿಕೆಗಳಿಗಾಗಿ ವೇದಿಕೆಯನ್ನು ಕಲ್ಪಿಸುವುದು ಈ ಪ್ರಾಧಿಕಾರ ಮುಖ್ಯ ಉದ್ದೇಶವಾಗಿರಲಿದೆ ಎಂದು ಸಚಿವರು ತಿಳಿಸಿದರು.

ಈ ಸಂದರ್ಭದಲ್ಲಿ ಮಾಜಿ ಸಚಿವರಾದ ಶಿವಶಂಕರ್ ರೆಡ್ಡಿ ಅವರು ಉಪಸ್ಥಿತರಿದ್ದರು, ಸಚಿವರು ವಿಜ್ಞಾನ ಕೇಂದ್ರ ನಿರ್ಮಾಣ ಹಾಗೂ ಪ್ರಾಧಿಕಾರ ರಚನೆಯಲ್ಲಿ ಶಿವಶಂಕರ್ ರೆಡ್ಡಿ ಅವರ ಪಾತ್ರವನ್ನು ಸ್ಮರಿಸಿದರು.

ಮುಂದಿನ ದಿನಗಳಲ್ಲಿ ಸರ್ಕಾರ ಪ್ರಾಧಿಕಾರದ ಅಭಿವೃದ್ಧಿಗೆ ಆಗತ್ಯ ಸಹಕಾರ ನೀಡಿ, ಪ್ರಾಧಿಕಾರವನ್ನು ರಾಜ್ಯದಲ್ಲೇ ಮಾದರಿ ಕೇಂದ್ರವನ್ನಾಗಿ ಅಭಿವೃದ್ಧಿ ಪಡಿಸಲಾಗುವುದು ಎಂದರು.

### ಶಿಕ್ಷಣ, ಸಂಘಟನೆ , ಹೋರಾಟ ಶೋಷಿತವರ್ಗಗಳಿಗೆ ಮೂಲಮಂತ್ರವಾಗಬೇಕು

# ಶಿಕ್ಷಣದಿಂದ ಗುಲಾಮಗಿರಿ ತೊಡೆದು ಸ್ವಾಭಿಮಾನದ ಬದುಕು ಸಾಧ್ಯ-ಮುಖ್ಯಮಂತ್ರಿ ಸಿದ್ದರಾಮಯ್ಯ

**ಬೆಳಗಾವಿ(ಚಿಕ್ಕೋಡಿ), ಏಪ್ರಿಲ್ 20 :** ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ರವರು ತಿಳಿಸಿದಂತೆ ಶಿಕ್ಷಣ, ಸಂಘಟನೆ , ಹೋರಾಟಗಳು ಶೋಷಿತವರ್ಗಗಳಿಗೆ ಮೂಲಮಂತ್ರವಾಗಬೇಕು. ಆಗಮಾತ್ರ ಗುಲಾಮಗಿರಿಯನ್ನು ನೀಗಿಸಿ, ಸ್ವಾಭಿಮಾನದ ಬದುಕು ಕಟ್ಟಿಕೊಳ್ಳಲು ಸಾಧ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ಕರ್ನಾಟಕ ರಾಜ್ಯ ಗೊಲ್ಲ(ಯಾದವ) ಹಣಬರ ಸಂಘದ ಶತಮಾನೋತ್ಸವ ಹಾಗೂ ಶ್ರೀ ಯಾದವಾನಂದ ಸ್ವಾಮಿಗಳ 16ನೇ ಪಟ್ಟಾಭಿಷೇಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಯಾದವ ಸಂಘಕ್ಕೆ ನೂರು ವರ್ಷಗಳು ಸಂದಿದ್ದು, ಸಮಾಜವನ್ನು ಸಂಘಟಿಸಿ ಮುಖ್ಯವಾಹಿನಿಗೆ ತರಲು ಸಹಕಾರಿಯಾಗಿದೆ. ಎಲ್ಲ ಜಾತಿಗಳು ತಮ್ಮ ಕಸುಬಿನಿಂದಲೇ ನಿರ್ಮಾಣವಾಗಿವೆ. ಸಮಾಜವನ್ನು ವಿಭಜಿಸಲು, ಕಸುಬಿನ ಆಧಾರದಲ್ಲಿ ಜಾತಿಯೆಂದು ಕರೆಯಲಾಯಿತು. ಗೊಲ್ಲ ಜಾತಿಯಲ್ಲಿ, ಕಾಡುಗೊಲ್ಲ, ಅಡವಿಗೊಲ್ಲ ಸೇರಿದಂತೆ ಹಲವು ಉಪಜಾತಿಗಳಿವೆ ಎಂದರು.



**ಬಹುಸಂಖ್ಯಾತರು ಅಕ್ಷರಸಂಸ್ಕೃತಿಯಿಂದ ವಂಚಿತರು**

ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ರವರು ದೀನದಲಿತರು, ಹಿಂದುಳಿದ ವರ್ಗದವರು, ಅಲ್ಪಸಂಖ್ಯಾತರು, ಅವಕಾಶವಂಚಿತರು ಸಮಾಜದಲ್ಲಿ ಏಳಿಗೆಯನ್ನು ಕಾಣಲು ಶಿಕ್ಷಣ ಅತ್ಯಗತ್ಯ. ಶಿಕ್ಷಣ, ಸಂಘಟನೆ , ಹೋರಾಟ ಎಂಬ ಮೂರುಮಂತ್ರಗಳನ್ನು ಶೋಷಿತವರ್ಗಗಳಿಗೆ ಬೋಧಿಸಿದ್ದಾರೆ. ಸಮಾಜದಲ್ಲಿ ಅಸಮಾನತೆ ಸಾಕಷ್ಟಿದೆ. ಬಹುಸಂಖ್ಯಾತರು ಅಕ್ಷರಸಂಸ್ಕೃತಿಯಿಂದ ವಂಚಿತರಾಗಿದ್ದಾರೆ. ಮನುಸ್ಮೃತಿಯ ಪಾಲನೆಯಿಂದ, ಸಮಾಜದಲ್ಲಿ ತಂದು, ಬ್ರಾಹ್ಮಣರು, ವೈಶ್ಯರು, ಕ್ಷತ್ರಿಯರು ಹಾಗೂ ಶೂದ್ರರು ಎಂದು ಚತುರ್ವರ್ಣ ಪದ್ಧತಿಯನ್ನು ಜಾರಿಗೆ ತಂದು, ಶೂದ್ರರನ್ನು ಶಿಕ್ಷಣದ ಅವಕಾಶವನ್ನು ನೀಡಲಾಗಿರಲಿಲ್ಲ. ಆದ್ದರಿಂದ ಸಮಾನ ಅವಕಾಶ ಹಾಗೂ ಶಿಕ್ಷಣ ಪಡೆದ ವರ್ಗಗಳಷ್ಟೇ ಸಮಾಜದಲ್ಲಿ ಉನ್ನತಿಯನ್ನು ಕಾಣಲು ಸಾಧ್ಯವಾಯಿತು ಎಂದರು.

**ಸಮಾನತೆಯಿಂದ ಸಮಾಜದ ಅಭಿವೃದ್ಧಿ**

ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಅಸಮಾನತೆಯಿರುವ ವೈರುಧ್ಯದ ಸಮಾಜದಲ್ಲಿ ಕಾಲಿಡುತ್ತಿದ್ದೇವೆ ಎಂದು ಡಾ.ಬಿ.ಆರ್. ಅಂಬೇಡ್ಕರ್ ತಿಳಿಸಿದ್ದರು.

ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಸಮಾನತೆ ಬಂದಾಗ ಮಾತ್ರ ಸಮಾಜದ ಅಭಿವೃದ್ಧಿ ಸಾಧ್ಯ. ಸಮಾಜದಲ್ಲಿ ಅವಕಾಶ ವಂಚಿತರಿಗೆ, ಬಡವರಿಗೆ, ಶೋಷಿತರಿಗೆ ಸಮಾನ ಅವಕಾಶ ಹಾಗೂ ಸಮಾನತೆಯನ್ನು ಪಡೆಯಲು ಹೋರಾಟ ಮಾಡಬೇಕು ಎಂದರು.

1918ರಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ರವರು ಸರ್ಕಾರಿ ಉದ್ಯೋಗ ಹಾಗೂ ಶಿಕ್ಷಣದಲ್ಲಿ ವಿವಿಧ ಸಮುದಾಯಗಳಿಗೆ ಪ್ರಾತಿನಿಧ್ಯ ನೀಡುವ ಸಂಬಂಧ ಮಿಲ್ಲರ್ ಆಯೋಗವನ್ನು ರಚಿಸಿದರು. ಬ್ರಾಹ್ಮಣೇತರ ಸಮುದಾಯಗಳಿಗೆ ಶೇ.75 ರಷ್ಟು ಉದ್ಯೋಗ ಹಾಗೂ ಶಿಕ್ಷಣದಲ್ಲಿ ಮೀಸಲಾತಿಯನ್ನು ನೀಡಲಾಯಿತು. ನಂತರ ಮೀಸಲಾತಿ ಸೌಲಭ್ಯಕ್ಕಾಗಿ ಹಲವು ಆಯೋಗಗಳನ್ನು ರಚಿಸಲಾಗಿದೆ. ಶಿಕ್ಷಣ ಪಡೆಯದಿದ್ದರೆ ಗುಲಾಮಗಿರಿ ಹೆಚ್ಚಲಿದ್ದು, ಸ್ವಾಭಿಮಾನದ ಬದುಕು ಸಾಧ್ಯವಾಗುವುದಿಲ್ಲ. ಶಿಕ್ಷಣ ಪಡೆದಿದ್ದರಿಂದ ಮಾತ್ರ ಮುಖ್ಯಮಂತ್ರಿಯ ಹುದ್ದೆಗೇರಲು ಸಾಧ್ಯವಾಯಿತು ಎಂದು ಮುಖ್ಯಮಂತ್ರಿಗಳು ತಮ್ಮ ಅನುಭವವನ್ನು ಹಂಚಿಕೊಳ್ಳುತ್ತಾ, ಶಿಕ್ಷಣದ ಮಹತ್ವವನ್ನು ಸಭಿಕರಿಗೆ ವಿವರಿಸಿದರು.

**ಆರ್ಥಿಕ ಸಹಾಯ ನೀಡಲು ಸಿಎಂ ಭರವಸೆ**

ಗೊಲ್ಲ ಸಮಾಜದವರೂ ಸೇರಿದಂತೆ ಎಲ್ಲ ತಳಸಮುದಾಯದವರು ಉತ್ತಮ ಶಿಕ್ಷಣ ಪಡೆದು ವೈದ್ಯರು, ಐಪಿಎಸ್-ಐಎಎಸ್ ಅಧಿಕಾರಿಗಳು, ವಕೀಲರಾಗಬಹುದು. ಯಾದವ ಸಮುದಾಯಕ್ಕೆ ಅಭಿವೃದ್ಧಿ ನಿಗಮ ರಚಿಸುವ ಬೇಡಿಕೆಇದೆ. ಸಮಾಜದ ಮುಖಂಡರೊಂದಿಗೆ ಸಭೆ ನಡೆಸಿ, ಆರ್ಥಿಕ ಸಹಾಯ ನೀಡುವ ಬಗ್ಗೆ ತೀರ್ಮಾನ ಕೈಗೊಳ್ಳಲಾಗುವುದು. ಸಮಾಜದ ಸಂಘಟನೆಯತ್ತ ಯಾದವ ಸಮುದಾಯದ ಮುಖಂಡರು ಗಮನಹರಿಸಬೇಕು ಎಂದರು.




ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ವಕ್ಫ್ ತಿದ್ದುಪಡಿ ಕಾಯ್ದೆ ವಿರೋಧಿಸಿ ಮುಸ್ಲಿಂ ಸಮುದಾಯದ ಸದಸ್ಯರು ಭಾನುವಾರ ಪ್ರತಿಭಟನೆ ನಡೆಸಿದರು.

### ಜಾತ್ಯತೀತ ಸಮಾಜದಲ್ಲಿ ಜಾತಿಗಳ ನಡುವೆ ವಿಭಜನೆ

# ಸಾಮಾಜಿಕ, ಶೈಕ್ಷಣಿಕ ವರದಿ ಬಗ್ಗೆ ಹರಿಹರಪುರ ಮಠದ ಸ್ವಾಮೀಜಿ ವಿಷಾದ

**ಬೆಂಗಳೂರು, ಏ.20–** ಸಂವಿಧಾನ ರಕ್ಷಣೆ, ಜಾತ್ಯತೀತ ಸಿದ್ಧಾಂತಗಳನ್ನು ಪ್ರತಿಪಾದಿಸುವ ಸಮಾಜದಲ್ಲಿ ಜಾತಿ ಆಧಾರದ ಮೇಲೆ ಸಮಾಜ ವಿಭಜಿಸಲಾಗುತ್ತಿದೆ ಎಂದು ಹರಿಹರಪುರ ಮಠದ ಶ್ರೀ ಸ್ವಯಂಪ್ರಕಾಶ ಸಚ್ಚಿದಾನಂದ ಸರಸ್ವತಿ ಸ್ವಾಮೀಜಿ ಇಂದಿಲ್ಲಿ ಸಾಮಾಜಿಕ, ಶೈಕ್ಷಣಿಕ ವರದಿ ಕುರಿತು ವಿಷಾದ ವ್ಯಕ್ತಪಡಿಸಿದ್ದಾರೆ.

ಶ್ರೀ ತಿರುಪತಿ ತಿರುಮಲ ಪಾದಯಾತ್ರಿಗಳ ಶ್ರೀ ತಿರುಪತಿ ತಿರುಮಲ ಸೇವಾ ಟ್ರಸ್ಟ್ ನಿಂದ ಜಯನಗರದ 1ನೇ ಬ್ಲಾಕ್ ನ ಅಯೋಧ್ಯಾ ಕಲ್ಯಾಣ ಮಂಟಪದಲ್ಲಿ 'ನರನ ನಡಿಗೆ ನಾರಾಯಣನೆಡೆಗೆ' ಎಂಬ ಘೋಷವಾಕ್ಯದಡಿ 48 ನೇ ವರ್ಷದ ಮಂಡಲೋತ್ಸವದಲ್ಲಿ ಮಾತನಾಡಿದ ಅವರು, ಜಾತಿ ಜಾತಿಗಳ ನಡುವೆ ಸಂಘರ್ಷ ಎದುರಾಗಿದೆ. ಜಾತಿಗಿಂತ ಧರ್ಮ ದೊಡ್ಡದು ಎಂದುಕೊಂಡರೆ ಮಾತ್ರ ಭಾರತ ಉಳಿಯುತ್ತದೆ. ಜಾತಿ ಎನ್ನುವುದು ವೃಕ್ಷದ ಕವಲು. ಧರ್ಮ ತಾಯಿ ಬೇರು. ಬೇರಿಗೆ ನೀರುಣಿಸದಿದ್ದರೆ ಎಲ್ಲಾ ಕೊಂಬೆಗಳು ಒಣಗುತ್ತವೆ. ಜಾತಿ ಮೇಲಿನ ವ್ಯಾಮೋಹದಲ್ಲಿ ಶೇ 10 ರಷ್ಟು ಧರ್ಮದ ಬಗ್ಗೆ ನಂಬಿಕೆ ಇಟ್ಟುಕೊಂಡಿದ್ದರೆ ಧರ್ಮಕ್ಕೆ ಇಂತಹ ದುಸ್ಥಿತಿ ಬರುತ್ತಿರಲಿಲ್ಲ ಎಂದರು. ಬದುಕನ್ನು ವಾಸ್ತವಿಕವಾಗಿ ನೋಡುವ ಪರಿಪಾಠ ಬೆಳೆಸಿಕೊಳ್ಳಬೇಕು. ಬದುಕು ಅನಿಶ್ಚಿತತೆಯ ಸರಮಾಲೆಯಾಗಿದ್ದು, ಭಗವದ್ ಭಕ್ತಿಯನ್ನು ಜೀವನದಲ್ಲಿ ದೃಢವಾಗಿ ಬೆಳೆಸಿಕೊಳ್ಳಲು ಜೀವನ ಎಂದರೆ ಏನು ಎಂಬುದನ್ನು ಮೊದಲು ತಿಳಿದುಕೊಳ್ಳಬೇಕು. ವ್ಯಾಪಾರಿ ಮನಸ್ಥಿತಿ, ಫಲಪ್ರದ ಮನಸ್ಥಿತಿ ಹೊಂದಿರುವವರಲ್ಲಿ ನೈಜ ಭಕ್ತಿ ಸಿಗುವುದಿಲ್ಲ. ಜೀವನ ನಿರಂತರ ಪಯಣವಾಗಿದ್ದು, ನಮ್ಮ ಯಾನದ ಕೊನೆಯ ಹಂತ ಗೊತ್ತಿಲ್ಲ. ಭಾರತೀಯ ಸಂಸ್ಕೃತಿ ಏಕರೂಪದಿಂದ ಕೂಡಿಲ್ಲ. ಪ್ರತಿಯೊಬ್ಬರೂ ಕೈಜೋಡಿಸಿದರೆ ಮಾತ್ರ ಸಂಸ್ಕೃತಿ ಉಳಿಸಲು ಸಾಧ್ಯ. ನಮ್ಮ ಒಕ್ಕೂಟ ವ್ಯವಸ್ಥೆಯ ಮೂಲಕ ಏಕತೆಯನ್ನು ಬಲಪಡಿಸಿ ಭಾರತೀಯ ಸಂಸ್ಕೃತಿಯನ್ನು ಸಂರಕ್ಷಿಸಿ ಕೊಳ್ಳಬೇಕು. ಸಂತರು ಒಂದಾದರೆ ಮಾತ್ರ ಸಮಾಜ ಒಂದಾಗುತ್ತದೆ. ಈ ನಿಟ್ಟಿನಲ್ಲಿ ಪ್ರಯತ್ನಗಳು ನಡೆಯುತ್ತಿದ್ದು, ಎರಡು ತಿಂಗಳಲ್ಲಿ ವಿಸ್ಮಯ ಸೃಷ್ಟಿಯಾಗಲಿದೆ ಎಂದರು.



ಬಿಜೆಪಿ ಮುಖಂಡ ಆರ್, ಜಯದೇವ, ಆರ್. ಎಸ್.ಎಸ್ ಮುಖಂಡ ಡಾ. ಎಂ. ಜಯಪ್ರಕಾಶ್ ಮತ್ತಿತರರು ಉಪಸ್ಥಿತರಿದ್ದರು.

# ಜಾತಿಗಣತಿ ವರದಿಯನ್ನು ಬಿಜೆಪಿ ಸರ್ಕಾರವೇ ಮಾಡಬಹುದಾಗಿತ್ತು: ಲಕ್ಷ್ಮೀ ಹೆಬ್ಬಾಳ್ಕರ್ ಪ್ರಶ್ನೆ

ಬೆಂಗಳೂರು, ಏ.20– ರಾಜ್ಯ ರಾಜಕೀಯ ಹಾಗೂ ಸಾಮಾಜಿಕ ವಲಯದಲ್ಲಿ ತೀವ್ರ ಚರ್ಚೆಯಾಗುತ್ತಿರುವ ಜಾತಿ ಗಣತಿ ವರದಿಯನ್ನು ಬೊಮ್ಮಾಯಿ, ಯಡಿಯೂರಪ್ಪ ತಿರಸ್ಕಾರ ಮಾಡಬಹುದಿತ್ತು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದ್ದಾರೆ.



ಬೆಳಗಾವಿಯಲ್ಲಿಂದು ಜಾತಿ ಗಣತಿ ವರದಿ ಕುರಿತು ಪ್ರತಿಕ್ರಿಯಿಸಿದ ಅವರು, ಆಯೋಗದ ಅಧ್ಯಕ್ಷ, ಸದಸ್ಯ ನೇಮಕ ಮಾಡಿದ್ದು ಕುಮಾರಸ್ವಾಮಿ, ಯಡಿಯೂರಪ್ಪ, ಬೊಮ್ಮಾಯಿ ಸರ್ಕಾರ. ಸದಸ್ಯರನ್ನು ನೇಮಕ ಮಾಡಿದ್ದು ಬಿಜೆಪಿ ಸರ್ಕಾರ. ಜಾತಿ ಗಣತಿಯನ್ನು ಅಧ್ಯಯನ ಮಾಡಿದ್ದು ಬಿಜೆಪಿ. ಬೊಮ್ಮಾಯಿ, ಯಡಿಯೂರಪ್ಪ ಅವರೇ ವರದಿ ತಿರಸ್ಕಾರ ಮಾಡಬಹುದಿತ್ತು, ಆದರೆ ಹಾಗೆ ಮಾಡದೆ ಈಗ ಬರೀ ಅವೈಜ್ಞಾನಿಕ ಅವೈಜ್ಞಾನಿಕ ಎನ್ನುತ್ತಾರೆ. ಲೋಪದೋಷ ಇದ್ದರೆ ಒಪ್ಪಿಕೊಳೋಣ. ಎಲ್ಲಿ ಲೋಪವಾಗಿದೆ ಎಂದು ಸ್ಪಷ್ಟವಾಗಿಲ್ಲ ಎಂದರು.

ಸಂಪುಟ ಸಭೆಯಲ್ಲಿ ಈ ಬಗ್ಗೆ ಚರ್ಚೆ ಆಗಿದೆ. ಸಂಪುಟದಲ್ಲಿ ಯಾರು ವಿರೋಧ ಮಾಡಿಲ್ಲ. ಚರ್ಚೆಯ ಅಪೂರ್ಣವಾಗಿದೆ. ನಾನೇ ಕ್ಯಾಬಿನೆಟ್ ಸಭೆಯಲ್ಲಿದೆ. ಚರ್ಚೆಯಲ್ಲಿ ಎಲ್ಲರೂ ಭಾಗಿಯಾಗಿದ್ದೇವೆ. ಅವೈಜ್ಞಾನಿಕ ಎನ್ನುವ ಆರೋಪಕ್ಕೆ ನಾನು ಪ್ರತಿಕ್ರಿಯೆ ನೀಡಲ್ಲ. ಶಿವಾನಂದ ಪಾಟೀಲ್ ಹಾಗೂ ಎಂ ಬಿ ಪಾಟೀಲ್ ನಡುವೆ ವಾದ ವಿವಾದ ನಡೆದಿಲ್ಲ ಎಂದು ತಿಳಿಸಿದರು.

ಊಹಾಪೋಹಗಳಿಗೆ ಎಡೆಮಾಡಿಕೊಡುದು ಬೇಡ. ಮುಸ್ಲಿಂ ಸಮುದಾಯ ಹೆಚ್ಚಿನ ಸಂಖ್ಯೆಯ ಬಗ್ಗೆ ಯಾವುದೇ ಚರ್ಚೆ ಆಗಿಲ್ಲ. ಯಾವುದೇ ಸಮಾಜಕ್ಕೆ ಹಾನಿಯಾಗಬಾರದು ಎಂಬ ರೀತಿಯಲ್ಲಿ ತೀರ್ಮಾನಿಸಲಾಗಿದೆ. ಎಲ್ಲರಿಗೂ ನ್ಯಾಯ ಕೊಡಿಸಬೇಕು ಎಂಬುದು ನಮ್ಮ ಉದ್ದೇಶ. ಮುಂದುವರಿದ ಹಾಗೂ ಹಿಂದುಳಿದ ಸಮುದಾಯಕ್ಕೆ ತೊಂದರೆಯಾಗ ಬಾರದು ಎಂಬ ರೀತಿಯಲ್ಲಿ ಚರ್ಚೆ ಆಗಿದೆ ಎಂದು ತಿಳಿಸಿದರು.

**ಕಾರು ಅಪಘಾತದ ಆರೋಪಿ ಬಂಧನ:** ಇನ್ನೂ ಕಾರು ಅಪಘಾತ ಪ್ರಕರಣದ ಆರೋಪಿ ಬಂಧನ ವಿಚಾರ ಕುರಿತು ಮಾತನಾಡಿದ ಲಕ್ಷ್ಮಿ ಹೆಬ್ಬಾಳ್ಕರ್, ನಾನು ನಿದ್ದೆಗಣ್ಣಲ್ಲಿ ಇದ್ದೆ ಬಂದು ಅಪಘಾತ ಮಾಡಿದ್ದಾರೆ. ಮೂರು ತಿಂಗಳಲ್ಲಿ ಆರೋಪಿಯನ್ನು ಬಂಧಿಸಿದ ಪೊಲೀಸರಿಗೆ ಅಭಿನಂದನೆ ಸಲ್ಲಿಸುತ್ತೇನೆ. ಮೂರು ತಿಂಗಳಲ್ಲಿ ಆರೋಪಿಗಳನ್ನು ಬಂಧಿಸಿದ್ದಾರೆ. ಆರೋಪಿ ಬಂಧನ ಬಗ್ಗೆ ಅನುಮಾನವಿತ್ತು. ಕಲರ್ ಮ್ಯಾಚ್ ಮಾಡಲು ಎಫ್ ಎಸ್ ಎಲ್ ಮೊರೆ ಸಹ ಹೋಗಿದ್ರು. ಹಿಟ್ ಅಂಡ್ ರನ್ ಕೇಸ್ ಬಹುತೇಕ ಪತ್ತೆ ಆಗಲ್ಲ. ಅಪಘಾದ ಬಗ್ಗೆ ನನಗೆ ಯಾವುದೇ ಅನುಮಾನ ಇಲ್ಲ ಎಂದರು.

# ಮುಂದಿನ ಒಂದು ವಾರ ರಾಜ್ಯದಲ್ಲಿ ಗುಡುಗು ಸಹಿತ ಮಳೆ ಸಂಭವ

**ಬೆಂಗಳೂರು, ಏ.20–** ರಾಜ್ಯದಲ್ಲೂ ಒಂದು ವಾರ ಗುಡುಗು ಸಹಿತ ಮಳೆ ಮುಂದುವರಿಯುವ ಸಾಧ್ಯತೆಯಿದ್ದು, ಹವಾಮಾನ ಇಲಾಖೆ 24 ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಿದೆ. ಬೀದರ್, ಕಲಬುರಗಿ, ವಿಜಯಪುರ, ಯಾದಗಿರಿ, ರಾಯಚೂರು, ಕೊಪ್ಪಳ ಹಾಗೂ ಉತ್ತರ ಕನ್ನಡ ಜಿಲ್ಲೆಯಲ್ಲಿ ಒಣಹವೆ ಇರಲಿದೆ. ಉಳಿದ ಜಿಲ್ಲೆಗಳಿಗೆ 'ಯೆಲ್ಲೋ ಅಲರ್ಟ್' ಘೋಷಿಸಲಾಗಿದೆ. ಕರಾವಳಿಯ ದಕ್ಷಿಣ ಕನ್ನಡ ಹಾಗೂ ಉಡುಪಿಯ ಕೆಲವೆಡೆ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಉತ್ತರ ಕನ್ನಡದ ಬಹುತೇಕ ಕಡೆ ಒಣಹವೆ ಇರಲಿದ್ದು, ಕೆಲವೆಡೆ ಮಳೆಯಾಗಬಹುದು ಎಂದು ಇಲಾಖೆ ತಿಳಿಸಿದೆ. ದೇಶದ ಉತ್ತರದ ಹಲವು ಪ್ರದೇಶಗಳಲ್ಲಿ ನಾಳೆ ಹಗುರದಿಂದ ಸಾಧಾರಣ ಮಳೆಯಾಗಲಿದೆ . ಜಮ್ಮು-ಕಾಶ್ಮೀರ, ಲಡಾಖ್, ಗಿಲ್ ಗಿಟ್ , ಬಲ್ಟಿಸ್ತಾನ್, ಮುಜಾಫರಬಾದ್ ಗಳಲ್ಲಿ ನಾಳೆ ಮಳೆಯಾಗುವ ಸಾಧ್ಯತೆ ಇದೆ. ಅಲ್ಲದೆ, ಉತ್ತರಾಖಂಡ, ಹಿಮಾಚಲ ಪ್ರದೇಶದಲ್ಲೂ ಬಲವಾದ ಗಾಳಿಯೊಂದಿಗೆ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮುಂದಿನ 5 ದಿನಗಳಲ್ಲಿ ಅರುಣಾಚಲ ಪ್ರದೇಶ, ಅಸ್ಸಾಂ, ಮೇಘಾಲಯಗಳಲ್ಲಿ ಮಳೆಯಾಗಲಿದೆ. ವಿದರ್ಭ ಸೇರಿದಂತೆ ಮಧ್ಯಪ್ರದೇಶ ಹಾಗೂ ಗುಜರಾತ್ ನಲ್ಲಿ ಬುಧವಾರದವರೆಗೂ ಬಿಸಿ ಗಾಳಿಯೊಂದಿಗೆ ಶುಷ್ಕ ವಾತಾವರಣ ಮುಂದುವರಿಯಲಿದೆ.

# ಜಾತಿಗಣತಿ: ಸರ್ಕಾರದ ವಿರುದ್ಧ ಮುಗಿಬಿದ್ದ ವಿಪಕ್ಷಗಳು: ಕಾಂತರಾಜ್

**ಬೆಂಗಳೂರು, ಏ.20–** ರಾಜ್ಯದಲ್ಲಿ ಜಾತಿಗಣತಿ ವಿಚಾರ ಸಾಕಷ್ಟು ಚರ್ಚೆಗೆ ಗ್ರಾಸವಾಗಿದ್ದು, ಸಿಎಂ ಸಿದ್ದರಾಮಯ್ಯ ಸರ್ಕಾರದ ವಿರುದ್ಧ ವಿಪಕ್ಷಗಳು ಮುಗಿಬಿದ್ದಿವೆ. ಈ ನಡುವೆ ಹಿಂದುಳಿದ ವರ್ಗಗಳ ಆಯೋಗದ ಮಾಜಿ ಅಧ್ಯಕ್ಷ ಕಾಂತ ರಾಜ್ ನೀಡಿರುವ ಹೇಳಿಕೆ ದೊಡ್ಡ ಸಂಚಲನ ಮೂಡಿಸಿದೆ.



ಬೆಂಗಳೂರಲ್ಲಿ ಮಾತಾಡಿದ ಕಾಂತರಾಜು ಅವರು, ಜಾತಿಗಣತಿ ಕುರಿತ ಸಮೀಕ್ಷೆಯನ್ನು ತರಾತುರಿಯಲ್ಲಿ ನಡೆಸಿಲ್ಲ. ಕ್ಲಿನಿಕಲ್ ನಿಖರತೆಯೊಂದಿಗೆ ನಡೆಸಲಾಗಿದೆ. ಅರ್ಹ ಸರ್ಕಾರಿ ನೌಕರರು, ಹತ್ತಾರು ಸಾವಿರ ಮೇಲ್ವಿಚಾರಕರು ಸೇರಿದಂತೆ ಒಟ್ಟು 1.35 ಲಕ್ಷ ಗಣತಿದಾರರಿಂದ ಸಮೀಕ್ಷೆ ನಡೆಸಲಾಗಿದೆ ಎಂದಿದ್ದಾರೆ. ವರದಿಯನ್ನು ಒಟ್ಟು 1.35 ಲಕ್ಷ ಗಣತಿದಾರರು, 1.6 ಲಕ್ಷ ಮಾನವ ಶಕ್ತಿ ನೇಮಕದೊಂದಿಗೆ ನಡೆಸಲಾಗಿದೆ. ಅನೇಕರು ಅನುಭವಿ ಶಾಲಾ ಶಿಕ್ಷಕರಾಗಿದ್ದರು. ಐಐಎಂ ಮತ್ತು ಇತರೆ ಪ್ರಮುಖ ಸಂಸ್ಥೆಗಳ ತಜ್ಞರು ಕೂಡ ಸಮೀಕ್ಷೆಯಲ್ಲಿದ್ದರು ಎಂದು ಹೇಳಿದ್ದಾರೆ.ರಾಜ್ಯದ ಮೂಲೆ ಮೂಲೆಯಲ್ಲೂ ಸಮೀಕ್ಷೆ ನಡೆಸಲಾಗಿದೆ.

ಬೀಗ ಹಾಕಿದ್ದ ಮನೆಗಳಿಗೆ ಮೂರು ಬಾರಿ ಭೇಟಿ ನೀಡಿದ್ದೇವೆ. ನಾಗರಿಕರು ನಮಗೆ ಕರೆ ಮಾಡಿ ತಮ್ಮ ವಿವರಗಳನ್ನು ನೀಡಿದ್ದಾರೆ. ನಾವು ಇನ್ನೇನು ಮಾಡಲು ಸಾಧ್ಯ? ವರ್ಷಗಳ ಬಳಿಕ ಯಾರೂ ನಮ್ಮ ಮನೆಗೆ ಬರಲಿಲ್ಲ ಎಂದು ಹೇಳಿದರೆ ಹೇಗೆ ಇದಕ್ಕೆ ನಾವು ಜವಾಬ್ದಾರರಲ್ಲ ಎಂದು ಕಾಂತರಾಜ್ ತಿಳಿಸಿದ್ದಾರೆ.

# ನಿವೃತ್ತ ಪೊಲೀಸ್ ಮಹಾನಿರ್ದೇಶಕ ಓಂ ಪ್ರಕಾಶ್ ಪತ್ನಿಯಿಂದಲೇ ಹತ್ಯೆ

**ಬೆಂಗಳೂರು, ಏ.20–** ನಿವೃತ್ತ ಪೊಲೀಸ್ ಮಹಾನಿರ್ದೇಶಕ ಓಂ ಪ್ರಕಾಶ್ (68) ಅವರನ್ನು ಹತ್ಯೆ ಮಾಡಲಾಗಿದೆ. ಎಚ್‌ಎಸ್‌ಆರ್ ಲೇಔಟ್ ನಿವಾಸದಲ್ಲಿ ಓಂ ಪ್ರಕಾಶ್ ರಕ್ತದ ಮಡುವಿನಲ್ಲಿ ಬಿದ್ದಿದ್ದಾರೆ. ಓಂ ಪ್ರಕಾಶ್ ಅವರು 1981ರ ಬ್ಯಾಚ್‌ನ ಐಪಿಎಸ್ ಅಧಿಕಾರಿಯಾಗಿದ್ದರು. ಓಂ ಪ್ರಕಾಶ್ ಅವರು 2015ರಲ್ಲಿ ರಾಜ್ಯದ 38ನೇ ಡಿಜಿ& ಐಜಿಪಿ ಯಾಗಿದ್ದರು. ನಿವೃತ್ತ ಡಿಜಿ ಮತ್ತು ಐಜಿಪಿ ಓಂ ಪ್ರಕಾಶ್ ಅವರನ್ನು ಹೆಂಡತಿಯೇ ಈ ಕೊಲೆ ಮಾಡಿರುವ ಅನುಮಾನ ವ್ಯಕ್ತವಾಗಿದೆ.



ಓಂ ಪ್ರಕಾಶ್ ಪತ್ನಿ ಮಾನಸಿಕ ಸ್ಥಿಮಿತ ಕಳೆದುಕೊಂಡು ಹತ್ಯೆ ಮಾಡಿ ಬಳಿಕ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ ಎನ್ನಲಾಗಿದೆ. ಇನ್ನು ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಹಿರಿಯ ಪೊಲೀಸ್ ಅಧಿಕಾರಿಗಳು ಸ್ಥಳಕ್ಕೆ ದೌಡಾಯಿಸಿ ಪರಿಶೀಲನೆ ನಡೆಸಿದ್ದಾರೆ. ಸದ್ಯ ಓಂ ಪ್ರಕಾಶ್ ಅವರ ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಸೇಂಟ್‌ಜಾನ್ಸ್ ಆಸ್ಪತ್ರೆಗೆ ರವಾನಿಸಲಾಗಿದೆ. ಹಿರಿಯ ಐಪಿಎಸ್ ಅಧಿಕಾರಿ ಓಂ ಪ್ರಕಾಶ್ ಅವರು 2015ರ ಮಾರ್ಚ್ 01 (ಶನಿವಾರ) ದಂದು ರಾಜ್ಯದ ಪೊಲೀಸ್ ಮಹಾ ನಿರ್ದೇಶಕರು ಮತ್ತು ಮಹಾನಿರೀಕ್ಷಕರು (ಡಿಜಿ ಮತ್ತು ಐಜಿಪಿ) ಆಗಿ ಅಧಿಕಾರ ವಹಿಸಿಕೊಂಡಿದ್ದರು.

ನಿವೃತ್ತರಾದ ನಿರ್ಗಮನ ಡಿಜಿ ಮತ್ತು ಐಜಿಪಿ ಲಾಲ್ರೋಖುಮಾ ಪಚುವಾ ಅವರು ನೃಪತುಂಗ ರಸ್ತೆಯಲ್ಲಿರುವ ಪೊಲೀಸ್ ಮುಖ್ಯಸ್ಥರ ಕಚೇರಿಯಲ್ಲಿ ನಡೆದ ಸಮಾರಂಭದಲ್ಲಿ ಓಂ ಪ್ರಕಾಶ್ ಅವರಿಗೆ ಔಪಚಾರಿಕವಾಗಿ ಅಧಿಕಾರ ಹಸ್ತಾಂತರಿಸಿದ್ದರು.

1981ರ ಬ್ಯಾಚ್ ಐಪಿಎಸ್ ಅಧಿಕಾರಿಯಾದ ಓಂ ಪ್ರಕಾಶ್, 38ನೇ ಡಿಜಿ ಮತ್ತು ಐಜಿಪಿಯಾಗಿ ಅಧಿಕಾರ ವಹಿಸಿಕೊಳ್ಳುವ ಮೊದಲು ಗೃಹರಕ್ಷಕ ದಳದ ಕಮಾಂಡೆಂಟ್ ಜನರಲ್, ನಾಗರಿಕ ರಕ್ಷಣಾ ನಿರ್ದೇಶಕ ಮತ್ತು ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಮಹಾನಿರ್ದೇಶಕರಾಗಿ ಸೇವೆ ಸಲ್ಲಿಸಿದ್ದರು. ಓಂ ಪ್ರಕಾಶ್ ಬಿಹಾರದ ಚಂಪಾರಣ್ ಜಿಲ್ಲೆಯವರು. ಬಳ್ಳಾರಿಯ ಹರಪನಹಳ್ಳಿ ಉಪವಿಭಾಗದ ಎಎಸ್ಪಿಯಾಗಿ ಸೇವೆ ಸಲ್ಲಿಸಿದ್ದರು. ನಂತರ, ರಾಜ್ಯ ಜಾಗೃತ ಆಯೋಗ ಮತ್ತು ಕರ್ನಾಟಕ ಲೋಕಾಯುಕ್ತ ಎಸ್ಪಿಯಾಗಿ ಎಡಿಜಿಪಿ (ಕುಂದು ಕೊರತೆಗಳು ಮತ್ತು ಮಾನವ ಹಕ್ಕುಗಳು) ಆಗಿದ್ದರು.

# ಸುಪ್ರೀಂ ಆದೇಶ ಪಾಲಿಸದ ಜಲಮಂಡಳಿ ಅಧಿಕಾರಿಗಳ ವಿರುದ್ಧ ಲೋಕಾಯುಕ್ತಕ್ಕೆ ದೂರು

**ಬೆಂಗಳೂರು, ಏ.20–** ಮಹಾನಗರದಲ್ಲಿರುವ ಅನಧಿಕೃತ ಕಟ್ಟಡಗಳಿಗೆ ನೀರು ಹಾಗೂ ಒಳಚರಂಡಿ ಸೌಲಭ್ಯ ಸ್ಥಗಿತಗೊಳಿಸುವಂತೆ ಸುಪ್ರೀಂಕೋರ್ಟ್ ಆದೇಶ ಪಾಲಿಸದ ಜಲಮಂಡಳಿ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಕೋರಿ ಮಾಹಿತಿಹಕ್ಕು ಅಧ್ಯಯನ ಕೇಂದ್ರವು ಲೋಕಾಯುಕ್ತಕ್ಕೆ ದೂರು ಸಲ್ಲಿಸಿದೆ. ಯಾವುದೇ ಕಟ್ಟಡಗಳು ಆರಂಭಿಕ ಪ್ರಮಾಣಪತ್ರ) ಹಾಗೂ ಸ್ವಾಧೀನಾನುಭವ ಪ್ರಮಾಣಪತ್ರ ಹೊಂದಿರಬೇಕು. ಇಂತಹ ಕಟ್ಟಡಗಳು ಪ್ರಮಾನಪತ್ರವಿಲ್ಲದೆ ನಿರ್ಮಾಣವಾಗುತ್ತಿದ್ದಲ್ಲಿ ಅಂತಹ ಪ್ರಕರಣಗಳಲ್ಲಿ ನಿಯಮದಂತೆ ಕ್ರಮ ಕೈಗೊಳ್ಳಬಹುದು ಎಂದು ಸುಪ್ರೀಂಕೋರ್ಟ್ ಕಳೆದ ಡಿ.17ರಂದು ಆದೇಶ ಮಾಡಿತ್ತು. ಇದನ್ನಾಧರಿಸಿ ಬಿಬಿಎಂಪಿ ಹಾಗೂ ಬೆಸ್ಕಾಂ ತನ್ನ ವ್ಯಾಪ್ತಿಯಲ್ಲಿ ಕಟ್ಟಡ ನಿರ್ಮಾಣ ವೇಳೆ ಸಂಬಂಧಿಸಿದ ಪ್ರಮಾಣಪತ್ರ ಪಡೆಯದಿದ್ದಲ್ಲಿ ಸೌಲಭ್ಯ ಸ್ಥಗಿತಗೊಳಿಸುವುದಾಗಿ ಆಂತರಿಕ ಆದೇಶವನ್ನು ಹೊರಡಿಸಿದೆ. ಆದರೆ, ಜಲಮಂಡಳಿ ಈವರೆಗೂ ಇಂತಹ ಆದೇಶ ಹೊರಡಿಸಿಲ್ಲ. ಇದು ನ್ಯಾಯಾಂಗ ನಿಂದನೆಗೂ ಎಡೆಮಾಡಿಕೊಡಲಿದೆ ಎಂದು ಕೇಂದ್ರದ ಪದಾಧಿಕಾರಿಗಳು ದೂರಿನಲ್ಲಿ ಉಲ್ಲೇಖಿಸಿದ್ದಾರೆ.

ಸುಪ್ರೀಂ ಆದೇಶ ಪಾಲಿಸದ ಕಾರಣ ನಿಯಮ ಉಲ್ಲಂಘಿಸಿ ಸೌಲಭ್ಯ ಒದಗಿಸಿರುವ ಎಲ್ಲ ಪ್ರಕರಣಗಳನ್ನು ಮರುಪರಿಶೀಲಿಸಬೇಕು. ಈ ಸಂಬಂಧ ನಗರಾಭಿವೃದ್ಧಿ ಇಲಾಖೆಯ ಪ್ರಧಾನ ಕಾರ್ಯದರ್ಶಿಗೂ ಪ್ರತ್ಯೇಕ ದೂರು ಸಲ್ಲಿಸಲಾಗಿದೆ ಎಂದು ಕೇಂದ್ರದ ಪದಾಧಿಕಾರಿ ಬಿ. ಎಚ್.ವೀರೇಶ್ ತಿಳಿಸಿದ್ದಾರೆ.



ಬೆಂಗಳೂರಿನ ಅಗಾಪೆ ಬೈಬಲ್ ಚರ್ಚ್‌ನಲ್ಲಿ ಭಾನುವಾರ ಈಸ್ಟರ್ ಭಾನುವಾರದ ಪ್ರಾರ್ಥನೆಯಲ್ಲಿ ಪಾಲ್ಗೊಂಡ ಭಕ್ತರು.

# ಹಳೇ ದ್ವೇಷದ ಹಿನ್ನಲೆಯಲ್ಲಿ ರಿಕ್ಕಿ ರೈ ಕೊಲೆಗೆ ಯತ್ನ: ಶಂಕೆ

**ಬೆಂಗಳೂರು, ಏ.20–** ಮುತ್ತಪ್ಪ ರೈ ಪುತ್ರ ರಿಕ್ಕಿ ರೈ ಮೇಲೆ ಗುಂಡು ಹಾರಿಸಿ ಕೊಲೆಗೆ ಪ್ರಯತ್ನಿಸಿ ಪರಾರಿಯಾಗಿರುವವರು ಸುಪಾರಿ ಕಿಲ್ಲರ್ಸ್‌ಗಳು ಇರಬಹುದು ಎಂದು ರಾಮನಗರ ಜಿಲ್ಲಾ ಪೊಲೀಸರು ಶಂಕಿಸಿ ತನಿಖೆ ತೀವ್ರಗೊಳಿಸಿದ್ದಾರೆ.

ಗುಂಡು ಹಾರಿಸಿ ಪರಾರಿಯಾಗಿರುವ ದುಷ್ಕರ್ಮಿಗಳ ಬಂಧನಕ್ಕೆ ರಚಿಸಲಾಗಿರುವ ನಾಲ್ಕು ತಂಡಗಳಲ್ಲಿ ಒಂದು ತಂಡ ಈ ನಿಟ್ಟಿನಲ್ಲಿ ತನಿಖೆ ಕೈಗೊಂಡು ಕೆಲವು ಸುಪಾರಿ ಕಿಲ್ಲರ್ಗಳನ್ನು ವಿಚಾರಣೆಗೆ ಒಳಪಡಿಸಿ, ಮಾಹಿತಿ ಪಡೆದುಕೊಳ್ಳುತ್ತಿದೆ. ಘಟನೆ ನಡೆದು 24 ಗಂಟೆ ಕಳೆದರೂ ಸಹ ರಿಕ್ಕಿ ರೈ ಮೇಲೆ ಗುಂಡು ಹಾರಿಸಿ ಓಡಿಹೋಗಿರುವ ದುಷ್ಕರ್ಮಿಗಳು ಯಾರು ಎಂಬುದು ನಿಖರವಾಗಿ ಪೊಲೀಸರಿಗೆ ಇನ್ನೂ ಗೊತ್ತಾಗಿಲ್ಲ. ಒಟ್ಟಾರೆ ಪ್ರಕರಣ ಇನ್ನೂ ನಿಗೂಢವಾಗಿದೆ.



ರಿಕ್ಕಿ ರೈ ಮೇಲೆ ಯಾರು, ಯಾವ ಕಾರಣಕ್ಕಾಗಿ ಗುಂಡು ಹಾರಿಸಿದ್ದಾರೆ ಎಂಬುದರ ಬಗ್ಗೆ ಸಾಕಷ್ಟು ಅನುಮಾನಗಳು ಪೊಲೀಸರನ್ನು ಕಾಡುತ್ತಿವೆ. ಮುತ್ತಪ್ಪರೈ ಅಪಾರ ಆಸ್ತಿ ಮಾಡಿರುವುದರಿಂದ ಆಸ್ತಿ ವಿಚಾರದಲ್ಲಾಗಿದೆಯಾ, ರಿಕ್ಕಿ ರೈ ರಿಯಲ್ ಎಸ್ಟೇಟ್ ವ್ಯವಹಾರ ಮಾಡುತ್ತಿರುವುದರಿಂದ ಆ ವ್ಯವಹಾರದ ಹಿನ್ನೆಲೆಯಲ್ಲಿ ಏನಾದರೂ ಆಗಿದೆಯಾ ಅಥವಾ ಹಳೆ ದ್ವೇಷದ ಹಿನ್ನೆಲೆಯಲ್ಲಿ ಈ ಘಟನೆಯಾಗಿದೆಯಾ ಎಂಬುದರ ಬಗ್ಗೆ ಪೊಲೀಸರು ಇಂಚಿಂಚೂ ಮಾಹಿತಿ ಕಲೆ ಹಾಕುತ್ತಿದ್ದಾರೆ.

ರಿಕ್ಕಿ ರೈ ಅವರ ಕಾರಿನ ಚಾಲಕ ಬಸವರಾಜು ಅವರು ಮುತ್ತಪ್ಪರೈನ ಎರಡನೇ ಪತ್ನಿ ಅನುರಾಧ, ರೈನ ಆಪ್ತ ರಾಕೇಶ್ ಮಲ್ಲಿ, ನಿತೀಶ್ ಶೆಟ್ಟಿ, ವೈದ್ಯನಾಥ್ ವಿರುದ್ಧ ಅನುಮಾನ ವ್ಯಕ್ತಪಡಿಸಿ ಬಿಡದಿ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾರೆ. ರಿಕ್ಕಿ ರೈ ಅವರೇ ಇವರುಗಳ ಮೇಲೆ ಅನುಮಾನ ವ್ಯಕ್ತಪಡಿಸಿ ನನ್ನ ಬಳಿ ಹೇಳಿದ್ದಾರೆ ಎಂದು ದೂರಿನಲ್ಲಿ ಬಸವರಾಜು ತಿಳಿಸಿದ್ದಾರೆ.

ಈ ದೂರಿನ ಹಿನ್ನೆಲೆಯಲ್ಲಿ ಎಫ್‌ಐಆರ್‌ನಲ್ಲಿ ದಾಖಲಾಗಿರುವ ನಾಲ್ವರಿಗೂ ವಿಚಾರಣೆಗೆ ಹಾಜರಾಗುವಂತೆ ಪೊಲೀಸರು ಸದ್ಯದಲ್ಲೇ ನೋಟೀಸ್ ನೀಡಲಿದ್ದಾರೆ. ಪ್ರಕರಣ ದಾಖಲಾದ ನಂತರ ಒಂದು ತಂಡ ಎಫ್‌ಐಆರ್‌ನಲ್ಲಿರುವ ಅಂಶಗಳ ಬಗ್ಗೆ ತೀವ್ರ ತನಿಖೆ ನಡೆಸುತ್ತಿದೆ. ಘಟನೆ ನಡೆದ ಸ್ಥಳದಲ್ಲಿ ಸಿಮ್ ಇಲ್ಲದ ಬೇಸಿಕ್ ಮೊಬೈಲ್ ಸೆಟ್ ದೊರೆತಿದೆ. ಅದನ್ನು ವಶಪಡಿಸಿಕೊಂಡಿರುವ ಪೊಲೀಸರು ತನಿಖೆಯನ್ನು ತೀವ್ರಗೊಳಿಸಿದ್ದಾರೆ. ಈಗಾಗಲೇ ಚಾಲಕ ಬಸವರಾಜು ಅವರಿಂದ ಹಲವಾರು ಮಾಹಿತಿಗಳನ್ನು ಪಡೆದುಕೊಂಡಿರುವ ಬಿಡದಿ ಠಾಣೆ ಪೊಲೀಸರು ಗಾಯಗೊಂಡು ಮಣಿಪಾಲ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ರಿಕ್ಕಿ ರೈರನ್ನು ಭೇಟಿ ಮಾಡಿ ಘಟನೆಗೆ ಸಂಬಂಧಿಸಿದಂತೆ ಮಾಹಿತಿಯನ್ನು ಪಡೆದುಕೊಳ್ಳಲಿದ್ದಾರೆ.

ರಿಕ್ಕಿ ರೈ ಅವರ ಹೇಳಿಕೆ ಪಡೆದ ನಂತರ ಈ ಪ್ರಕರಣದ ತನಿಖೆ ಮತ್ತಷ್ಟು ಚುರುಕುಗೊಳ್ಳಲಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು.



ಬೆಂಗಳೂರಿನ ಮಲ್ಲೇಶ್ವರದಲ್ಲಿ ಭಾನುವಾರ ಮಳೆಯ ನಡುವೆಯೆ ಸಂಚರಿಸಿದ ಜನರು.

# ವಿದ್ಯಾರ್ಥಿ ಜನಿವಾರ ತೆಗೆಸಿದ ಪ್ರಕರಣ: ಬ್ರಾಹ್ಮಣ ಸಮಾಜದಿಂದ ಜಿಲ್ಲಾಧಿಕಾರಿ ಕಚೇರಿ ಮುಂದೆ ಪ್ರತಿಭಟನೆ



ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಸಿ.ಇ.ಟಿ ಪರೀಕ್ಷೆಯಲ್ಲಿ ಬ್ರಾಹ್ಮಣ ವಿದ್ಯಾರ್ಥಿಗಳ ಜನಿವಾರವನ್ನು ಬಲವಂತವಾಗಿ ತೆಗೆಯಿಸಿರುವುದನ್ನು ಬ್ರಾಹ್ಮಣ ಆರ್ಗನೈಸೇಶನ್ ಆಫ್ ಇಂಡಿಯಾ ತೀವ್ರವಾಗಿ ಖಂಡಿಸಿ ಡಿಸಿ ಕಚೇರಿ ಎದುರು ಪ್ರತಿಭಟನೆ ನಡೆಸಿ ಡಿಸಿ ಮೂಲಕ ಸಿಎಂಗೆ ಮನವಿ ಸಲ್ಲಿಸಿದರು. ರವೀಂದ್ರ ಕುಲಕರ್ಣಿ, ಶ್ರೀನಿವಾಸ ದೇಸಾಯಿ, ವೆಂಕಟೇಶ ಕುಲಕರ್ಣಿ, ಸುಮಂಗಲಾ ಚಕ್ರವರ್ತಿ, ಗುರುರಾಜ ಜೋಶಿ, ವೆಂಕಟೇಶ ಚಿತ್ತಾಪೂರ, ಘಂಟಿ ರಾಮಾಚಾರ್ಯ, ಡಿ.ಕೆ ಕುಲಕರ್ಣಿ, ಕೆ.ಬಿ ಕುಲಕರ್ಣಿ, ಬಿ.ಜಿ ದೇಶಪಾಂಡೆ, ಆನಂತ ಕಾಮೇಗಾಂವಕರ್ ಸೇರಿದಂತೆ ಇನ್ನಿತರರಿದ್ದರು.

**ಕಲಬುರಗಿ, ಏ. 20** ಬೀದರ್, ಶಿವಮೊಗ್ಗ ಮತ್ತು ಧಾರವಾಡದಲ್ಲಿ ಸಿಇಟಿ ಪರೀಕ್ಷೆ ವೇಳೆ ವಿದ್ಯಾರ್ಥಿಗಳು ಹಾಕಿದ್ದ ಜನಿವಾರ ತೆಗೆಸಿದ್ದ ಘಟನೆ ಭಾರೀ ವಿವಾದಕ್ಕೆ ಕಾರಣವಾಗಿದ್ದು, ಈ ಘಟನೆಗೆ ಕಾರಣರಾದ ವ್ಯಕ್ತಿಗಳ ವಿರುದ್ಧ ಕ್ರಮ ತೆಗೆದುಕೊಳ್ಳಬೇಕೆಂದು ಆಗ್ರಹಿಸಿ ಶನಿವಾರ ಜಿಲ್ಲಾಧಿಕಾರಿಗಳ ಕಚೇರಿಯ ಮುಂದೆ ಅಖಿಲ ಭಾರತ ಬ್ರಾಹ್ಮಣ ಸಂಘಟನೆ ನೇತೃತ್ವದಲ್ಲಿ ವಿಪ್ರ ಸಮಾಜದವರು ಪ್ರತಿಭಟನೆ ಮಾಡಿದರು. ನಗರದ ಸರ್ದಾರ್ ವಲ್ಲಭಬಾಯಿ ಪಟೇಲ್ ವೃತ್ತದಲ್ಲಿ ಪ್ರತಿಭಟನೆಕಾರರು ಟೈರ್‌ಗೆ ಬೆಂಕಿ ಹಚ್ಚಿ ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ವೆಂಕಟೇಶ್ ಕುಲಕರ್ಣಿ, ಗುರುರಾಜ್ ಜೋಶಿ, ಸುಮಂಗಲಾ ಚಕ್ರವರ್ತಿ, ವೆಂಕಟೇಶ್ ಚಿತ್ತಾಪೂರ್, ಘಂಟಿ ರಾಮಾಚಾರ್ಯ, ಡಿ.ಕೆ. ಕುಲಕರ್ಣಿ, ಕೆ.ಬಿ. ಕುಲಕರ್ಣಿ, ಬಿ.ಜಿ. ದೇಶಪಾಂಡೆ, ಅನಂತ್ ಕಾಮೇಗಾಂವಕರ್ ಮುಂತಾದವರು ಪಾಲ್ಗೊಂಡಿದ್ದರು.ಪ್ರತಿಭಟನೆಕಾರರ ು ನಂತರ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿ, ಜನಿವಾರ ಹಾಕೋದು ನಮ್ಮ ಸಂಪ್ರದಾಯ, ನಮ್ಮ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರುವಂತಹ ನಿಟ್ಟಿನಲ್ಲಿ ನಡೆದುಕೊಂಡವರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಬೇಕು ಮತ್ತು ವಿದ್ಯಾರ್ಥಿಗಳಿಗೆ ರಾಜ್ಯದ ಉತ್ತಮ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಅವರಿಗೆ ಬೇಕಾದ ಕೋರ್ಸಿಗೆ ಪ್ರವೇಶ ಕೊಡಿಸಿ ವಿದ್ಯಾರ್ಥಿಗಳಿಗೆ ನ್ಯಾಯ ಒದಗಿಸಿಕೊಡಬೇಕು. ಮುಂದಿನ ದಿನಗಳಲ್ಲಿ ಇಂತಹ ಕೃತ್ಯಗಳು ಮರುಕಳಿಸದಂತೆ ಸರ್ಕಾರ ಜಾಗೃತಿ ವಹಿಸಬೇಕು. ಒಂದು ವೇಳೆ ಪರೀಕ್ಷೆಗೆ ಹಾಜರಾಗದ ವಿದ್ಯಾರ್ಥಿಗಳಿಗೆ ಅವರಿಗೆ ಬೇಕಾದ ಕೋರ್ಸಿಗೆ ಸೇರಲು ಅನುವು ಮಾಡದೇ ಇದ್ದರೆ, ಮುಂದಿನ ದಿನಗಳಲ್ಲಿ ರಾಜ್ಯದಾದ್ಯಂತ ಹೋರಾಟ ಮಾಡಬೇಕಾಗುತ್ತದೆ ಎಂದು ಅವರು ಎಚ್ಚರಿಸಿದರು.

**ಕಟ್ಟೆಚ್ಚರಕ್ಕೆ ಗುತ್ತೇದಾರ ಆಗ್ರಹ**

ರಾಜ್ಯದ ವಿವಿಧೆಡೆ ಸಾಮಾನ್ಯ ಪ್ರವೇಶ ಪರೀಕ್ಷೆ (ಸಿಇಟಿ) ಕೇಂದ್ರದಲ್ಲಿ ಸಿಬ್ಬಂದಿ ವಿದ್ಯಾರ್ಥಿಗಳ ಜನಿವಾರ ತೆಗೆಸಿದ ಘಟನೆ ತಪ್ಪು. ಇದು ಸರ್ಕಾರದ ಹೊಣೆಗೇಡಿತನದ ಆಡಳಿತವಾಗಿದೆ ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಬಾಲರಾಜ್ ಗುತ್ತೇದಾರ ಆರೋಪಿಸಿದರು.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಪ್ರತಿಯೊಂದು ಜಾತಿ ಧರ್ಮದ ನಂಬಿಕೆ ಗೌರವಿಸುವುದನ್ನು ಕಲಿಯಬೇಕು. ಜನಿವಾರ ಹಾಕಿದ್ದಕ್ಕೆ ಪರೀಕ್ಷೆಗೆ ಕೂರಿಸದೇ ಇರುವುದು ಸರಿಯಲ್ಲ. ಈ ಘಟನೆಯನ್ನು ನಾನು ಖಂಡಿಸುತ್ತೇನೆ. ಮುಂದೆ ಇಂತಹ ಘಟನೆಗಳು ಮರುಕಳಿಸದಂತೆ ಸರ್ಕಾರ ಎಚ್ಚರಿಕೆ ವಹಿಸಬೇಕು ಮತ್ತು ಸಂಬಂಧಿಸಿದ ವಿದ್ಯಾರ್ಥಿಗಳಿಗೆ ಅವರು ಬಯಸಿರುವ ಕಾಲೇಜುಗಳಲ್ಲಿ ಮೆಡಿಕಲ್, ಇಂಜಿನಿಯರಿಂಗ್ ಸೀಟು ಕೊಡಬೇಕು ಎಂದು ಆಗ್ರಹಿಸಿದ್ದಾರೆ.

ಜನಿವಾರ ಹಾಕಿಕೊಂಡು ಕಾಪಿ ಹೊಡೆಯೋಕೆ ಆಗುತ್ತಾ? ಜನಿವಾರ 'ದಲ್ಲಿ ಕಾಪಿ ಚೀಟಿ ಇಟ್ಟುಕೊಂಡು ಹೋಗೋಕೆ ಆಗುತ್ತಾ? ಜನಿವಾರ ಇದ್ದರೆ ಏನು ಸಮಸ್ಯೆ? ಸ್ಮಾರ್ಟ್ ವಾಚ್ ಕಟ್ಟಿಕೊಂಡು ಬಂದರೆ ನೀವು ತೆಗೆಸಬೇಕು ಎನ್ನುವುದು ಸರಿ. ಆದರೆ ಜನಿವಾರ ತೆಗೆದು ಒಂದು ಸಮುದಾಯಕ್ಕೆ ಅವಮಾನ ಮಾಡೋದು ಸರಿಯಲ್ಲ. ಈ ಘಟನೆ ಬಗ್ಗೆ ತಪ್ಪಿತಸ್ಥರ ವಿರುದ್ಧ ಕ್ರಮ ತೆಗೆದುಕೊಳ್ಳಬೇಕು. ಅವರಿಗೆ ಬುದ್ದಿವಾದ ಹೇಳಬೇಕು. ಮುಂದೆ ಇಂತಹ ಘಟನೆ ಆಗದಂತೆ ಕ್ರಮ ವಹಿಸಬೇಕು ಎಂದು ಬಾಲರಾಜ್ ಗುತ್ತೇದಾರ ಅವರು ತಿಳಿಸಿದರು.

# ಸರ್ಕಾರದಿಂದ ಸಿಗುವ ಸೌಲಭ್ಯ ಅಲೆಮಾರಿ ಜನರಿಗೆ ತಲುಪಿಸಿ: ಪಲ್ಲವಿ



ಬೀದರ್ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರ್ನಾಟಕ ಪರಿಶಿಷ್ಟ ಜಾತಿ, ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದಿಂದ ಜಾರಿಗೊಳಿಸಿರುವ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ನಿಗಮದ ಅಧ್ಯಕ್ಷೆ ಪಲ್ಲವಿ ಜಿ ಅವರು ಮಾತನಾಡಿದರು.

**ಬೀದರ್, ಏ.20–** ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಅಲೆಮಾರಿ ಸಮುದಾಯಗಳ ಅಭಿವೃದ್ಧಿಗೆ ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ಅಲೆಮಾರಿ ಜನರಿಗೆ ತಲುಪಿಸಬೇಕೆಂದು ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಮಗಡದ ಅಲೆಮಾರಿ ನಿಗಮದ ಅಧ್ಯಕ್ಷೆ ಪಲ್ಲವಿ ಜಿ. ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರ್ನಾಟಕ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದಿಂದ ಜಾರಿಗೊಳಿಸಿರುವ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನೆ ಸಭೆ ಹಾಗೂ ಪತ್ರಿಕಾಗೋಷ್ಠಿ ಉದ್ದೇಶಿಸಿ, ಜಿಲ್ಲೆಯಲ್ಲಿ ಮೂರು ದಿವಸ ಪ್ರವಾಸಕ್ಕೈಗೊಂಡ ಅವರು ಹುಮನಾಬಾದ, ಬಸವಕಲ್ಯಾಣ, ಭಾಲ್ಕಿ, ಔರಾದ ಮತ್ತು ಬೀದರನ ಅಲೆಮಾರಿ ಸಮುದಾಯದವರು ವಾಸಿಸುವ ಸ್ಥಳಕ್ಕೆ ಭೇಟಿ ನೀಡಿ ಅಲ್ಲಿನ ನಿವಾಸಿಗಳೊಂದಿಗೆ ಮಾತನಾಡಿ ಸಮಸ್ಯೆಗಳನ್ನು ತಿಳಿದುಕೊಳ್ಳಲಾಯಿತು. ನಿಗಮ ಅಲೆಮಾರಿ ಜನಾಂಗದ ಅಭಿವೃದ್ಧಿಗೆ ಪೂರಕವಾಗಿದೆ. ಪ್ರತಿ ಜಿಲ್ಲೆಯಲ್ಲೂ ಪ್ರವಾಸ ಮಾಡಿ ಅಲೆಮಾರಿಗಳ ಸ್ಥಿತಿಗತಿ, ಸಮಸ್ಯೆಗಳಲ್ಲಿ ಪರಿಶೀಲಿಸಿ ಸರ್ಕಾರದಿಂದ ಸಿಗುವ ಸೌಲಭ್ಯಗಳ ಬಗ್ಗೆ ಮಹಿತಿ ನೀಡಲಾಗುತ್ತಿದೆ. ಸಮುದಾಯದ ಮಕ್ಕಳ ವಿದ್ಯಾಭ್ಯಾಸಕ್ಕೆ ಪಾಲಕರು ಆದ್ಯತೆ ನೀಡಬೇಕು. ಅಲೆಮಾರಿಗಳು ಮನೆ, ಸ್ವಯಂ ಉದ್ಯೋಗ, ಒಟ್ಟಾರೆಯಾಗಿ ಜೀವನದಲ್ಲಿ ಭದ್ರತೆ ದೊರೆತು ಸಮಾಜದ ಮುಖ್ಯವಾಹಿನಿಗೆ ಬರಬೇಕು. ಪ್ರತಿ ಹಂತದಲ್ಲಿ ಸರ್ಕಾರ ಸವಲತುಳನ್ನು ಒದಗಿಸುತ್ತಿದೆ ಎಂದರು.

ಅಲೆಮಾರಿ ಜನರಿಗೆ ಸ್ವಂತ ನಿವೇಶನಗಳಿಲ್ಲ, ವಸತಿಗಳಿಲ್ಲ, ಪಡಿತರ ಚೀಟಿ, ಆಧಾರ ಕಾರ್ಡ್, ಜಾತಿ ಪ್ರಮಾಣ ಪತ್ರ ಇರುವುದಿಲ್ಲ ಹಾಗೂ ಅವರು ವಾಸಿಸುವ ಸ್ಥಳಗಳು ಸ್ವಚ್ಛವಾಗಿಲ್ಲ ಮತ್ತು ಶಿಕ್ಷಣದಿಂದ ಬಹಳ ವಂಚಿತರ ಬಗ್ಗೆ ಮಾಹಿತಿ ಕಲೆಹಾಕಿ ವರದಿ ನೀಡಲು ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದ್ದೇನೆ. ಸರ್ಕಾರ ಅಲೆಮಾರಿ ಜನರ ಅಭಿವೃದ್ಧಿಗಾಗಿ ಹತ್ತಾರು ಯೋಜನೆಗಳನ್ನು ಹಾಕಿಕೊಂಡಿದೆ ಅದು ಅವರಿಗೆ ತಲುಪಿಸುವುದು ಅಧಿಕಾರಿಗಳ ಕರ್ತವ್ಯವಾಗಿದೆ ಎಂದು ತಿಳಿಸಿದರು.

ಈ ಸಭೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಲೆಮಾರಿ ನಗಮದ ಅಧ್ಯಕ್ಷೆ ಪಲ್ಲವಿ ಜಿ. ಅವರ ಕಾರ್ಯದರ್ಶಿ ಆನಂದ್, ಅಪರ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಸಿಂಧು ರಘು ಎಚ್.ಎಸ್, ಬೀದರನ ತಹಸೀಲ್ದಾರರಾದ ಟಿ.ಮೆಹತ್, ಡಿ.ವಾಯ್.ಎಸ್.ಪಿ. ಶಿವನಗೌಡ ಪಾಟೀಲ್, ಎಲ್ಲಾ ತಾಲೂಕಿನ ಸಮಾಜ ಕಲ್ಯಾಣ ಅಧಿಕಾರಿಗಳು, ಜಿಲ್ಲಾ ಅಲೆಮಾರಿ ಅನುಷ್ಠಾನ ಸಮಿತಿ ಸದಸ್ಯರುಗಳು, ಅಲೆಮಾರಿ ಸಮುದಾಯದ ಮುಖಂಡರು ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಹುಟ್ಟು ಆಕಸ್ಮಿಕ, ಸಾವು ಖಚಿತ ಹುಟ್ಟಿದ ಮೇಲೆ ನಾಲ್ಕು ಜನರಿಗೆ ಒಳಿತು ಮಾಡಿ ಸಾಯಬೇಕು–ಪಾಲಣ್ಣ

**ಬಳ್ಳಾರಿ, ಏ.20–**ಮಾಜಿ ಬುಡಾ ಅಧ್ಯಕ್ಷರು, ಸಮಾಜ ಸೇವಕರು, ಸಮಾಜ ಚಿಂತಕರು, ಕೊಡುಗೈದಾನಿ, ಬಿಜೆಪಿ ಮುಖಂಡರಾದ ಪಿ.ಪಾಲಣ್ಣ ನವರ ಹುಟ್ಟುಹಬ್ಬವನ್ನು ಅದ್ಧೂರಿ ಯಾಗಿ ಆಚರಿಸಿಕೊಂಡಿದ್ದಾರೆ. ಪ್ರತಿವರ್ಷದಂತೆ ಈ ವರ್ಷವು ಕೂಡಾ ಮದರ್ ಥೆರಿಸಾ ವೃದ್ಧಾಶ್ರಮದಲ್ಲಿ ಅನ್ನದಾನ ಕಾರ್ಯಕ್ರಮ, ಕಡುಬಡವರಿಗೆ ಬಟ್ಟೆಗಳ ವಿತರಣೆ, ದಾನ, ಧರ್ಮಗಳನ್ನು ಮಾಡಿ ಹುಟ್ಟು ಹಬ್ಬವನ್ನು ವಿಶೇಷವಾಗಿ ಆಚರಿಸಿದ್ದಾರೆ.

ರಾಜಕೀಯ ನಾಯಕರು, ಎಪಿಎಂಸಿಯ ದಳಾಲಿ ವರ್ತಕರು, ಮಿತ್ರರು, ಹಿತೈಷಿಗಳು, ಅಭಿಮಾನಿ ಬಳಗ, ಹಮಾಲಿಯರು ಎಲ್ಲರೂ ಅವರ ಹುಟುಹಬ್ಬ ಆಚರಣೆಯಲ್ಲಿ ಭಾಗವಹಿಸಿ ಶುಭ ಹಾರೈಸಿದ್ದಾರೆ.



ಪಾಲಣ್ಣನವರು ಮಾತನಾಡುತ್ತಾ ಏ.20ರಂದು ಆಂಧ್ರಪ್ರದೇಶದ ಮಹಾನಾಯಕ, ರಾಜಕೀಯ ಚತುರ, ಮೇಧಾವಿಯಾದಂತ ಮುಖ್ಯಮಂತ್ರಿ ಚಂದ್ರಬಾಬುನಾಯುಡು ಅವರು ಕೂಡಾ ಏ.20 ರಂದೇ ಹುಟ್ಟಿರುವುದು, ನಾನು ಕೂಡಾ ಇದೇ ದಿನಾಂಕದಂದು ಹುಟ್ಟಿದ್ದಕ್ಕೆ ಬಹಳ ಸಂತೋಷವಾಗುತ್ತಿದೆ ಎಂದರು. "ಹುಟ್ಟು ಆಕಸ್ಮಿಕ, ಸಾವು ಖಚಿತ" ಎಂಬಂತೆ ಎಲ್ಲರೂ ಹುಟ್ಟುತ್ತಾರೆ, ಸಾಯುತ್ತಾರೆ, ಆದರೇ ಬತಿಕಿದ ನಾಲ್ಕುದಿನ ಏನು ಮಾಡಿದ್ದೀವಿ ಎನ್ನುವುದೇ ಮುಖ್ಯ, ಹಾಗಾಗಿ ಇರುವ ನಾಲ್ಕು ದಿನ ಸುಖ, ಶಾಂತಿಯಿಂದ, ದಾನ ಧರ್ಮ ಮಾಡುತ್ತಾ, ನಾಲ್ಕು ಜನಕ್ಕೆ ಒಳ್ಳೆಯದನ್ನು ಮಾಡುತ್ತಾ ಮುಂದಕ್ಕೆ ಸಾಗಬೇಕು ಎಂದು ತಿಳಿಸಿದರು.

# ಕಲಬುರಗಿ ವಿವಿಯಲ್ಲಿ ಕಳಪೆ ಆಹಾರ: ಹಾಸ್ಟೆಲ್‌ಗೆ ಬೀಗ ಜಡಿದು ವಿದ್ಯಾರ್ಥಿಗಳ ಪ್ರತಿಭಟನೆ



ಕಲಬುರಗಿ ವಿಶ್ವವಿದ್ಯಾಲಯದ ಸ್ನಾತಕೋತ್ತರ ವಿದ್ಯಾರ್ಥಿಗಳು ಸಮಾಜ ಕಲ್ಯಾಣ ಹಾಸ್ಟೆಲ್‌ನಲ್ಲಿ ಶುದ್ಧ ಕುಡಿಯುವ ನೀರು ಮತ್ತು ಕಳಪೆ ಆಹಾರ ನೀಡುತ್ತಿದ್ದಾರೆಂದು ಆರೋಪಿಸಿ ಹಾಸ್ಟೆಲ್‌ಗೆ ಬೀಗ ಜಡಿದು ಪ್ರತಿಭಟನೆ ನಡೆಸಿದರು.

**ಕಲಬುರಗಿ, ಏ.20–** ನಗರದಲ್ಲಿರುವ ಕಲಬುರಗಿ ವಿಶ್ವವಿದ್ಯಾಲಯದ ಆವರಣದಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಸ್ನಾತಕೋತ್ತರ ಬಾಲಕರ ವಸತಿ ನಿಲಯದ ವಿದ್ಯಾರ್ಥಿಗಳಿಗೆ ಶುದ್ಧ ಕುಡಿ ಯುವ ನೀರು ಸಿಗುತ್ತಿಲ್ಲ. ಕೊಳೆತ ತರಕಾರಿ ಬಳಸಿ ಕಳಪೆ ಆಹಾರ ತಯಾರಿಸಲಾಗುತ್ತಿದೆ. ರುಚಿ, ಶುಚಿ ಎರಡೂ ಮರೀಚಿಕೆಯಾಗಿದೆ ಎಂದು ಆರೋಪಿಸಿ ವಸತಿ ನಿಲಯದ ವಿದ್ಯಾರ್ಥಿಗಳು ಹಾಸ್ಟೆಲ್‌ಗೆ ಬೀಗ ಜಡಿದು ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ಮಾಡಿದರು.

ವಿದ್ಯಾರ್ಥಿ ಮುಖಂಡರಾದ ಆನಂದ್ ಮೇತ್ರೆ, ವೀರೇಶ್ ಜಾಧವ್ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ವಿದ್ಯಾರ್ಥಿಗಳು ಅಡುಗೆಗೆ ಬಳಸಲಾಗುತ್ತಿದ್ದ ಟೊಮೆಟೊಗಳನ್ನು ಪ್ರದರ್ಶಿಸಿ ಆಕ್ರೋಶ ಹೊರಹಾಕಿದರು. ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಈ ತನಕ ಊಟದ ಪ್ಲೇಟ್ ವಿತರಿಸಿಲ್ಲ. ಮೂರು ತಿಂಗಳಿನಿಂದ ಶುಚಿತ್ವ ಕಿಟ್‌ಗಳನ್ನು ವಿತರಿಸಿಲ್ಲ ಅಸಮಾಧಾನ ವ್ಯಕ್ತಪಡಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಗಿರೀಶ್ ರಂಜೋಳಕರ್ ಅವರು ಹೋರಾಟದ ಸ್ಥಳಕ್ಕೆ ಭೇಟಿ ನೀಡಿ ವಿದ್ಯಾರ್ಥಿಗಳ ಅಹವಾಲು ಆಲಿಸಿದರು. ವಿದ್ಯಾರ್ಥಿ ಗಳ ಬೇಡಿಕೆಗಳನ್ನು ಪೂರೈಸುವುದಾಗಿ ಭರವಸೆ ನೀಡಿದರು. ಬಳಿಕ ವಿದ್ಯಾರ್ಥಿಗಳು ಪ್ರತಿಭಟನೆ ಕೈಬಿಟ್ಟರು. ಈ ಸಂದರ್ಭದಲ್ಲಿ ಸಂಶೋಧನಾ ವಿದ್ಯಾರ್ಥಿ ಗಳ ಒಕ್ಕೂಟದ ಅಧ್ಯಕ್ಷ ಆನಂದ್ ಮೇತ್ರೆ, ವಸತಿ ನಿಲಯದ ಅಧ್ಯಕ್ಷ ರಾಕೇಶ್, ಉಪಾಧ್ಯಕ್ಷರಾದ ವಿರೇಶ್, ಸುನೀಲ್, ಸುಮಿತ್ ಸೇರಿದಂತೆ ಇತರ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಶುಕ್ರವಾರ ಮಧ್ಯಾಹ್ನದ ಹೊತ್ತಿಗೆ ತಂಪಾದ ಶುದ್ಧ ಕುಡಿಯುವ ನೀರು ಪೂರೈಸುವ ಯಂತ್ರವನ್ನು ಅಧಿಕಾರಿಗಳು ಹಾಸ್ಟೆಲ್‌ಗೆ ತಂದಿದ್ದಾರೆ. ವಿದ್ಯಾರ್ಥಿಗಳಿಗೆ ಊಟದ ತಟ್ಟೆಗಳನ್ನ ವಿತರಿಸಿದ್ದಾರೆ.

ಆಹಾರದ ಗುಣಮಟ್ಟವನ್ನು ಹೆಚ್ಚಿಸುವುದಾಗಿ ಅಧಿಕಾರಿಗಳು ಭರವಸೆ ನೀಡಿದ್ದಾರೆ ಎಂದು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದ ಆನಂದ್ ಮೇತ್ರೆ ಮತ್ತಿತರ ಹಾಸ್ಟೆಲ್ ವಿದ್ಯಾರ್ಥಿಗಳು ತಿಳಿಸಿದ್ದಾರೆ.

# ಶ್ರೀಧರಗಡ್ಡೆಯಲ್ಲಿ ಮಕ್ಕಳ ಬೇಸಿಗೆ ಶಿಬಿರ




**ಬಳ್ಳಾರಿ, ಏ.20–** ಮಕ್ಕಳಲ್ಲಿ ಉನ್ನತ ಮೌಲ್ಯಗಳನ್ನು ಬೆಳೆಸುವ ಉದ್ದೇಶದಿಂದ ಎಐಡಿಎಸ್‌ಓ ವಿದ್ಯಾರ್ಥಿ ಸಂಘಟನೆಯಿಂದ ಇಂದು ಶ್ರೀಧರಗಡ್ಡೆಯಲ್ಲಿ ಒಂದು ದಿನದ ಮಕ್ಕಳ ಬೇಸಿಗೆ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು.

ಶಿಬಿರವನ್ನು ಉದ್ದೇಶಿಸಿ ಜಿಲ್ಲಾ ಅಧ್ಯಕ್ಷರು ಕೆ.ಈರಣ್ಣರವರು ಮಾತನಾಡುತ್ತಾ, ಇಂದಿನ ಪ್ರಸ್ತುತ ಪರಿಸ್ಥಿತಿಯಲ್ಲಿ ಆಳುವ ಸರ್ಕಾರಗಳು ಯಾವುದೇ ಅಡೆತಡೆ ಇಲ್ಲದೆ ಅಶ್ಲೀಲತೆ, ಮದ್ಯಪಾನ, ಕ್ರೌರ್ಯತೆ ತುಂಬಿದ ಸಿನೆಮಾ, ಸಾಹಿತ್ಯಗಳನ್ನು ಹರಿಬಿಡುತ್ತಿವೆ. ಆದ್ದರಿಂದಾಗಿ ವಿದ್ಯಾರ್ಥಿಗಳು ಇಂದು ಮದ್ಯಸೇವನೆ, ಕೊಲೆ, ದರೋಡೆ, ಅತ್ಯಾಚಾರಗಳಂತಹ ಘಟನೆಯಲ್ಲಿ ಭಾಗಿಯಾಗಲು ಪ್ರೋತ್ಸಾಹ ನೀಡುತ್ತಿವೆ.

ಇಂತಹ ಮಕ್ಕಳಲ್ಲಿ ನವೋದಯ ಕಾಲದ ಮಹಾನ್ ನಾಯಕರದ ಈಶ್ವರ ಚಂದ್ರ ವಿದ್ಯಾಸಾಗರ್, ಸಾವಿತ್ರಿಬಾಯಿ ಫುಲೆ, ಜ್ಯೋತಿರಾವ್ ಫುಲೆ ಹಾಗೂ ಸ್ವಾತಂತ್ರ್ಯ ಹೋರಾಟಗಾರರಾದ ನೇತಾಜಿ ಸುಭಾಷ್‌ಚಂದ್ರ ಬೋಸ್, ಭಗತ್‌ಸಿಂಗ್, ಖುದಿರಾಮ್ ಬೋಸ್ ರವರ ಆದರ್ಶಗಳನ್ನು ಮೈಗೂಡಿಸಿಕೊಳ್ಳುವುದರ ಮೂಲಕ ಸಮಾಜದಲ್ಲಿ ಉನ್ನತ ನೀತಿ, ಉನ್ನತ ಮೌಲ್ಯ, ಸಂಸ್ಕೃತಿಗಳನ್ನು ಬೆಳೆಸಬೇಕು ಎಂದು ಕರೆ ನೀಡಿದರು.

ಶಿಬಿರದಲ್ಲಿ ಮಕ್ಕಳಿಗೆ ಸಣ್ಣ ಕಥೆಗಳ ಕುರಿತು ಚರ್ಚೆ, ಸಿನಿಮಾ ಪ್ರದರ್ಶನ, ಆಟಗಳು ಹಾಗೂ ಸಾಂಸ್ಕೃತಿಕ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿತ್ತು.

# ಬ್ರಾಹ್ಮಣ ಸಮಾಜದ ಮೇಲೆ ದೌರ್ಜನ್ಯ ನಿಲ್ಲದಿದ್ದರೆ ಬೀದಿಗಿಳಿದು ಹೋರಾಟ



**ಬಳ್ಳಾರಿ, ಏ.20–** ಜನಸಂಖ್ಯಾ ದೃಷ್ಟಿಯಿಂದ ಅಲ್ಪ ಸಂಖ್ಯಾತರಾದ ಬ್ರಾಹ್ಮಣ ಸಮಾಜದ ಮೇಲೆ ಇತ್ತೀಚಿನ ದಿನಗಳಲ್ಲಿ ದೌರ್ಜನ್ಯ ಹೆಚ್ಚುತ್ತಿದ್ದು ಇದು ನಿಲ್ಲಬೇಕು. ಇಲ್ಲದಿದ್ದರೆ ನಾವೂ ಪರುಶುರಾಮರು ಆಗಬೇಕಾಗುತ್ತದೆಂದು ಬಳ್ಳಾರಿಯ ಬ್ರಾಹ್ಮಣರ ಒಕ್ಕೂಟ ಹೇಳಿದೆ.

ನಗರದ ಸಂಗನಕಲ್ಲು ರಸ್ತೆಯ ಶಂಕರ ಮಠದಲ್ಲಿ ಸುದ್ದಿಗೋಷ್ಠಿ ನಡೆಸಿದ ಒಕ್ಕೂಟದ ಗೌರವ ಅಧ್ಯಕ್ಷ ಡಾ.ಬಿ.ಕೆ.ಸುಂದರ್, ಅಧ್ಯಕ್ಷ ಪ್ರಕಾಶ್ ರಾವ್, ಕಾರ್ಯದರ್ಶಿ ಬಿ.ಕೆ.ಬಿಎನ್ ಮೂರ್ತಿ, ಜಿಲ್ಲಾ ಪ್ರತಿನಿಧಿ ಡಾ.ಶ್ರೀನಾಥ್ ಡೊಕ್ಕಿ ಅವರು ಇತ್ತೀಚೆಗೆ ನಡೆದ ಇಂಜಿನೀಯರಿಂಗ್ ಪ್ರವೇಶದ (ಕೆಸೆಟ್) ಪರೀಕ್ಷೆ ಬರೆಯಲು ಹೋದ ಬ್ರಾಹ್ಮಣ ಸಮಾಜದ ವಿದ್ಯಾರ್ಥಿಗಳ ಜನಿವಾರ ತೆಗೆಸಿ ಪರೀಕ್ಷೆ ಬರೆಸಿದ್ದಾರೆ. ತೆಗೆಯದವರಿಗೆ ಪರೀಕ್ಷೆಗೆ ಅವಕಾಶ ನೀಡಿಲ್ಲ. ಇದನ್ನು ಖಂಡಿಸುತ್ತದೆ. ಪರಿಕ್ಷೆ ಬರೆಯದವರಿಗೆ ಮರು ಪರೀಕ್ಷೆಗೆ ಪರೀಕ್ಷಾ ಮಂಡಳಿ ಅವಕಾಶ ನೀಡಬೇಕು. ಜನಿವಾರ ತೆಗೆಸಿದವರಿಗೆ ಅಮಾನತು ಮಾಡಿದರೆ ಸಾಲದು ಅವರಿಗೆ ಕಠಿಣ ಶಿಕ್ಷೆ ಆಗಬೇಕು ಇಲ್ಲದಿದ್ದರೆ ನಾವೂ ಬೀದಿಗೆ ಇಳಿದು ಹೋರಾಟ ಮಾಡಬೇಕಾಗುತ್ತದೆಂದು ಎಚ್ಚರಿಕೆ ನೀಡಿದರು.

ರಾಜ್ಯದಲ್ಲಿ ನಡೆದಿದೆ ಎನ್ನಲಾದ ಜಾತಿ ಗಣತಿ ಅವೈಜ್ಞಾನಿಕವಾಗಿದೆ. ನಮ್ಮ ಸಮುದಾಯದ ಸಂಖ್ಯೆ 15 ಲಕ್ಷ ಎಂದು ಜಾತಿ ಗಣತಿಯಲ್ಲಿ ಹೇಳಿದೆ. ವಾಸ್ತವದಲ್ಲಿ ಹೆಚ್ಚಿದೆ. ಗಣತಿಗೆ ನಮ್ಮ ಮನೆಗೆ ಬಂದಿಲ್ಲ. ಇದು ಅವೈಜ್ಞಾನಿಕ ವರದಿ. ಇದನ್ನು ವಿರೋಧಿಸುತ್ತದೆ ಜಾರಿಗೆ ತರಬಾರದು. ಚಿತ್ರ ನಿರ್ದೇಶಕ ಅನುರಾಗ ಕಶಪ್ ತಮ್ಮ ಸಿನಿಮಾ ಪ್ರಚಾರಕ್ಕಾಗಿ ಕೀಳು ಅಭಿರುಚಿಯಿಂದ ಬ್ರಾಹ್ಮಣರ ಮೇಲೆ ಮೂತ್ರ ಮಾಡುತ್ತೇನೆಂದು ಹೇಳಿದ್ದನ್ನು ನಮ್ಮ ಒಕ್ಕೂಟ ಖಂಡಿಸುತ್ತದೆ. ಆತನ ಮೇಲು ಕ್ರಮ ಜರುಗಬೇಕು ಎಂದರು.

ನಮ್ಮ ಸಮುದಾಯದಲ್ಲಿರುವ ಅಡುಗೆ ಮಾಡುವವರು, ಪುರೋಹಿತರು ಸೇರಿದಂತೆ ಅನೇಕ ವೃತ್ತಿಗಳಲ್ಲಿ ಇರುವವರು ಆರ್ಥಿಕವಾಗಿ ಹಿಂದುಳಿದಿದ್ದಾರೆ. ಇಂತಹವರಿಗೆ ಉದ್ಯೋಗ ಮತ್ತು ಶಿಕ್ಷಣದಲ್ಲಿ ಮೀಸಲಾತಿ ನೀಡಲು ಇಡಬ್ಲ್ಯು ಎಸ್ ಜಾರಿಗೆ ತಂದರೂ ಉಪ ಯೋಗವಾಗುತ್ತಿಲ್ಲ. ಉದ್ದೇಶಪೂರ್ವಕ ವಾಗಿ ನಮ್ಮ ಸಮುದಾಯಕ್ಕೆ ಇಡಬ್ಲ್ಯುಎಸ್ ಪ್ರಮಾಣ ಪತ್ರ ನೀಡಲು ಅಧಿಕಾರಿಗಳು ಸತಾಯಿಸುತ್ತಿದ್ದಾರೆ.

ಬಳ್ಳಾರಿಯಲ್ಲಿ 25 ಸಾವಿರ ಜನತೆಗೆ ಕೇವಲ 30 ಜನರಿಗೆ ಮಾತ್ರ ಈ ಪ್ರಮಾಣ ಪತ್ರ ದೊರೆತಿದೆ. ಅದೂ ಶಿಕ್ಷಣಕ್ಕೆ ಮಾತ್ರ. ಈಮೀಸಲಾತಿಯಲ್ಲಿ ಒಂದೇ ಒಂದು ಉದ್ಯೋಗ ದೊರೆತಿಲ್ಲ ಎಂದ ಅವರು. ನೀಡುವ ಪ್ರಮಾಣ ಪತ್ರದ ಅವಧಿ ಕೇವಲ ಒಂದು ವರ್ಷಕ್ಕೆ ಮಾತ್ರ. ಬೇರೆಯವರಿಗೆ ಐದು ವರ್ಷಕ್ಕೆ ನೀಡಲಾಗುತ್ತದೆ. ನಮ್ಮ ಆರ್ಥಿಕ ಸ್ಥಿತಿ ಒಂದು ವರ್ಷದಲ್ಲಿ ಬದಲಾಗುತ್ತಾ ವಿನಾಕಾರಣ ನಮಗೆ ಈ ವಿಷಯದಲ್ಲಿ ಸಮಸ್ಯೆ ಮಾಡಲಾಗುತ್ತದೆ. ಪ್ರಮಾಣ ಪತ್ರ ಲಂಚದ ಹಣವಿಲ್ಲದೆ ಆಗುವುದಿಲ್ಲ ಎಂದು ಆರೋಪಿಸಿದರು.

# 371 (ಜೆ) ವಿಧಿಯ ಪರಿಣಾಮಕಾರಿ ಅನುಷ್ಠಾನಕ್ಕೆ ಒಗ್ಗಟ್ಟಿನ ಹೋರಾಟ: ಬಂದೇನವಾಜ್ ದರ್ಗಾ ಸಜ್ಜಾದ್ ಕರೆ



ಕಲಬುರಗಿ ನಗರದಲ್ಲಿ ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯಿಂದ ಬಂದೇನವಾಜ್ ದರ್ಗಾ ನಶೀನ್ ಆಗಿ ಅಧಿಕಾರ ವಹಿಸಿಕೊಂಡಿರುವ ಮತ್ತು ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷರಾಗಿ ನೇಮಕಗೊಂಡಿರುವ ಸಯ್ಯದ್ ಮೊಹ್ಮದ ಅಲಿ ಅಲ್ ಹುಸೇನಿ ಅವರಿಗೆ ಹೋರಾಟ ಸಮಿತಿಯ ಬಸವರಾಜ ದೇಶಮುಖ್ ಅವರಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದರು. ಹೋರಾಟ ಸಮಿತಿಯ ಡಾ.ಲಕ್ಷ್ಮಣ ದಸ್ತಿ ಮತ್ತಿತರರಿದ್ದರು.

**ಕಲಬುತಗಿ, ಏ.20–** ಈ ಪ್ರದೇಶಕ್ಕೆ ದೊರೆತಿರುವ 371 (ಜೆ) ವಿಧಿಯ ಪ್ರಯೋಜನಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಮತ್ತು ಕಲ್ಯಾಣ ಕರ್ನಾಟಕ ಪ್ರದೇಶದ ಹಿಂದುಳಿದಿರುವಿಕೆ ನಿವಾರಿಸುವ ಅಪೇಕ್ಷಿತ ಫಲಿತಾಂಶ ಪಡೆಯಲು 371 (ಜೆ) ವಿಧಿಯ ನಿಬಂಧನೆಗಳ ಅನುಷ್ಠಾನದಲ್ಲಿನ ಎಲ್ಲಾ ವೈಪರೀತ್ಯಗಳನ್ನು ಸರಿಪಡಿಸಲು ಸರ್ಕಾರವನ್ನು ಒತ್ತಾಯಿಸಲು ಸಮಾಜದ ಎಲ್ಲಾ ವರ್ಗಗಳು ಜಾತಿ–ಧರ್ಮ, ಪಕ್ಷ ಭೇದ ಮರೆತು ಒಗ್ಗಟ್ಟಿನ ಹೋರಾಟಕ್ಕೆ ಕೈಜೋಡಿಸಬೇಕೆಂದು ನಗರದ ಹಜರತ್ ಖಾಜಾ ಬಂದೇನವಾಜ್ ದರ್ಗಾದ ನಶೀನ್ ಸಯ್ಯದ್ ಮೊಹ್ಮದ ಅಲಿ ಅಲ್ ಹುಸೇನಿ ಕರೆ ನೀಡಿದರು.

ದರ್ಗಾದ ಸಜ್ಜಾದ್ ನಶೀನ್‌ರಾಗಿ ಅಧಿಕಾರ ಸ್ವೀಕರಿಸಿದ ಪ್ರಯುಕ್ತ ಮತ್ತು ಕರ್ನಾಟಕ ವಕ್ಫ್ ಮಂಡಳಿಯ ಅಧ್ಯಕ್ಷರನ್ನಾಗಿ ನೇಮಕಗೊಂಡಿರುವು ದರಿಂದ ಕಲ್ಯಾಣ ಕರ್ನಾಟಕ ಹೋರಾಟ ಸಮಿತಿ ನಗರದಲ್ಲಿ ನಡೆಸಿದ ಸನ್ಮಾನ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, 371 (ಜೆ) ವಿಧಿಯ ನಿಬಂಧನೆಗಳ ಅನುಷ್ಠಾನದಲ್ಲಿನ ವೈಪರೀತ್ಯಗಳ ಬಗ್ಗೆ ಕಾರ್ಯಕ್ರಮದಲ್ಲಿ ಭಾಗವಹಿಸಿದ ಗಣ್ಯರೆಲ್ಲರ ಮಾತುಗಳನ್ನು ಅನುಸರಿಸಿ, 371 (ಜೆ) ವಿಧಿಯ ಗಂಭೀರ ಆತಂಕಗಳನ್ನು ಗಮನಿಸಿ, ಸಮಾಜದ ಎಲ್ಲಾ ವರ್ಗಗಳ ಒಗ್ಗಟ್ಟಿನ ಹೋರಾಟದ ಮೂಲಕ ಈ ಎಲ್ಲಾ ಸಮಸ್ಯೆಗಳನ್ನು ಪರಿಹರಿಸಬಹುದು ಎಂದು ಹೇಳಿದರು.

ವಿವಿಧ ಶಿಕ್ಷಣ ಸಂಸ್ಥೆಗಳು ಮತ್ತು ಸಾಮಾಜಿಕ ಕಾರ್ಯಕರ್ತರು ಒಂದೇ ಸೂರಿನಡಿ ಸೇರಿ 371 (ಜೆ) ವಿಧಿಯ ನಿಬಂಧನೆಗಳ ಅನುಷ್ಠಾನದಲ್ಲಿನ ಅಸಮಾನತೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಕೈಗೆತ್ತಿಕೊಂಡಿರುವುದರ ಕುರಿತು ಹರ್ಷವ್ಯಕ್ತಪಡಿಸಿದರು. ಕಲ್ಯಾಣ ಕರ್ನಾಟಕ ಪ್ರದೇಶದ ಜನರಿಗೆ ಶಿಕ್ಷಣ ಮತ್ತು ಉದ್ಯೋಗ ಕ್ಷೇತ್ರಗಳಲ್ಲಿ ವಿಶೇಷ ಮೀಸಲಾತಿ ನೀಡುವ ಮೂಲಕ 371 (ಜೆ) ವಿಧಿಯ ಅನುಷ್ಠಾನದ ದಶಮಾನೋತ್ಸವ ಆಚರಣೆಯನ್ನು ಸಮಿತಿ ಆಯೋಜಿಸಲು ನಿರ್ಧರಿಸಿದರ ಬಗ್ಗೆ ಮಾತನಾಡಿ, 371 (ಜೆ) ವಿಧಿಯ ಪ್ರಮುಖ ಶಿಲ್ಪಿಗಳಲ್ಲಿ ಒಬ್ಬರಾದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಆಚರಣೆಗಳಿಗೆ ಆಹ್ವಾನಿಸಬೇಕು. ಸಮಿತಿಯ ಅಧ್ಯಕ್ಷ ಮತ್ತು ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ್ ಅವರು ತಮ್ಮ ಅಧ್ಯಕ್ಷತೆಯ ಭಾಷಣದಲ್ಲಿ, ದಶಮಾನೋತ್ಸವದ ಭಾಗವಾಗಿ ಸಮಿತಿಯು ಎಲ್ಲಾ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿಗಳ ಸಕ್ರಿಯ ಸಹಕಾರದೊಂದಿಗೆ ಎಲ್ಲಾ ಕಾಲೇಜುಗಳು ಮತ್ತು ವಿಶ್ವವಿದ್ಯಾಲಯಗಳಲ್ಲಿ ಜಾಗೃತಿ ಕಾರ್ಯಕ್ರಮಗಳ ಸರಣಿಯನ್ನು ನಡೆಸಲಿದೆ ಎಂದು ಹೇಳಿದರು.

ಬಸವರಾಜ ದೇಶಮುಖ್ ಅವರು, ಹುಸೇನಿಯವರೊಂದಿಗೆ ಸಮ್ಮತಿಸಿದರು ಮತ್ತು ಸಮಾಜದ ಎಲ್ಲಾ ವರ್ಗಗಳು ಒಗ್ಗಟ್ಟಿನಿಂದ ಎಲ್ಲಾ ಚಳುವಳಿಗಳನ್ನು ಬೆಂಬಲಿಸಿದರೆ ಮತ್ತು ಸಕ್ರಿಯವಾಗಿ ಭಾಗವಹಿಸಿದರೆ ಮಾತ್ರ ಯಾವುದೇ ಆಂದೋಲನ ಯಶಸ್ವಿಯಾಗಬಹುದು ಎಂದು ಹೇಳಿದರು. ಒಂದು ದಶಕದ ನಂತರವೂ 371 (ಜೆ) ವಿಧಿಯ ನಿಬಂಧನೆಗಳ ಅನುಷ್ಠಾನವು ತೃಪ್ತಿಕರವಾಗಿಲ್ಲ ಮತ್ತು ನಿಬಂಧನೆಗಳ ಅನುಷ್ಠಾನದಲ್ಲಿ ಮತ್ತು ಪ್ರದೇಶದ ಜನರಿಗೆ ಎಲ್ಲಾ ಕ್ಷೇತ್ರಗಳಲ್ಲಿ ಮೀಸಲಾತಿಯನ್ನು ವಿಸ್ತರಿಸುವಲ್ಲಿ ಅನೇಕ ವೈಪರೀತ್ಯಗಳಿವೆ ಎಂದು ಅವರು ಹೇಳಿದರು.

ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಗಳಲ್ಲಿ ಈ ಪ್ರದೇಶವು ನಿರ್ಲಕ್ಷ್ಯಕ್ಕೆ ಒಳಗಾಗುತ್ತಲೇ ಇದೆ ಮತ್ತು ಅನೇಕ ಶಾಲೆಗಳು ಮತ್ತು ಕಾಲೇಜುಗಳು ಅಗತ್ಯ ಶಿಕ್ಷಕರ ಕೊರತೆಯನ್ನು ಎದುರಿಸುತ್ತಿವೆ ಮತ್ತು ಆಸ್ಪತ್ರೆಗಳು ಸಹ ಅದೇ ಸಮಸ್ಯೆಯನ್ನು ಎದುರಿಸುತ್ತಿವೆ ಮತ್ತು ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಗಳಲ್ಲಿ ಶೇಕಡಾ 40 ಕ್ಕೂ ಹೆಚ್ಚು ಹುದ್ದೆಗಳು ಖಾಲಿಯಾಗಿವೆ ಎಂದು ಅವರು ಹೇಳಿದರು.

371 (ಜೆ) ವಿಧಿಯ ಪ್ರಯೋಜನಗಳನ್ನು ಪಡೆಯುವಲ್ಲಿ ಎದುರಾಗುವ ಸಮಸ್ಯೆಗಳ ಬಗ್ಗೆ ಸುದೀರ್ಘವಾಗಿ ಮಾತನಾಡಿದ ಬಿಜೆಪಿ ಎಂಎಲ್‌ಸಿ ಶಶಿಲ್ ಜಿ ನಮೋಶಿ, ಮೀಸಲಾತಿ ಷರತ್ತನ್ನು ವಿಭಾಗೀಕರಿಸುವ ಮೂಲಕ ರಾಜ್ಯ ಸರ್ಕಾರವು 371 (ಜೆ) ವಿಧಿಯ ನಿಬಂಧನೆಗಳ ಅನುಷ್ಠಾನಕ್ಕಾಗಿ ನಿಯಮಗಳು ಮತ್ತು ನಿಯಮಗಳನ್ನು ರೂಪಿಸುವಲ್ಲಿ ತಪ್ಪು ಮಾಡಿದೆ ಎಂದು ಹೇಳಿದರು. ಕಲ್ಯಾಣ ಕರ್ನಾಟಕ ಪ್ರದೇಶದ ಜನರಿಗೆ ಮೀಸಲಾತಿಯನ್ನು ಪರಿಶಿಷ್ಟ ಜಾತಿ ಮತ್ತು ಬುಡಕಟ್ಟು ಜನಾಂಗದವರಿಗೆ ವಿಸ್ತರಿಸು ವಂತೆಯೇ ಸರ್ಕಾರವು ಮೀಸಲಾತಿಯನ್ನು ವಿಸ್ತರಿಸಬೇಕು, ಮೊದಲು ಖಾಲಿ ಹುದ್ದೆಗಳ ಸಾಮಾನ್ಯ ವರ್ಗದ ಪ್ರಯೋಜನಗಳನ್ನು ಪಡೆಯಲು ಮತ್ತು ನಂತರ ಅವರಿಗೆ ಸಲ್ಲಬೇಕಾದ ಮೀಸಲಾತಿಯನ್ನು ಪಡೆಯಲು ಅವಕಾಶ ನೀಡಬೇಕು. ವಿವಿಧ ಸರ್ಕಾರಿ ಇಲಾಖೆಗಳಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿನ ಖಾಲಿ ಹುದ್ದೆಗಳನ್ನು ಪರಿಶಿಷ್ಟ ಜಾತಿ ಮತ್ತು ಬುಡಕಟ್ಟು ಜನಾಂಗದವರಂತೆ ಬ್ಯಾಕ್‌ಲಾಗ್ ಹುದ್ದೆಗಳೆಂದು ಪರಿಗಣಿಸಬೇಕು ಮತ್ತು ಅವುಗಳನ್ನು ಕಾಲಮಿತಿಯ ಆಧಾರದ ಮೇಲೆ ಭರ್ತಿ ಮಾಡಬೇಕು ಎಂದರು.

ಸಮಿತಿಯ ಅಧ್ಯಕ್ಷ ಶ್ರೀ ಲಕ್ಷ್ಮಣ್ ದಸ್ತಿ ತಮ್ಮ ಸ್ವಾಗತ ಮತ್ತು ಪ್ರಾಸ್ತಾವಿಕ ಭಾಷಣದಲ್ಲಿ 371 (ಜೆ) ವಿಧಿಯನ್ನು ವಾಸ್ತವಗೊಳಿಸಲು ನಡೆಸಿದ ದೀರ್ಘ ಹೋರಾಟವನ್ನು ನೆನಪಿಸಿಕೊಂಡರು ಮತ್ತು ಸಮಿತಿಯ ಮುಂದಿನ ಸಭೆಯನ್ನು ಸಜ್ಜಾದ್ ನಶೀನ್ ಅವರ ಅಧ್ಯಕ್ಷತೆಯಲ್ಲಿ ನಡೆಸಲಾಗುವುದು, ಅಲ್ಲಿ ದಶಮಾನೋತ್ಸವ ಆಚರಣೆಯ ದಿನಾಂಕಗಳನ್ನು ಅಂತಿಮಗೊಳಿಸಲಾಗುವುದು ಎಂದು ಹೇಳಿದರು. ಬಿ ಜಿ ಪಾಟೀಲ್, ಶರಣು ಬಸಪ್ಪಾ, ಉಪಕುಲಪತಿ ಪ್ರೊ. ಅನಿಲ್‌ಕುಮಾರ್ ಜಿ ಬಿಡವೆ, ಗುಲ್ಬರ್ಗ ವಿಶ್ವವಿದ್ಯಾಲಯದ ಮಾಜಿ ಉಪಕುಲಪತಿ ಪ್ರೊ. ದಯಾನಂದ ಅಗಸರ್ ಉಪಸ್ಥಿತರಿದ್ದರು. ಶರಣಬಸವ ವಿಶ್ವವಿದ್ಯಾಲಯದ ಕುಲಸಚಿವ ಪ್ರೊ. ಎಸ್.ಜಿ. ಡೊಳ್ಳೆಗೌಡರ ವಂದಿಸಿದರು.

# ಏ.30ರಂದು ಕಲಬುರಗಿ ಜಿಲ್ಲೆಯಾದ್ಯಂತ ಸಂಭ್ರಮದ ಬಸವ ಜಯಂತಿ ಆಚರಣೆಗೆ ಸೂಚನೆ



**ಕಲಬುರಗಿ, ಏ. 20:** ಇದೇ ಏಪ್ರಿಲ್ 30 ರಂದು ಜಿಲ್ಲೆಯಾದ್ಯಂತ ಸಂಭ್ರಮ-ಸಡಗರದಿಂದ ಬಸವ ಜಯಂತಿ ಆಚರಿಸಲು ಎಲ್ಲ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಸೂಚಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಯಂತ್ಯೋತ್ಸವ ಸಮಿತಿಯ ಸಂಯುಕ್ತಾಶ್ರಯದಲ್ಲಿ ಜಗತ್ ವೃತ್ತದಲ್ಲಿರುವ ಸಾಂಸ್ಕೃತಿಕ ನಾಯಕ ಬಸವೇಶ್ವರ ಪ್ರತಿಮೆಗೆ ಮಾಲಾರ್ಪಣೆ ಮಾಡುವುದು ಮತ್ತು ವೇದಿಕೆ ಕಾರ್ಯಕ್ರಮ ಆಯೋಜಿಸಲು ನಿರ್ಧರಿಸಲಾಯಿತು. ಕಾರ್ಯಕ್ರಮಕ್ಕೆ ಶಿಷ್ಟಾಚಾರದಂತೆ ಜಿಲ್ಲಾ ಉಸ್ತುವಾರಿ ಸಚಿವರು ಒಳಗೊಂಡಂತೆ ಚುನಾಯಿತ ಜನಪ್ರತಿನಿಧಿಗಳನ್ನು ಆಹ್ವಾನಿಸುವುದು, ಆಮಂತ್ರಣ ಪತ್ರಿಕೆ ಸಿದ್ಧಪಡಿಸಿ ಗಣ್ಯರಿಗೆ ಮುಂಚಿತವಾಗಿ ವಿತರಿಸಲು ಮತ್ತು ಉಪನ್ಯಾಸಕರನ್ನು ನಿಯೋಜಿಸಲು ಸಭೆಯಲ್ಲಿ ಒಮ್ಮತದ ನಿರ್ಧಾರ ಕೈಗೊಳ್ಳಲಾಯಿತು. ಡಿ.ಸಿ. ಬಿ.ಫೌಜಿಯಾ ತರನ್ನುಮ್ ಮಾತನಾಡಿ, ಜಿಲ್ಲೆಯಾದ್ಯಂತ ಎಲ್ಲಾ ಸರ್ಕಾರಿ ಕಚೇರಿ, ಶಾಲಾ-ಕಾಲೇಜುಗಳಲ್ಲಿ ಏಪ್ರಿಲ್ 30 ರಂದು ಬಸವ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಬೇಕು. ತಾಲೂಕಾ ಮಟ್ಟದಲ್ಲಿ ತಹಶೀಲ್ದಾರರು ಪೂರ್ವಭಾವಿ ಸಭೆ ನಡೆಸಿ ಅಗತ್ಯ ಕ್ರಮ ವಹಿಸಬೇಕು. ಕಲಬುರಗಿ ನಗರದಲ್ಲಿ ಜಿಲ್ಲಾಡಳಿತದಿಂದ ನಡೆಯುವ ಕಾರ್ಯಕ್ರಮದಲ್ಲಿ ಯಾವುದೇ ಲೋಪದೋಷವಾಗದಂತೆ ಸಂಬಂಧಪಟ್ಟ ಅಧಿಕಾರಿಗಳು ಎಚ್ಚರಿಕೆ ವಹಿಸಬೇಕು. ನಿರಂತರ ಕುಡಿಯುವ ನೀರು ಪೂರೈಕೆ, ವಿದ್ಯುತ್ ವ್ಯತ್ಯಯ ಆಗದಂತೆ ಎಚ್ಚರ ವಹಿಸಬೇಕು. ಜಗತ್ ವೃತ್ತ ಮತ್ತು ಬಸವೇಶ್ವರ ಪ್ರತಿಮೆ ಸುತ್ತ ಸ್ವಚ್ಛತೆ, ನೈರ್ಮಲ್ಯ ಕಾಪಾಡಬೇಕು ಮತ್ತು ಅಗತ್ಯ ಪೊಲೀಸ್ ಭದ್ರತೆ ಒದಗಿಸಬೇಕು.

ಶಾಸಕರು ಮತ್ತು ಜಯಂತ್ಯೋತ್ಸವ ಸಮಿತಿ ಅಧ್ಯಕ್ಷರಾಗಿರುವ ಎಂ.ವೈ.ಪಾಟೀಲ ಅವರು, ಈ ಬಾರಿ ಯಾರ ಬಳಿಯು ಜಯಂತಿ ಆಚರಣೆಗೆ ಚಂದಾ ಹಣ ಎತ್ತದೆ ಕಲಬುರಗಿಯಲ್ಲಿ ಎಲ್ಲಾ ಸಮಾಜದವರನ್ನು ಸೇರಿಸಿ ಅದ್ದೂರಿಯಾಗಿ ಬಸವ ಜಯಂತಿ ಆಚರಣೆ ಮಾಡಲು ನಿರ್ಧರಿಸಿದ್ದು, ಸಮ-ಸಮಾಜಕ್ಕೆ ದುಡಿದ ಬಸವಣ್ಣನವರ ಆಚಾರ-ವಿಚಾರಗಳು ರಾಜ್ಯದುದ್ದಕ್ಕೂ ತಲುಪುವಂತೆ ಮಾದರಿ ಜಯಂತಿ ಕಾರ್ಯಕ್ರಮಕ್ಕೆ ರೂಪುರೇಷೆ ಸಿದ್ಧಪಡಿಸಲಾಗುತ್ತಿದೆ. ಇದೇ ಸಂದರ್ಭದಲ್ಲಿ ಎಲ್ಲಾ ಶರಣರ 100 ವಚನಗಳನ್ನು ಒಳಗೊಂಡ ಕಿರುಪುಸ್ತಕ ಹಂಚಲಾಗುವುದು ಎಂದರು.

ಬಾಗಲಕೋಟೆಯ ಕೂಡಲ ಸಂಗಮದಲ್ಲಿ ಇದೇ ಏ.29 ಮತ್ತು 30 ರಂದು ಎರಡು ದಿನಗಳ ಕಾಲ "ಅನುಭವ ಮಂಟಪ-ಬಸವಾದಿ ಶರಣರ ವೈಭವ" ಕಾರ್ಯಕ್ರಮ ಆಯೋಜಿಸಿದ ಪ್ರಯುಕ್ತ ಈ ಬಗ್ಗೆ ನಾಡಿನಾದ್ಯಂತ ವ್ಯಾಪಕ ಪ್ರಚೂರಪಡಿಸಲು ಹೊರಟಿರುವ ರಥ ಯಾತ್ರೆಯು ಏ.24ರಂದು ಬೆಳಿಗ್ಗೆ ಕಲಬುರಗಿ ನಗರಕ್ಕೆ ಆಗಮಿಸಲಿದ್ದು, ಅಂದು ಬಸವ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಅಗಮಿಸಿ ರಥಕ್ಕೆ ಸ್ವಾಗತ ಕೋರಬೇಕು ಎಂದರು.

# ರಾಯಚೂರು, ಕೊಪ್ಪಳ, ಬಳ್ಳಾರಿ, ವಿಜಯನಗರ, ಹಾಲು ಒಕ್ಕೂಟದ ಅವ್ಯವಹಾರ ತನಿಖೆಯಾಗಲಿ: ವೈ.ಎಂ.ಸತೀಶ್

**ರಾಯಚೂರು, ಏ.20-** ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲೆಗಳನ್ನೊಳಗೊಂಡ ಹಾಲು ಒಕ್ಕೂಟದಲ್ಲಿ ಕಳೆದ ಒಂದು ವರ್ಷದಿಂದ ಕಾನೂನು ಬಾಹೀರವಾದ ಮತ್ತು ಸರ್ವಾಧಿಕಾರದ ಆಡಳಿತ ನಡೆಯುತ್ತಿರುವ ಕಾರಣ ಹಾಲು ಉತ್ಪಾದಕರು ಆರ್ಥಿಕವಾಗಿ ನಷ್ಟಕ್ಕೊಳಗಗಿ ಒಕ್ಕುಟವೂ ನಷ್ಟಕ್ಕೆ ಒಳಗಾಗಿದೆ. ಈ ಕುರಿತು ಸಮಗ್ರ ತನಿಖೆ ನಡೆಸಬೇಕೆಂದು ವಿಧಾನ ಪರಿಷತ್ ಸದಸ್ಯ ವೈ.ಎಂ.ಸತೀಶ ಆಗ್ರಹಿಸಿದರು.




ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ವಿಧಾನ ಪರಿಷತ್ ಸದಸ್ಯ ವೈ.ಎಂ.ಸತೀಶ್ ಅವರು ಮಾಧ್ಯಮಗಳೊಂದಿಗೆ ಮಾತನಾಡಿದರು.

ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಒಕ್ಕೂಟದ ಅಧ್ಯಕ್ಷ, ಮಾಜಿ ಶಾಸಕ ಎಲ್.ಬಿ.ಪಿ. ಭೀಮಾನಾಯ್ಕ ಅವರು ಹಾಲು ಉತ್ಪಾದಕ ರೈತರ ವಿರೋಧಿಗಳಾಗಿದ್ದಾರೆ. ತಮ್ಮ ವೈಯಕ್ತಿಕ ವಿಚಾರಗಳಿಗೆ ತಕ್ಕಂತೆ ಅಧಿಕಾರಿಗಳನ್ನು - ಸಿಬ್ಬಂದಿಗಳನ್ನು - ಕಾರ್ಮಿಕರನ್ನು ಹಾಗೂ ಆಡಳಿತ ಮಂಡಲಿಯನ್ನು ದುರುಪಯೋಗ ಮಾಡಿಕೊಂಡು, ಸಂಸ್ಥೆಯ ನಷ್ಟಕ್ಕೆ ಕಾರಣರಾಗಿದ್ದಾರೆ. ಸರ್ಕಾರ ತಕ್ಷಣವೇ ಎಚ್ಚೆತ್ತು ಆಡಳಿತಾಧಿ ಕಾರಿಗಳನ್ನು ನೇಮಕ ಮಾಡಿ, ಸಂಸ್ಥೆಯನ್ನು ಸಂರಕ್ಷಿಸಬೇಕು. ಒಕ್ಕೂಟಕ್ಕೆ ಒಟ್ಟು 21 ನಿರ್ದೇಶಕರನ್ನು ಹೊಂದಲು ಅವಕಾಶವಿದೆ. ಆದರೆ, ಪ್ರಸ್ತುತ ಕೇವಲ 17 ನಿರ್ದೇಶಕರನ್ನು ಹೊಂದಲು ಸರ್ವಸದಸ್ಯರು ಅನುಮೋದನೆ ನೀಡಿದ್ದಾರೆ. ಬಾಕಿ ಉಳಿದಿರುವ ನಾಲ್ಕು ನಿರ್ದೇಶಕ ಹುದ್ದೆಗಳನ್ನು ವಿಜಯನಗರ ಜಿಲ್ಲೆಗೇ ಪಡೆಯಲು ಹುನ್ನಾರ ನಡೆಸಿರುವ, ಭೀಮಾನಾಯ್ಕ ಅವರು ವ್ಯವಸ್ಥೆಗೆ, ಸಹಕಾರಿ ಕಾಯ್ದೆಗೆ ವಿರುದ್ಧವಾಗಿದ್ದಾರೆ. ಬಳ್ಳಾರಿ ಜಿಲ್ಲೆಗೆ ನಾಲ್ಕು ನಿರ್ದೇಶಕರ ಹುದ್ದಗಳು ಬೇಕು ಎಂದು ಹೇಳಿದ ಅವರು, ಈ ಕುರಿತು ನ್ಯಾಯಾಲಯದಲ್ಲಿ ದಾವೆ ಇದೆ ಎಂದರು.

ಕೆಎಂಆರ್‌ಸಿಯ ಅನುದಾನದಲ್ಲಿ ಘೋಷಣೆಯಾಗಿರುವ ಮೆಗಾಡೈರಿ ನಿರ್ಮಾಣಕ್ಕೆ ರಾಷ್ಟ್ರೀಯ ಡೈರಿ ಬೋರ್ಡ್ ಕೊಳಗಲ್ಲಿನಲ್ಲಿ ಸ್ಥಳ ಪರಿಶೀಲನೆ ಮಾಡಿ, ಒಪ್ಪಿಗೆ ನೀಡಿದ್ದು, ಜಿಲ್ಲಾಡಳಿತವೂ 15 ಎಕರೆ ಭೂಮಿಯನ್ನು ನೀಡಿದೆ. ಆದರೆ, ಜಿಲ್ಲಾಡಳಿತಕ್ಕೆ ಹಣವನ್ನು ದುರುದ್ದೇಶ ದಿಂದಲೇ ಪಾವತಿಸುತ್ತಿಲ್ಲ. ವಿಜಯ ನಗರಕ್ಕೆ ಬೇಕಾದರಲ್ಲಿ ಸರ್ಕಾರದಿಂದ ಮತ್ತೊಂದು ಮೆಗಾಡೈರಿಯನ್ನು ಅವರು ಸ್ಥಾಪಿಸಲಿ. ವಿಜಯನಗರ ಜಿಲ್ಲೆಯಲ್ಲಿ ಕ್ಯಾಟಲ್ ಫೀಡಿಂಗ್ ಫಾರ್ಮ್ ನೀಡಲಾಗಿದೆ ಎಂದರು.

ಒಕ್ಕೂಟದ ಹಾಲಿ ಆಡಳಿತ ಮಂಡಲಿಯ ಅಧಿಕಾರವಧಿಯು ಪೂರ್ಣಗೊಂಡಿದೆ. ಪ್ರಭಾರಿ ಮಂಡಲಿಯು ಯಾವುದೇ ರೀತಿಯ ಪ್ರಮುಖವಾದ ನಿರ್ಣಯಗಳನ್ನು ಕೈಗೊಳ್ಳುವಂತಿಲ್ಲ. ಆದರೂ, ರೈತರ ಪ್ರತೀ ಲೀಟರ್ ಹಾಲಿನ ಹಣದಲ್ಲಿ ರೂ. 1.50 ಕಡಿತ ಮಾಡಿ, ಸಂಸ್ಥೆಯ ನಷ್ಟವನ್ನು ಸರಿದೂಗಿಸಿಕೊಳ್ಳುತ್ತಿರುವುದು ರೈತರನ್ನು ಶೋಷಿಸುತ್ತಿರುವುದಕ್ಕೆ ಜೀವಂತ ಉದಾಹರಣೆ. ಕಡಿತ ಮಾಡಿರುವ ಹಣವನ್ನು ಶೀಘ್ರದಲ್ಲೇ ಪಾವತಿಸಬೇಕು. ಒಕ್ಕೂಟದ ಅಡಿಯಲ್ಲಿ ಅನೇಕ ಕೇಂದ್ರದಲ್ಲಿ ಎಐಡಿಡಿಬಿಯ ನಿಯಮ ಗಳನ್ನು - ಷರತ್ತುಗಳನ್ನು ಪಾಲಿಸುತ್ತಿಲ್ಲ. ಹಾಲು ಪ್ಯಾಕಿಂಗ್ ಕೇಂದ್ರಗಳಲ್ಲಿ ಸ್ವಚ್ಛತೆ, ಹಾಲಿನ ಗುಣಮಟ್ಟ, ತೂಕ ಮತ್ತು ಅಳತೆಯ ಪ್ರಮಾಣ ಇನ್ನಿತರೆ ವಿಚಾರಗಳನ್ನು ಸಂಪೂರ್ಣ ನಿರ್ಲಕ್ಷಿಸಲಾಗಿದೆ. ಈ ಕುರಿತು ಜಾಗೃತ ಅಧಿಕಾರಿಗಳು ಒಕ್ಕೂಟಕ್ಕೆ ವರದಿ ಸಲ್ಲಿಸಿದ್ದರೂ, ಈ ವರೆಗೂ ಅಧ್ಯಕ್ಷರು ದುರುದ್ದೇಶ ದಿಂದಲೇ ಗಮನ ನೀಡುತ್ತಿಲ್ಲ.

ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಹಾಲು ಒಕ್ಕೂಟದ ಮಾಜಿ ಅಧ್ಯಕ್ಷ ಎಚ್. ಹನುಮಂತಪ್ಪ ಅವರು, ಭೀಮಾ ನಾಯಕ್ ಅವರ ಆಡಳಿತಾವಧಿಯಲ್ಲಿಯೇ ಒಕ್ಕೂಟ ನಷ್ಟಕ್ಕೊಳಗಾಗಿದೆ. ಅಧಿಕಾರಿಗಳು ರಾಜಕಾರಣ ಮಾಡುತ್ತಿಲ್ಲ. ನಿವೃತ್ತ ಅಧಿಕಾರಿ ನಿರ್ದೇಶಕರಾಗಿ ಇಡೀ ವ್ಯವಸ್ಥೆಯನ್ನೇ ಹಾಳು ಮಾಡುತ್ತಿದ್ದಾರೆ.

ಸರ್ಕಾರ ತಕ್ಷಣವೇ ಎಚ್ಚೆತ್ತುಕೊಳ್ಳದಿದ್ದಲ್ಲಿ ಒಕ್ಕೂಟ ಮತ್ತು ಹಾಲು ಉತ್ಪಾದಕರು ನಷ್ಟಕ್ಕೊಳಗಾ ಗುತ್ತಾರೆ. ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಹಾಲು ಒಕ್ಕೂಟದ ನಿರ್ದೇಶಕ ವೀರಶೇಖರರೆಡ್ಡಿ ಅವರು, ಹಾಲಿ ಆಡಳಿತ ಮಂಡಲಿಯಲ್ಲಿ ಭೀಮಾ ನಾಯಕ್ ಅವರು ಸರ್ವಾಧಿಕಾರತ್ವ ತೋರುತ್ತಿದ್ದಾರೆ. ಅಧಿಕಾರಿಗಳು ಕರ್ತವ್ಯಲೋಪ ಮಾಡುವುದರ ಜೊತೆಯಲ್ಲಿ ಏಕಪಕ್ಷೀಯವಾಗಿ ವರ್ತಿಸುತ್ತಿದೆ. ಸರ್ಕಾರ ತಕ್ಷಣವೇ ಒಕ್ಕೂಟವನ್ನು ರಕ್ಷಿಸಬೇಕು ಎಂದರು.

# ಜನಿವಾರಕ್ಕಾಗಿ ಪರೀಕ್ಷೆ ನಿರಾಕರಣೆ: ಪ್ರಾಂಶುಪಾಲ, ಸಿಬ್ಬಂದಿ ಕರ್ತವ್ಯಲೋಪ- ಡಿಸಿ

**ಬೀದರ್, ಏ.20-** ಜನಿವಾರ ಧರಿಸಿದ ಕಾರಣಕ್ಕಾಗಿ ವಿದ್ಯಾರ್ಥಿ ಸುಚಿವ್ರತ ಕುಲಕರ್ಣಿ ಅವರಿಗೆ ಸಿಇಟಿ ಪರೀಕ್ಷೆ ಬರೆಯಲು ಅವಕಾಶ ಕಲ್ಪಸದಿರುವ ಘಟನೆಯ ಸಂಪೂರ್ಣ ತನಿಖೆ ಪೂರ್ಣಗೊಂಡಿದ್ದು, ಪರೀಕ್ಷಾ ಕೇಂದ್ರದ ಪ್ರಾಂಶುಪಾಲರು ಹಾಗೂ ಅಲ್ಲಿನ ಸಿಬ್ಬಂದಿ ಕರ್ತವ್ಯ ಲೋಪ ಎಸಗಿರುವುದು ದೃಢಪಟ್ಟಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮ ಸರ್ಕಾರಕ್ಕೆ ವರದಿ ಸಲ್ಲಿಸಿದ್ದಾರೆ.



ನಗರದ ಸಾಯಿ ಸ್ಫೂರ್ತಿ ಕಾಲೇಜು ಪರೀಕ್ಷಾ ಕೇಂದ್ರದ ಪ್ರಾಂಶುಪಾಲರೂ ಆದ ಉಪಮುಖ್ಯ ಅಧೀಕ್ಷಕ ಚಂದ್ರಶೇಖರ ಬಿರಾದಾರ ಮತ್ತು ಕಾಲೇಜಿನ ತಪಾಸಣಾ ಸಿಬ್ಬಂದಿ ದ್ವಿತೀಯ ದರ್ಜೆ ಸಹಾಯಕ ಸತೀಶ ಅವರು ನಿಯಮಾನುಸಾರ ಕರ್ತವ್ಯ ನಿರ್ವಹಿಸದೇ ಲೋಪ ಎಸಗಿರುವುದು ಕಂಡು ಬಂದಿದೆ. ಇವರನ್ನು ವಜಾಗೊಳಿಸಿ ಅನುಪಾಲನಾ ವರದಿ ಸಲ್ಲಿಸಲು ಸೂಚಿಸಲಾಗಿದೆ. ಪರೀಕ್ಷಾ ವೀಕ್ಷಕರಾಗಿದ್ದ ಔರಾದ ಆರ್‌ಎಫ್‌ಓ ಮೊದ್ದಸಿರ್ ಅವರು ಸರಿಯಾಗಿ ಕರ್ತವ್ಯ ನಿರ್ವಹಿಸದ ಕಾರಣ ಅವರಿಗೆ ಕಾರಣ ಕೇಳಿ ನೋಟೀಸ್ ಜಾರಿ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪ ಶರ್ಮ ಅವರು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕರಿಗೆ ಸಲ್ಲಿಸಿರುವ ವರದಿಯಲ್ಲಿ ತಿಳಿಸಿದ್ದಾರೆ.

ಏ.17ರಂದು ನಗರದ ಚೌಬಾರಾ ನಿವಾಸಿ ಸುಚಿವ್ರತ್ ಅವರು ಇಲ್ಲಿನ ಗುಂಪಾ ಸಮೀಪದ ಸಾಯಿ ಸ್ಫೂರ್ತಿ ಶಾಲೆಯಲ್ಲಿ ಕೆ-ಸಿಇಟಿ ಗಣಿತ ಪರೀಕ್ಷೆ ಬರೆಯಲು ಹೋಗಿದ್ದರು. ಆದರೆ, ಜನಿವಾರದ ಕಾರಣಕ್ಕಾಗಿ ಅವರಿಗೆ ಪರೀಕ್ಷೆ ಬರೆಯಲು ಅವಕಾಶ ನಿರಾಕರಿಸಲಾಯಿತು. ಘಟನೆಗೆ ಸಂಬಂಧಿಸಿದಂತ ತೀವ್ರ ವಿರೋಧ ವ್ಯಕ್ತವಾದ ನಂತರ ಸರ್ಕಾರ ಜಿಲ್ಲಾಧಿಕಾರಿಗಳಿಗೆ ತನಿಖೆ ಕೈಗೊಂಡು ವರದಿ ಸಲ್ಲಿಸಲು ಸೂಚಿಸಿತ್ತು. ಜಿಲ್ಲಾಧಿಕಾರಿಗಳು, ಉಪವಿಭಾಗಾಧಿಕಾರಿ ಹಾಗೂ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಉಪನಿರ್ದೇಶಕರಿಂದ ತನಿಖೆ ನಡೆಸಿದರು. ಸಿಸಿಟಿವಿ ಕ್ಯಾಮೆರಾಗಳನ್ನು ಪರಿಶೀಲಿಸಿ ಸಂಬಂಧಿಸಿದವರನ್ನು ವಿಚಾರಣೆಗೆ ಒಳಪಡಿಸಿದ ಅವರು, ಜಿಲ್ಲಾಧಿಕಾರಿಗಳಿಗೆ ವರದಿ ಸಲ್ಲಿಸಿದರು.

## ಪ್ರಿನ್ಸಿಪಾಲ್, ಸಿಬ್ಬಂದಿ ಅಮಾನತು

ಸಿಇಟಿ ಬರೆಯಲು ಬಂದಿದ್ದ ಅಭ್ಯರ್ಥಿಯ ಜನಿವಾರ ತೆಗೆಸಿದ ಆರೋಪದಲ್ಲಿ ತಪ್ಪಿತಸ್ಥ ಅಧಿಕಾರಿಗಳು ಹಾಗೂ ಕಾಲೇಜು ಸಿಬ್ಬಂದಿಯನ್ನು ಸೇವೆಯಿಂದ ವಜಾಗೊಳಿಸಲಾಗಿದೆ. ಸಿಇಟಿ ಪರೀಕ್ಷಾರ್ಥಿಗೆ ಪರೀಕ್ಷೆಗೆ ಅವಕಾಶ ನೀಡದ ಸಿಬ್ಬಂದಿಯನ್ನು ಸಸ್ಪೆಂಡ್ ಮಾಡಲಾಗಿದೆ. ಬೀದರ್‌ನ ಸಾಯಿ ಸ್ಫೂರ್ತಿ ಪಿಯು ಕಾಲೇಜಿನ ಪ್ರಾಂಶುಪಾಲರನ್ನು ಅಮಾನತುಗೊಳಿಸಲಾಗಿದೆ. ಇಂದು ಈ ಬಗ್ಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವರದಿ ಸಲ್ಲಿಸಿದ್ದ ಬೀದರ್ ಜಿಲ್ಲಾಧಿಕಾರಿ ಈ ಘಟನೆಯಲ್ಲಿ ಅಧಿಕಾರಗಳದ್ದೇ ತಪ್ಪು ಎಂದು ವರದಿ ಸಲ್ಲಿಸಿದ್ದರು.

ಸಿಇಟಿ ಪರೀಕ್ಷೆ ಬರೆಯಲು ಬಂದಿದ್ದ ವಿದ್ಯಾರ್ಥಿ ಜನಿವಾರ ಹಾಕಿದ್ದಾನೆಂಬ ಕಾರಣಕ್ಕೆ ಆತನಿಗೆ ಪರೀಕ್ಷೆ ಬರೆಯಲು ಅವಕಾಶ ನೀಡದ ಘಟನೆ ಬೀದರ್‌ನಲ್ಲಿ ನಡೆದಿತ್ತು. ಇದಕ್ಕೆ ತೀವ್ರ ಆಕ್ಷೇಪ ವ್ಯಕ್ತವಾಗಿತ್ತು. ಇಂದು ಈ ಬಗ್ಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವರದಿ ಸಲ್ಲಿಸಿದ್ದ ಬೀದರ್ ಜಿಲ್ಲಾಧಿಕಾರಿ ಈ ಘಟನೆಯಲ್ಲಿ ಅಧಿಕಾರದ್ದೇ ತಪ್ಪು ಎಂದು ವರದಿ ಸಲ್ಲಿಸಿದ್ದರು. ಅದರ ಬೆನ್ನಲ್ಲೇ ಈ ಘಟನೆ ನಡೆದ ಬೀದರ್‌ನ ಖಾಸಗಿ ಕಾಲೇಜಿನ ಪ್ರಾಂಶುಪಾಲ ಮತ್ತು ಆ ಕಾಲೇಜಿನ ಕೆಲವು ಸಿಬ್ಬಂದಿಯನ್ನು ಕೆಲಸದಿಂದ ಅಮಾನತು ಮಾಡಲಾಗಿದೆ.

ಸಿಇಟಿ ಬರೆಯಲು ಬಂದಿದ್ದ ಅಭ್ಯರ್ಥಿಯ ಜನಿವಾರ ತೆಗೆಸಿದ ಆರೋಪದಲ್ಲಿ ತಪ್ಪಿತಸ್ಥ ಅಧಿಕಾರಿಗಳು ಹಾಗೂ ಕಾಲೇಜು ಸಿಬ್ಬಂದಿಯನ್ನು ಅಮಾನತು ಮಾಡಲಾಗಿದೆ. ಪರೀಕ್ಷಾರ್ಥಿಗೆ ಪರೀಕ್ಷೆಗೆ ಅವಕಾಶ ನೀಡದ ಸಿಬ್ಬಂದಿಯನ್ನು ಸಸ್ಪೆಂಡ್ ಮಾಡಲಾಗಿದೆ. ಈ ಬಗ್ಗೆ ಉನ್ನತ ಶಿಕ್ಷಣ ಇಲಾಖೆ ಕಾರ್ಯದರ್ಶಿ ಕೆ.ಜಿ. ಜಗದೀಶ್ ಆದೇಶ ಹೊರಡಿಸಿದ್ದಾರೆ. ಬೀದರ್ ಜಿಲ್ಲಾಧಿಕಾರಿಯಿಂದ ವರದಿ ಸಲ್ಲಿಕೆ ಬೆನ್ನಲ್ಲೇ ಕ್ರಮ ಕೈಗೊಳ್ಳಲಾಗಿದೆ. ಬೀದರ್‌ನಲ್ಲಿರುವ ಸಾಯಿ ಸ್ಫೂರ್ತಿ ಪದವಿ ಪೂರ್ವ ಕಾಲೇಜು ಪ್ರಿನ್ಸಿಪಾಲ್ ಚಂದ್ರಶೇಖರ ಬಿರಾದಾರ್ ಹಾಗೂ ಆ ಕಾಲೇಜಿನ ತಪಾಸಣಾ ಸಿಬ್ಬಂದಿ ಸತೀಶ್ ಪವಾರ್ ಅವರನ್ನು ವಜಾಗೊಳಿಸಲಾಗಿದೆ.

# ಏ.24ರಂದು ಬಳ್ಳಾರಿ ನಗರದಲ್ಲಿ ಬಿಜೆಪಿಯ ಮೂರನೇ ಹಂತದ ಜನಾಕ್ರೋಶ ಯಾತ್ರೆ

**ಬಳ್ಳಾರಿ, ಏ.20-** ರಾಜ್ಯದಲ್ಲಿನ ಕಾಂಗ್ರೆಸ್‌ನ ಸಿದ್ದರಾಮಯ್ಯ ಸರ್ಕಾರದ ಬೆಲೆ ಏರಿಕೆ ನೀತಿ, ಭ್ರಷ್ಟಾಚಾರದ ವಿರುದ್ಧ ಬಿಜೆಪಿಯ ಮೂರನೇ ಹಂತದ ಜನಾಕ್ರೋಶ ಯಾತ್ರೆಯನ್ನು ಏ.21 ರಿಂದ ಆರಂಭಗೊಳ್ಳಲಿದೆ. ಏ 24 ರಂದು ಬಳ್ಳಾರಿ ನಗರದಲ್ಲಿ ನಡೆಯಲಿದೆಂದು ಪಕ್ಷದ ಜಿಲ್ಲಾ ಅಧ್ಯಕ್ಷ ಅನಿಲ್ ನಾಯ್ಡು ಹೇಳಿದ್ದಾರೆ.

ಈ ಯಾತ್ರೆಯು ನಗರದ ದುರ್ಗಮ್ಮ ಗುಡಿಯಿಂದ ಬೆಳಿಗ್ಗೆ 10ಕ್ಕೆ ಆರಂಭಗೊಳ್ಳಲಿದೆ. ಗಡಗಿ ಚೆನ್ನಪ್ಪ ಸರ್ಕಲ್‌ನಲ್ಲಿ ಸೇರಿ ಬೃಹತ್ ಪ್ರತಿಭಟನೆ ನಡೆಯಲಿದೆ ಅಲ್ಲಿ ನಾಯಕರಿಂದ ಭಾಷಣ ನಡೆಯಲಿದೆ. ಮಾಜಿ ಮುಖ್ಯ ಮಂತ್ರಿ ಸದಾನಂದಗೌಡ, ಪಕ್ಷದ ರಾಜ್ಯ ಅಧ್ಯಕ್ಷ ಬಿ.ವೈ. ವಿಜಯೇಂದ್ರ, ಪ್ರತಿ ಪಕ್ಷದ ನಾಯಕರಿಂದ ಆರ್. ಅಶೋಕ, ಚಲವಾದಿ ನಾರಾಯಣಸ್ವಾಮಿ ಮೊದಲಾದವರು ಇರಲಿದ್ದಾರೆ ಎಂದು ತಿಳಿಸಿದ್ದಾರೆ.

# 6ನೇ ತರಗತಿ ಪ್ರವೇಶ: ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಂದ ಅರ್ಜಿಗಳ ಆಹ್ವಾನ

**ವಿಜಯಪುರ, ಏ.20-** ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ 2025-26ನೇ ಸಾಲಿಗೆ ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರತಿಷ್ಠಿತ ಶಾಲೆಗಳಿಗೆ 6ನೇ ತರಗತಿ ಪ್ರವೇಶಕ್ಕೆ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ದಿನಾಂಕ:03-05-2025ರ ಕೊನೆಯ ದಿನವಾಗಿದೆ.. ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರ ಕಚೇರಿ ದೂ.083522 76124 ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.


# ಶಿಕ್ಷಣ-ಆರೋಗ್ಯ ಕೇಂದ್ರಗಳ ಅಭಿವೃದ್ಧಿ: ರಾಯಚೂರು ಜಿಲ್ಲೆಗೆ ಟೊಯೋಟಾ ಕಂಪನಿ ಮಹತ್ವದ ಕೊಡುಗೆ

**ರಾಯಚೂರು, ಏ. 20:** ಗುಣಮಟ್ಟದ ಶಿಕ್ಷಣ ಒದಗಿಸಲು ಮತ್ತು ಸಮಾಜದ ಸರ್ವತೋಮುಖ ಅಭಿವೃಧ್ಧಿಗೆ ಬದ್ಧವಾಗಿರುವ ಟೊಯೊಟಾ ಮೋಟರು ವಾಹನ ಸಂಸ್ಥೆಯು ರಾಯಚೂರು ಜಿಲ್ಲೆಗೆ ಮಹತ್ವದ ಸಮಾಜಾಭಿವೃದ್ಧಿ ಕಾರ್ಯಗಳನ್ನು ಕೈಕೊಂಡಿದೆ. ತನ್ನ ಕಾರ್ಪೋರೇಟ್ ಸಾಮಾಜಿಕ ಜವಾಬ್ದಾರಿ ಕಾರ್ಯಕ್ರಮದ ಭಾಗವಾಗಿ ರಾಯಚೂರು ಜಿಲ್ಲೆಯಲ್ಲಿ ಶಿಕ್ಷಣ ಮತ್ತು ಆರೋಗ್ಯ ಕೇಂದ್ರಗಳ ಅಭಿವೃದ್ಧಿಗೆ ಮುಮದಾಗಿದೆ.

ಜಿಲ್ಲೆಯು ಗುಣಮಟ್ಟದ ಶಿಕ್ಷಣ ಮತ್ತು ಆರೋಗ್ಯ ಸೇವೆಗಳಿಗೆ ಸೀಮಿತ ಸೌಕರ್ಯ ಹೊಂದಿದೆ. ಈ ನಿಟ್ಟಿನಲ್ಲಿ ಕೊರತೆಯನ್ನು ಎದುರಿಸುತ್ತಿದೆ. ಈ ಕೊರತೆಯನ್ನು ನೀಗಿಸಲು ಟಿಕೆಎಂ ಸರ್ಕಾರಿ ಶಾಲೆಗಳಲ್ಲಿ ಕಲಿಕೆಯ ವಾತಾವರಣವನ್ನು ಉತ್ತಮಗೊಳಿಸುವ ಮತ್ತು ತಾಯಿ ಹಾಗೂ ಮಗುವಿಗೆ ಉತ್ತಮ ಆರೋಗ್ಯ ಸೇವೆ ದೊರಕಿಸುವ ಉದ್ದೇಶದಿಂದ ಹಲವು ಯೋಜನೆಗಳನ್ನು ಕೈಗೊಂಡಿದೆ. ರಾಯಚೂರು ಜಿಲ್ಲೆಯು ಗುಣಮಟ್ಟದ ಶಿಕ್ಷಣ ಮತ್ತು ಆರೋಗ್ಯ ಸೇವೆಗಳಿಗೆ ಸೀಮಿತ ಸೌಕರ್ಯ ಹೊಂದಿದೆ. ಈ ನಿಟ್ಟಿನಲ್ಲಿ ಕೊರತೆಯನ್ನು ಎದುರಿಸುತ್ತಿದೆ. ಈ ಕೊರತೆಯನ್ನು ನೀಗಿಸಲು ಟಿಕೆಎಂ ಸರ್ಕಾರಿ ಶಾಲೆಗಳಲ್ಲಿ ಕಲಿಕೆಯ ವಾತಾವರಣವನ್ನು ಉತ್ತಮಗೊಳಿಸುವ ಮತ್ತು ತಾಯಿ ಹಾಗೂ ಮಗುವಿಗೆ ಉತ್ತಮ ಆರೋಗ್ಯ ಸೇವೆ ದೊರಕಿಸುವ ಉದ್ದೇಶದಿಂದ ಹಲವು ಯೋಜನೆಗಳನ್ನು ಕೈಗೊಂಡಿದೆ.

**66,342 ವಿದ್ಯಾರ್ಥಿಗಳಿಗೆ ಪ್ರಯೋಜನ :** ಟೊಯೋಟಾ ಕಂಪನಿಯು ರಾಯಚೂರಿನ ಶಾಲೆಗಳಿಗೆ ತರಗತಿ ಪೀಠೋಪಕರಣಗಳು, ನೀರಿನ ವ್ಯವಸ್ಥೆ, ಮತ್ತು ಅಡುಗೆ ಸಾಮಗ್ರಿಗಳನ್ನು ಒದಗಿಸಿದ್ದು, ಶಾಲೆಯನ್ನು ಆಕರ್ಷಕ ಕಲಿಕಾ ಸ್ಥಳಗಳನ್ನಾಗಿ ರೂಪಿಸಿದೆ. ಈ ವರ್ಷ ರಾಯಚೂರಿನ 66,342 ವಿದ್ಯಾರ್ಥಿಗಳು ಈ ಯೋಜನೆಗಳಿಂದ ನೇರ ಪ್ರಯೋಜನ ಪಡೆದಿದ್ದಾರೆ. ಇಲ್ಲಿಯವರಿಗೆ ವಿವಿಧ ಸ್ಥಳಗಳಲ್ಲಿ ಒಟ್ಟು 2,63,373 ವಿದ್ಯಾರ್ಥಿಗಳಿಗೆ ಈ ಯೋಜನೆಯಿಂದ ಪ್ರಯೋಜನ ಉಂಟಾಗಿದೆ.

ವೈದ್ಯಕೀಯ ಕ್ಷೇತ್ರದಲ್ಲಿಯೂ ಉತ್ತಮ ಕೆಲಸಗಳನ್ನು ಮಾಡುತ್ತಿರುವ ಟಿಕೆಎಂ, ರಾಯಚೂರಿನ ತಾಯಿ ಮತ್ತು ಮಗುವಿನ ಆರೈಕೆ ಕೇಂದ್ರಕ್ಕೆ ವಿವಿಧ ರೀತಿಯ ಮಹತ್ವದ ಮತ್ತು ರೋಗನಿರ್ಣಯ ವೈದ್ಯಕೀಯ ಉಪಕರಣಗಳನ್ನು ಒದಗಿಸಿ ಈ ಸರ್ಕಾರಿ ಆಸ್ಪತ್ರೆಗಳ ಸಾಮರ್ಥ್ಯ ಹೆಚ್ಚಿಸುವ ಕೆಲಸ ಮಾಡಿದೆ. ಈ ಸೌಲಭ್ಯಗಳಿಂದ ಆರಂಭಿಕ ಹಂತದಲ್ಲಿ ರೋಗ ನಿರ್ಣಯ ಮಾಡಬಹುದು. ಗರ್ಭಾವಸ್ಥೆಯ ತೊಡಕುಗಳನ್ನು ಕಡಿಮೆ ಮಾಡಬಹುದಾಗಿದೆ, ಮತ್ತು ಗರ್ಭಾವಸ್ಥೆಯ ಮೊದಲು ಮತ್ತು ನಂತರ ಉತ್ತಮ ಗುಣಮಟ್ಟದ ಆರೈಕೆ ನೀಡಬಹುದಾಗಿದೆ. ಈ ಮೂಲಕ ಸಾವಿರಾರು ಕುಟುಂಬಗಳಿಗೆ ನೆರವಾಗಲಿದೆ.



**ಜೀವ ರಕ್ಷಕ ಸಾಧನೆ ಪೂರೈಕೆ :** ಸಂಸ್ಥೆಯ ಈ ಯೋಜನೆಯ ಮೂಲತ ಡಿಫಿಬ್ರಿಲೇಟರ್‌ಗಳು, ಐಸಿಯು ಕಾಟ್ ಗಳು, ಸಿರಿಂಜ್ ಪಂಪ್‌ಗಳು, ರೀಸಸ್ಸೈಟೇಷನ್ ಕಿಟ್‌ಗಳು ಮತ್ತು ಶಸ್ತ್ರಚಿಕಿತ್ಸಾ ಉಪಕರಣಗಳಂತಹ ಹಲವಾರು ಜೀವರಕ್ಷಕ ಸಾಧನಗಳನ್ನು ನೀಡಲಾಗಿದೆ. ಅದರಲ್ಲೂ ಪ್ರಮುಖವಾಗಿ ಹೆಮಾಟಾಲಜಿ ಅನಾಲೈಸರ್, ಡಾಪ್ಲರ್ ಮತ್ತು ಎಕೋ ಫೀಚರ್ ಗಳುಳ್ಳ ಯುಎಸ್‌ಜಿ ಸ್ಕ್ಯಾನರ್, ಹಾರ್ಮೋನ್ ಅನಾಲೈಸರ್, ಇಸಿಜಿ ಯಂತ್ರಗಳು, ಮತ್ತು ಶ್ರವಣ ಕಾರ್ಯ ಪರೀಕ್ಷೆ ವ್ಯವಸ್ಥೆ ಸೇರಿದಂತೆ ಹಲವಾರು ರೋಗನಿರ್ಣಯ ವ್ಯವಸ್ಥೆ ಕಲ್ಪಿಸಲಾಗಿದೆ. ಜೊತೆಗೆ ಸ್ಟ್ರೆಚರ್ ಟ್ರಾಲಿ, ಓಟಿ ಟ್ರಾಲಿಗಳು, ಐಎಲ್‌ಆರ್, ಬ್ಲಡ್ ಬ್ಯಾಗ್ ಸೀಲರ್, ಎಎಲ್‌ಎಸ್ ಆಂಬ್ಯುಲೆನ್ಸ್, ಮತ್ತು ವೀಲ್‌ಚೇರ್ ನಂತಹ ಸಾಮಾನ್ಯ ಉಪಕರಣಗಳನ್ನೂ ಸಂಸ್ಥೆಯು ನೀಡಿದೆ. 18,000ಕ್ಕೂ ಹೆಚ್ಚು ಜನರಿಗೆ ಪ್ರಯೋಜನ: ಈ ಯೋಜನೆಗಳ ಮೂಲಕ ಈ ವರ್ಷ ರಾಯಚೂರಿನ 18,000ಕ್ಕೂ ಹೆಚ್ಚು ಜನರಿಗೆ ಪ್ರಯೋಜನ ಒದಗಿಸಲಾಗಿದೆ. ಒಟ್ಟಾರೆಯಾಗಿ 19,20,429 ವ್ಯಕ್ತಿಗಳಿಗೆ ಈ ಯೋಜನೆಗಳ ಮೂಲಕ ನೆರವು ಒದಗಿಸಲಾಗಿದೆ.

ಈ ಕುರಿತು ಮಾತನಾಡಿರುವ ಟಿಕೆಎಂನ ಮುಖ್ಯ ಸಂವಹನ ಅಧಿಕಾರಿ, ಹಿರಿಯ ಉಪಾಧ್ಯಕ್ಷ ಮತ್ತು ರಾಜ್ಯ ವ್ಯವಹಾರಗಳ ಮುಖ್ಯಸ್ಥರಾದ ಸುದೀಪ್ ದಳವಿ ಅವರು ಹರ್ಷ ವ್ಯಕ್ತಪಡಿಸಿದರು. ನಿಜವಾದ ಅಭಿವೃದ್ಧಿ ಆರ್ಥಿಕ ಸಾಧನೆಗಳನ್ನು ಮೀರಿದ್ದಾಗಿದ್ದು, ನಾವು ಕಾರ್ಯನಿರ್ವಹಿಸುವ ಸಮಾಜದ ಅಭಿವೃದ್ಧಿಯೇ ನಿಜವಾದ ಪ್ರಗತಿಯಾಗಿದೆ. 'ಒಟ್ಟಿಗೆ ಬೆಳೆಯುವ' ನಮ್ಮ ಸಿದ್ಧಾಂತದ ಆಧಾರವಾಗಿ ನಮ್ಮ ಸಿಎಸ್‌ಆರ್ ಕಾರ್ಯಗಳು ನಡೆಯುತ್ತಿದೆ ಎಂದರು.

**ಉತ್ತಮ ಸಮಾಜ ನಿರ್ಮಿಸುವ ಬದ್ಧತೆ :** ಈ ಮೂಲಕ ಸ್ಥಳೀಯ ಪ್ರದೇಶಗಳ ಅಗತ್ಯತೆಗಳನ್ನು ಪರಿಹರಿಸುವ ಮೂಲಕ ಸುಸ್ಥಿರ ಪರಿಣಾಮವನ್ನು ಸೃಷ್ಟಿಸುವ ಕಡೆಗೆ ಗಮನ ಕೇಂದ್ರೀಕರಿಸಿದ್ದೇವೆ. ರಾಯಚೂರಿನಲ್ಲಿ ಶಾಲೆಗಳಿಗೆ ಪೀಠೋಪಕರಣ, ಶುದ್ಧ ಕುಡಿಯುವ ನೀರು, ಮತ್ತು ಅಡುಗೆ ಸಾಮಗ್ರಿಗಳಂತಹ ಅಗತ್ಯ ಸಂಪನ್ಮೂಲಗಳನ್ನು ಒದಗಿಸುವ ಮೂಲಕ ಶಿಕ್ಷಣ ವ್ಯವಸ್ಥೆಯನ್ನು ವೃದ್ಧಿಗೊಳಿಸಿದ್ದೇವೆ. ತಾಯಿ ಮತ್ತು ಮಗು ಆರೈಕೆ ಕೇಂದ್ರಗಳಿಗೆ ಅತ್ಯಾಧುನಿಕ ರೋಗನಿರ್ಣಯ ಮತ್ತು ಜೀವರಕ್ಷಕ ವೈದ್ಯಕೀಯ ಉಪಕರಣಗಳನ್ನು ಒದಗಿಸುವ ಮೂಲಕ ತಾಯಿ ಮತ್ತು ಮಗುವಿಗೆ ಉತ್ತಮ ಆರೋಗ್ಯ ಸೇವೆ ಒದಗಿಸುವಂತೆ ನೋಡಿಕೊಂಡಿದ್ದೇವೆ. ಈ ಯೋನೆಯು 'ಅತ್ಯುತ್ತಮ ಕಾರುಗಳ' ಜೊತೆಗೆ 'ಅತ್ಯುತ್ತಮ ಸಮಾಜ' ರೂಪಿಸುವ ನಮ್ಮ ಬದ್ಧತೆ ಕಂಪನಿ ತೋರಿಸುತ್ತದೆ ಎಂದು ವಿವರಿಸಿದರು.

# ಏ.30ರಂದು ಬಸವ ಜಯಂತಿ ಆಚರಣೆ

**ವಿಜಯಪುರ, ಏ.20-** ಏಪ್ರಿಲ್ 30 ರಂದು ಬಸವ ಜಯಂತಿ ಕಾರ್ಯಕ್ರಮ ವನ್ನು ಅತ್ಯಂತ ಅರ್ಥ ಪೂರ್ಣ ಹಾಗೂ ವ್ಯವಸ್ಥಿತವಾಗಿ ಆಚ ರಿಸಲು ನಿರ್ಧರಿಸ ಲಾಯಿತು. ಶನಿವಾರ ಅಪರ ಜಿಲ್ಲಾಧಿಕಾರಿ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬಸವ ಜಯಂತಿ ಅಂಗವಾಗಿ



ಏಪ್ರಿಲ್ 30ರ ಬೆಳಿಗ್ಗೆ 08 ಗಂಟೆಗೆ ನಗರದ ಜಗಜ್ಯೋತಿ ಬಸವೇಶ್ವರ ಪ್ರತಿಮೆಗೆ ಮಾಲಾರ್ಪಣೆ, ಬೆಳಿಗ್ಗೆ 09 ಗಂಟೆಗೆ ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನದಿಂದ ವಿವಿಧ ಜಾನಪದ ಕಲಾ ತಂಡಗಳೊಂದಿಗೆ ಶ್ರೀ ಬಸವೇಶ್ವರ ಅವರ ಭಾವಚಿತ್ರದ ಮೆರವಣಿಗೆ ಹಾಗೂ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ಏರ್ಪಡಿಸಲು ನಿರ್ಧರಿಸಲಾಯಿತು. ಜಯಂತಿ ಕಾರ್ಯಕ್ರಮದಲ್ಲಿ ಮಹನೀಯರ ವಿಚಾರಧಾರೆಗಳನ್ನು ಜನರಿಗೆ ತಲುಪಿಸುವ ನಿಟ್ಟಿನಲ್ಲಿ ಉಪನ್ಯಾಸ, ಸಂಗೀತ ಕಾರ್ಯಕ್ರಮ ಏರ್ಪಡಿಸಲು ನಿರ್ಧರಿಸಲಾಯಿತು. ಅಂದು ನಗರದ ಎಲ್ಲ ಮಹನೀಯರ ವೃತ್ತಗಳನ್ನು ಸ್ವಚ್ಛಗೊಳಿಸಿ ದೀಪಾಲಂಕಾರ ಮಾಡುವಂತೆ ಮಹಾನಗರ ಪಾಲಿಕೆ ಅಧಿಕಾರಿಗಳಿಗೆ ಸೂಚಿಸಲಾಯಿತು. ಕರ್ನಾಟಕದ ಸಾಂಸ್ಕೃತಿಕ ನಾಯಕರಾದ ವಿಶ್ವಗುರು ಬಸವಣ್ಣ ನವರ ಬದುಕು, ಸಂದೇಶ ಮತ್ತು ಚಿಂತನೆಗಳನ್ನು ನಾಡಿನಾದ್ಯಂತ ವ್ಯಾಪಕವಾಗಿ ಪ್ರಚುರಪಡಿಸುವ ನಿಟ್ಟಿನಲ್ಲಿ 'ಅನುಭವ ಮಂಟಪ-ಬಸವಾದಿ ಶರಣರ ವೈಭವ ರಥ ಯಾತ್ರೆಯು ಕಲಬುರಗಿ ಜಿಲ್ಲೆಯಿಂದ ನಮ್ಮ ಜಿಲ್ಲೆಗೆ ಏಪ್ರಿಲ್ 24ರಂದು ಆಗಮಿಸಲಿದೆ. ಜಿಲ್ಲೆಗೆ ಆಗಮಿಸುವ ರಥಯಾತ್ರೆಗೆ ಭವ್ಯ ಸ್ವಾಗತ ಕೋರುವ ಹಿನ್ನೆಲೆಯಲ್ಲಿ ಈ ಸಂದರ್ಭದಲ್ಲಿ ಎಲ್ಲರೂ ಉಪಸಿತರಿರುವಂತೆ ಸಭೆಯಲ್ಲಿ ಸೂಚಿಸಲಾಯಿತು.

# ಸರ್ಕಾರಿ ನೌಕರರೆಂದು ಪರಿಗಣಿಸಿ: ಪೌರ ನೌಕರರಿಂದ ಕಪ್ಪುಪಟ್ಟಿ ಧರಿಸಿ ಧರಣಿ

**ಬೀದರ್, ಏ.20-** ತಮ್ಮನ್ನು ಸರಕಾರಿ ನೌಕರರು ಎಂದು ಪರಿಗಣಿಸುವುದು, ಆರೋಗ್ಯ ಸಂಜೀವಿನಿ ಯೋಜನೆ ಜಾರಿಗೊಳಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಕರ್ನಾಟಕ ರಾಜ್ಯ ಪೌರ ನೌಕರರ ಸಂಘವು, ತೋಳಿಗೆ ಕಪ್ಪುಪಟ್ಟಿ ಧರಿಸಿ ಕೆಲಸ ಮಾಡುವ ಮೂಲಕ ಸಾಂಕೇತಿಕ ಹೋರಾಟ ಆರಂಭಿಸಿದೆ.

ರಾಜ್ಯ ಪರಿಷತ್ತಿನ ಕಾರ್ಯಕಾರಣಿ ಸಭೆ ನಡೆಸಿದ್ದ ಸಂಘವು, ಬೇಡಿಕೆ ಈಡೇರಿಕೆಗಾಗಿ ಗಡುವು ಕೊಟ್ಟಿದೆ. ಈ ಅವಧಿಯಲ್ಲಿ ಕಪ್ಪುಪಟ್ಟಿ ಧರಿಸಿ ಕರ್ತವ್ಯ ನಿರ್ವಹಿಸುವುದು, ಸ್ಥಳೀಯ ಜನಪ್ರತಿನಿಧಿಗಳಿಗೆ ಮನವಿ ಸಲ್ಲಿಕೆ ಸೇರಿದಂತೆ ವಿವಿಧ ರೀತಿಯ ಪ್ರತಿಭಟನೆ ಮೂಲಕ ಸರಕಾರದ ಗಮನ ಸೆಳೆಯಲು ನೌಕರರಿಗೆ ಸೂಚನೆ ನೀಡಿದೆ. ಔರಾದ್ ಪಟ್ಟಣದಲ್ಲಿಯೂ ಪೌರ ನೌಕರರು ಸಾಂಕೇತಿಕ ಪ್ರತಿಭಟನೆ ಆರಂಭಿಸಿದೆ ಎಂದು ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ಜಿಲ್ಲಾಧ್ಯಕ್ಷ ಸೈಯದ್ ಖಾನ್ ತಿಳಿಸಿದರು.



ಈ ಕುರಿತು ಪಪಂ ಮುಖ್ಯಾಧಿಕಾರಿ ಸ್ವಾಮಿದಾಸ ಅಣದೂರೆ ಅವರಿಗೆ ಮನವಿಪತ್ರ ಸಲ್ಲಿಸಿದರು. ಪ್ರಮುಖರಾದ ಪೌರ ನೌಕರರ ಸಂಘದ ಶಾಖಾ ಅಧ್ಯಕ್ಷ ಎಂ.ಡಿ ಸಮೀ, ಸ್ವಾಮಿದಾಸ ಮಸಕೆ,ಚಂದ್ರಪ್ಪಾ ತಿಪ್ಪಣ್ಣ, ರೋಹಿದಾಸ, ನರಸಿಂಗ, ಸಂಜು,ಮಾರುತಿ ಲಕ್ಷ್ಮೀಬಾಯಿ, ಸೋನಮ್ಮ, ಮೊಗಲಮ್ಮ, ಸರಸ್ವತಿ ಸೇರಿದಂತೆ ಅನೇಕರಿದ್ದರು.

ಕಾರ್ಯಕಾರಣಿಯಲ್ಲಿ ಕೈಗೊಂಡ ನಿರ್ಣಯಗಳನ್ನು ಪೌರಾಡಳಿತ ನಿರ್ದೇಶನಾಲಯಕ್ಕೆ ಸಲ್ಲಿಸಿದ್ದೇವೆ. ಅದರ ಬೆನ್ನಲ್ಲೇ ರಾಜ್ಯದಾದ್ಯಂತ ಎಲ್ಲಾ ಸ್ಥಳೀಯ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿರುವ ಪೌರ ನೌಕರರು ಕಪ್ಪುಪಟ್ಟಿ ಧರಿಸಿ ಕೆಲಸ ಮಾಡುವ ಮೂಲಕ ಸಾಂಕೇತಿಕವಾಗಿ ಪ್ರತಿಭಟನೆ ಶುರು ಮಾಡಿದ್ದೇವೆ. ನಮ್ಮ ನ್ಯಾಯಯುತವಾದ ಬೇಡಿಕೆಗಳನ್ನು ಈಡೇರಿಸುವಂತೆ ಪೌರಾಡಳಿತ ಸಚಿವರು ಮತ್ತು ಉನ್ನತ ಅಧಿಕಾರಿಗಳಿಗೆ ಹಲವು ವರ್ಷಗಳಿಂದ ಒತ್ತಾಯಿಸುತ್ತಲೇ ಬಂದಿದ್ದೇವೆ. ಲೆಕ್ಕವಿಲ್ಲದಷ್ಟು ಸಲ ಮನವಿ ಸಲ್ಲಿಸಿದ್ದೇವೆ. ಆದರೂ, ಸರಕಾರ ಸ್ಪಂದಿಸಿಲ್ಲ ಎಂದು ಅಸಮಧಾನ ವ್ಯಕ್ತಪಡಿಸಿದರು. ಪೌರ ನೌಕರರ ವಿಷಯದಲ್ಲಿ ಮಲತಾಯಿ ಧೋರಣೆ ಅನುಸರಿಸುತ್ತಲೇ ಬಂದಿದೆ ಎಂದು ದೂರಿದರು.

ಹೊರಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುತ್ತಿರುವ ನೀರು ಸರಬರಾಜು ಸಹಾಯಕರು ವಾಹನ ಚಾಲಕರು ಬೀದಿದೀಪ ನಿರ್ವಹಣೆಗಾರರು ಲೋಡರ್ಸ್ ಉದ್ಯಾನ ನಿರ್ವಹಣೆಗಾರರು ಕಾವಲುಗಾರರು ಸ್ಯಾನಿಟರಿ ಮೇಲ್ವಿಚಾರಕರು ದಿನಗೂಲಿ ಮತ್ತು ಕ್ಷೇಮಾಭಿವೃದ್ಧಿ ನೌಕರರು ಸೇರಿದಂತೆ ವಿವಿಧ ವೃಂದಗಳಲ್ಲಿ ಇರುವವರನ್ನು ಕಾಯಂ ಮಾಡಬೇಕು. ನೌಕರರಿಗೆ ಸರಕಾರದ ಎಸ್‌ಎಫ್‌ಸಿ (ರಾಜ್ಯ ಹಣಕಾಸು ಆಯೋಗ) ಮುಕ್ತನಿದಿ ,ಯಿಂದ ವೇತನ ಪಾವತಿಸಬೇಕು. ಐ.ಪಿ.ಡಿ ಸಾಲಪ್ಪ ವರದಿ ಜಾರಿ ಗೊಳಿಸಬೇಕು. ಗ್ರಾಮ ಪಂಚಾಯಿತಿ ನೌಕರರಂತೆ ಪೌರ ನೌಕರರನ್ನು ಸಹ ಸರಕಾರಿ ನೌಕರರು ಎಂದು ಪರಿಗಣಿಸಿ ಸೌಲಭ್ಯಗಳನ್ನು ನೀಡಬೇಕು ಎಂದು ಒತ್ತಾಯಿಸಿದರು.

# ಕಾಶ್ಮೀರದ ರಂಬಾನ್‌ನಲ್ಲಿ ಪ್ರವಾಹ ಪರಿಸ್ಥಿತಿ: ಮೂವರ ಸಾವು

## ಮುಂದುವರಿದ ರಕ್ಷಣಾ ಕಾರ್ಯಚರಣೆ; ಇಂದು ಮಳೆಯ ಎಚ್ಚರಿಕೆ

**ಶ್ರೀನಗರ,ಇ.20:** ಜಮ್ಮು ಮತ್ತು ಕಾಶ್ಮೀರದ ರಂಬಾನ್ ಜಿಲ್ಲೆಯಲ್ಲಿ ಭಾರೀ ಮಳೆಯಿಂದ ಉಂಟಾದ ಹಠಾತ್ ಪ್ರವಾಹದಿಂದ ಕನಿಷ್ಠ ಮೂವರು ಮೃತಪಟ್ಟಿದ್ದಾರೆ, ಓರ್ವ ಕಾಣೆಯಾಗಿದ್ದು ನೂರಕ್ಕೂ ಅಧಿಕ ಜನರನ್ನು ರಕ್ಷಿಸಲಾಗಿದೆ. ಈ ದುರಂತವು ರಂಬಾನ್ ಜಿಲ್ಲೆಯ ಗ್ರಾಮೀಣ ಮತ್ತು ನಗರ ಪ್ರದೇಶಗಳ ಜನಜೀವನವನ್ನು ಸಂಪೂರ್ಣವಾಗಿ ಅಸ್ತವ್ಯಸ್ತಗೊಳಿಸಿದೆ. ಶನಿವಾರ ರಾತ್ರಿ ರಂಬಾನ್ ಜಿಲ್ಲೆಯಾದ್ಯಂತ ಧಾರಾಕಾರ ಮಳೆ ಸುರಿದಿದೆ. ಈ ಭಾರೀ ಮಳೆಯಿಂದಾಗಿ ಚೆನಾಬ್ ನದಿಯ ಬಳಿಯ ಧರಮ್ಕುಂಡ್ ಗ್ರಾಮದಲ್ಲಿ ಹಠಾತ್ ಪ್ರವಾಹವು ಅಪಾರ ಹಾನಿಯನ್ನುಂಟುಮಾಡಿತು, ಸ್ಥಳೀಯ ತೊರೆಗಳು ಮತ್ತು ನದಿಗಳು ಉಕ್ಕಿ ಹರಿದಿದ್ದು, ಗ್ರಾಮಗಳು ಮತ್ತು ಕೆಲವು ಪಟ್ಟಣ ಪ್ರದೇಶಗಳಲ್ಲಿ ನೀರು ನುಗ್ಗಿದೆ. ಪ್ರವಾಹದಿಂದ ಹಲವು ಮನೆಗಳು, ರಸ್ತೆಗಳು, ಸೇತುವೆಗಳು ಮತ್ತು ಕೃಷಿ ಭೂಮಿಗಳು ಮುಳುಗಡೆಯಾಗಿವೆ.

ಘಟನೆಯಲ್ಲಿ ಮೃತರನ್ನು ಬಾಗ್ನಾ ಪಂಚಾಯತ್ ನಿವಾಸಿಗಳಾದ ಮೊಹಮ್ಮದ್ ಅಕಿಬ್ (14), ಮೊಹಮ್ಮದ್ ಸಕೀಬ್ (9) ಮತ್ತು ಮೋಹನ್ ಸಿಂಗ್ (75) ಎಂದು ಗುರುತಿಸಲಾಗಿದೆ. ಇಲ್ಲಿಯವರೆಗೆ 100 ಕ್ಕೂ ಹೆಚ್ಚು ಜನರನ್ನು ರಕ್ಷಿಸಿ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ ಎಂದು ಹಿರಿಯ ಪೊಲೀಸ್ ವರಿಷ್ಠಾಧಿಕಾರಿ ರಾಂಬನ್ ಕುಲ್ಬೀರ್ ಸಿಂಗ್ ದೃಢಪಡಿಸಿದ್ದಾರೆ.

ಗುಡ್ಡ ಕುಸಿತದಿಂದಾಗಿ ಶ್ರೀನಗರ–ಜಮ್ಮು ರಾಷ್ಟ್ರೀಯ ಹೆದ್ದಾರಿಯ ಸಂಚಾರ ಸಂಪೂರ್ಣವಾಗಿ ಸ್ಥಗಿತಗೊಂಡಿದ್ದು, ರಂಬಾನ್ನೊಂದಿಗಿನ



ಸಂಪರ್ಕ ಕಡಿತಗೊಂಡಿದೆ. ವರದಿಗಳ ಪ್ರಕಾರ, ರಂಬಾನ್ನ ಕೆಲವು ಗ್ರಾಮಗಳು ಸಂಪೂರ್ಣವಾಗಿ ನೀರಿನಲ್ಲಿ ಮುಳುಗಿವೆ. ಸ್ಥಳೀಯರಿಗೆ ತಮ್ಮ ಆಸ್ತಿಪಾಸ್ತಿ ಮತ್ತು ಜಾನುವಾರುಗಳನ್ನು ಕಳೆದುಕೊಂಡ ದುಃಖದ ಜೊತೆಗೆ, ಆಹಾರ ಮತ್ತು ಕುಡಿಯುವ ನೀರಿನ ಕೊರತೆಯೂ ಎದುರಾಗಿದೆ. ರಾಷ್ಟ್ರೀಯ ವಿಪತ್ತು ನಿರ್ವಹಣಾ ತಂಡ ಮತ್ತು ರಾಜ್ಯ ವಿಪತ್ತು ನಿರ್ವಹಣಾ ತಂಡ ಜೊತೆಗೆ ಸ್ಥಳೀಯ ಪೊಲೀಸರು ಮತ್ತು ಸೈನಿಕರು ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿದ್ದಾರೆ. ಸಿಕ್ಕಿಬಿದ್ದ ಜನರನ್ನು ರಕ್ಷಿಸಲು ರಬ್ಬರ್ ದೋಣಿಗಳು ಮತ್ತು ಹಗ್ಗಗಳನ್ನು ಬಳಸಲಾಗುತ್ತಿದೆ. ರಕ್ಷಿಸಲಾದ ಜನರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಿ, ಸರ್ಕಾರಿ ಶಾಲೆಗಳು ಮತ್ತು ಸಮುದಾಯ ಕೇಂದ್ರಗಳಲ್ಲಿ ತಾತ್ಕಾಲಿಕ ಶಿಬಿರಗಳನ್ನು ಸ್ಥಾಪಿಸಲಾಗಿದೆ.

ಈ ಶಿಬಿರಗಳಲ್ಲಿ ಆಹಾರ, ಕುಡಿಯುವ ನೀರು, ಬಟ್ಟೆ ಮತ್ತು ವೈದ್ಯಕೀಯ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ರಂಬಾನ್ ಜಿಲ್ಲಾಧಿಕಾರಿಗಳ ಪ್ರಕಾರ, ರಕ್ಷಣಾ ಕಾರ್ಯಾಚರಣೆ ತೀವ್ರಗೊಂಡಿದ್ದು, ಆದರೆ ದೂರದ ಗ್ರಾಮಗಳಿಂದ ಸಂಪೂರ್ಣ ಮಾಹಿತಿ ಇನ್ನೂ ಲಭ್ಯವಾಗಿಲ್ಲ. ಕೆಲವು ಪ್ರದೇಶಗಳಲ್ಲಿ ಸಂಪರ್ಕ ಕಡಿತಗೊಂಡಿರುವುದರಿಂದ ರಕ್ಷಣಾ ಕಾರ್ಯಕ್ಕೆ ಸವಾಲುಗಳು ಎದುರಾಗಿವೆ.

ಹವಾಮಾನ ಇಲಾಖೆಯು ಮುಂದಿನ 24 ಗಂಟೆಗಳಲ್ಲಿ ರಂಬಾನ್ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಭಾರೀ ಮಳೆ ಮುಂದುವರಿಯಬಹುದು ಎಂದು ಎಚ್ಚರಿಕೆ ನೀಡಿದೆ. ಜನರಿಗೆ ಕಡಿಮೆ ಎತ್ತರದ ಪ್ರದೇಶಗಳನ್ನು ತೊರೆಯಲು ಮತ್ತು ಸುರಕ್ಷಿತ ಸ್ಥಳಗಳಲ್ಲಿ ಆಶ್ರಯ ಪಡೆಯಲು ಸೂಚಿಸಲಾಗಿದೆ. ಗುಡ್ಡ ಕುಸಿತ ಮತ್ತು ಪ್ರವಾಹದ ಅಪಾಯದಿಂದಾಗಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಪ್ರಯಾಣವನ್ನು ತಾತ್ಕಾಲಿಕವಾಗಿ ನಿಷೇಧಿಸಲಾಗಿದೆ.

ಜಮ್ಮು ಮತ್ತು ಕಾಶ್ಮೀರದ ರಾಜ್ಯ ಸರ್ಕಾರವು ತುರ್ತು ಪರಿಹಾರ ಕಾರ್ಯಗಳಿಗಾಗಿ ನಿಧಿಯನ್ನು ಬಿಡುಗಡೆ ಮಾಡಿದೆ. ಕೇಂದ್ರ ಸರ್ಕಾರವು ಸಹಾಯದ ಭರವಸೆ ನೀಡಿದ್ದು, ಹೆಚ್ಚಿನ ಓಆಖಈ ತಂಡಗಳನ್ನು ರಂಬಾನ್ಗೆ ಕಳುಹಿಸಲಾಗಿದೆ. ಸ್ಥಳೀಯ ಆಡಳಿತವು ಸಂತ್ರಸ್ತರಿಗೆ ಆಹಾರ ಪದಾರ್ಥಗಳು, ಕಂಬಳಿಗಳು ಮತ್ತು ಔಷಧಿಗಳನ್ನು ವಿತರಿಸುತ್ತಿದೆ. ರಂಬಾನ್ನ ಸ್ಥಳೀಯ ಸಂಘ ಸಂಸ್ಥೆಗಳು ಮತ್ತು ಸ್ವಯಂಸೇವಕರು ಸಂತ್ರಸ್ತರಿಗೆ ನೆರವು ನೀಡುವಲ್ಲಿ ಸಕ್ರಿಯವಾಗಿ ಭಾಗವಹಿಸುತ್ತಿದ್ದಾರೆ.

ಜಮ್ಮು ಮತ್ತು ಕಾಶ್ಮೀರ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಅವರು ರಂಬನ್ನಲ್ಲಿ ಸಂಭವಿಸಿದ ಭೀಕರ ಭೂಕುಸಿತ ಮತ್ತು ಹಠಾತ್ ಪ್ರವಾಹದ ಬಗ್ಗೆ ತೀವ್ರ ದುಃಖ ವ್ಯಕ್ತಪಡಿಸಿದ್ದಾರೆ, ಇದರಿಂದಾಗಿ ಅಪಾರ ಪ್ರಮಾಣದ ಜೀವ ಮತ್ತು ಆಸ್ತಿಪಾಸ್ತಿ ನಷ್ಟವಾಗಿದೆ. ಸಂತ್ರಸ್ತ ಕುಟುಂಬಗಳಿಗೆ ಸಂತಾಪ ಸೂಚಿಸಿದ ಅವರು, ತ್ವರಿತ ರಕ್ಷಣೆ ಮತ್ತು ಪರಿಹಾರ ಕಾರ್ಯಾಚರಣೆಗಳನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ಸ್ಥಳೀಯ ಅಧಿಕಾರಿಗಳೊಂದಿಗೆ ನಿರಂತರ ಸಮನ್ವಯದಲ್ಲಿದೆ ಎಂದು ಭರವಸೆ ನೀಡಿದರು.

# ಭಾರತಕ್ಕೆ ಇಂದು ಅಮೆರಿಕ ಉಪಾಧ್ಯಕ್ಷ ಭೇಟಿ: ಮೋದಿಯಿಂದ ಔತಣಕ್ಕೆ ಸಿದ್ಧತೆ

**ನವದೆಹಲಿ,ಏ.20:** ಅಮೆರಿಕದ ಸುಂಕ ಸಮರದ ನಡುವೆ ಅಮೆರಿಕಾದ ಉಪಾಧ್ಯಕ್ಷ ಜೆ.ಡಿ ವ್ಯಾನ್ಸ್ ಮತ್ತು ಅವರ ಭಾರತೀಯ ಮೂಲದ ಪತ್ನಿ ಉಷಾ ವ್ಯಾನ್ಸ್ ನಾಲ್ಕು ದಿನಗಳ ಭಾರತದ ಪ್ರವಾಸ ಕೈಗೊಂಡಿದ್ದಾರೆ. ಇದು ಟ್ರಂಪ್ ಅಮೆರಿಕದ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಬಳಿಕ ಭಾರತದ ಮೊದಲ ಭೇಟಿಯಾಗಿದೆ. ವ್ಯಾನ್ಸ್ ಅವರು ತಮ್ಮ ಭಾರತೀಯ ಮೂಲದ ಪತ್ನಿ ಉಷಾ ಮತ್ತು ಮೂವರು ಮಕ್ಕಳಾದ ಇವಾನ್, ವಿವೇಕ್ ಮತ್ತು ಮಿರಾಬೆಲ್ ಸೋಮವಾರ ಭಾರತಕ್ಕೆ ಬರಲಿದ್ದಾರೆ. ಬೆಳಗ್ಗೆ 10 ಗಂಟೆ ಸುಮಾರಿಗೆ ದೆಹಲಿಯ ಪಾಲಂ ವಿಮಾನ ನಿಲ್ದಾಣಕ್ಕೆ ಬಂದಿಳಿಯಲಿದ್ದು, ಕೇಂದ್ರದ ಹಿರಿಯ ಸಚಿವರು ರಾಜಸ್ಥಾನಿ ಶೈಲಿಯಲ್ಲಿ ವ್ಯಾನ್ಸ್ ಕುಟುಂಬವನ್ನು ಸ್ವಾಗತಿಸಲಿದ್ದಾರೆ.



ಬಳಿಕ ದೆಹಲಿ ಜೊತೆಗೆ ಜೈಪುರ ಮತ್ತು ಆಗ್ರಾಕ್ಕೆ ವ್ಯಾನ್ಸ್ ಪ್ರಯಾಣಿಸಲಿದ್ದಾರೆ. ಈ ಸಂದರ್ಭದಲ್ಲಿ ಪೆಂಟಗನ್‌ನ ಐವರು ಹಿರಿಯ ಅಧಿಕಾರಿಗಳು ವ್ಯಾನ್ಸ್ ಜೊತೆಗಿರಲಿದ್ದಾರೆ.

**ಏನೇನು ಕಾರ್ಯಕ್ರಮ:** ದೆಹಲಿಗೆ ಬಂದ ಕೆಲ ಗಂಟೆಗಳ ಬಳಿಕ ವ್ಯಾನ್ಸ್ ಮತ್ತು ಅವರ ಕುಟುಂಬ ಸ್ವಾಮಿನಾರಾಯಣ ಅಕ್ಷರಧಾಮ ದೇವಸ್ಥಾನಕ್ಕೆ ಭೇಟಿ ನೀಡಲಿದೆ. ಜೊತೆಗೆ ಸಾಂಪ್ರದಾಯಿಕ ಭಾರತೀಯ ಕರಕುಶಲ ವಸ್ತುಗಳನ್ನು ಮಾರಾಟ ಮಾಡುವ ಶಾಪಿಂಗ್ ಕಾಂಪ್ಲೆಕ್ಸ್ ಭೇಟಿ ನೀಡಲಿದೆ. ಇದೆಲ್ಲದಕ್ಕಿಂತ ಮುಖ್ಯವಾಗಿ ಇಂದು ಸಂಜೆ 6:30ರ ವೇಳೆಗೆ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಭಾರತ.

# ರಾಜ್ ಠಾಕ್ರೆ ಜೊತೆ ಮೈತ್ರಿ ಇಲ್ಲ

**ಮುಂಬೈ,ಏ.20:** ಮಹಾರಾಷ್ಟ್ರ ನವನಿರ್ಮಾಣ ಸೇನೆ ಅಧ್ಯಕ್ಷ ರಾಜ್ ಠಾಕರೆ ಮತ್ತು ಶಿವಸೇನೆಯ ಮುಖ್ಯಸ್ಥ ಉದ್ಧವ್ ಠಾಕರೆ ನಡುವೆ ಯಾವುದೇ ರಾಜಕೀಯ ಮೈತ್ರಿಯ ಸಾಧ್ಯತೆ ಇಲ್ಲವೆಂದು ಶಿವಸೇನೆ (ಯುಬಿಟಿ) ಸಂಸದ ರಾವತ್ ತಿಳಿಸಿದ್ದಾರೆ. ಇಬ್ಬರ ನಡುವಿನ ಸಂಭಾಷಣೆಗಳು ಕೇವಲ ಭಾವನಾತ್ಮಕ ಮಾತುಕತೆಗಳಿಗೆ ಸೀಮಿತವಾಗಿವೆ ಎಂದು ಅವರು ಒತ್ತಿಹೇಳಿದ್ದಾರೆ.

ಖಾಸಗಿ ಸಂದರ್ಶನದಲ್ಲಿ ಮಾತನಾಡಿದ ಸಂಜಯ್ ರಾವತ್, ರಾಜ್ ಠಾಕರೆ ಮತ್ತು ಉದ್ಧವ್ ಠಾಕರೆ ನಡುವಿನ ಮಾತುಕತೆಯನ್ನು ರಾಜಕೀಯ ಒಪ್ಪಂದವೆಂದು ತಪ್ಪಾಗಿ ಭಾವಿಸಬಾರದು. ಇದು ಕೇವಲ ಭಾವನಾತ್ಮಕ ಸಂವಾದವಷ್ಟೇ. ಶಿವಸೇನೆ ಮತ್ತು ಎಂಎನ್‌ಎಸ್‌ನಡುವೆ ಯಾವುದೇ ಔಪಚಾರಿಕ ಮೈತ್ರಿಯ ಚರ್ಚೆ ನಡೆದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಕಳೆದ ಕೆಲವು ತಿಂಗಳುಗಳಿಂದ ರಾಜ್ ಠಾಕರೆಯವರು



ಶಿವಸೇನೆಯ ಜೊತೆಗಿನ ತಮ್ಮ ಹಳೆಯ ಸಂಬಂಧಗಳನ್ನು ಪುನರ್ಸ್ಥಾಪಿಸುವ ಸಾಧ್ಯತೆಯ ಬಗ್ಗೆ ಸುಳಿವುಗಳನ್ನು ನೀಡುತ್ತಿದ್ದರು. ಈ ಹಿನ್ನೆಲೆಯಲ್ಲಿ, ರಾಜಕೀಯ ವಲಯದಲ್ಲಿ ಶಿವಸೇನೆ ಮತ್ತು ಒಓಖ ಮೈತ್ರಿಯ ಸಾಧ್ಯತೆ ಕುರಿತು ಊಹಾಪೋಹಗಳು ತೀವ್ರಗೊಂಡಿದ್ದವು. ಆದರೆ, ರಾವತ್ರ ಇತ್ತೀಚಿನ ಹೇಳಿಕೆಯಿಂದ ಈ ಎಲ್ಲ ಚರ್ಚೆಗಳಿಗೆ ತಾತ್ಕಾಲಿಕವಾಗಿ ತೆರೆ ಬಿದ್ದಂತಾಗಿದೆ.

# ಸುಪ್ರೀಂಕೋರ್ಟ್ ಆದೇಶಗಳ ವಿರುದ್ಧ ಸಂಸದರ ಹೇಳಿಕೆ: ಅಂತರ ಕಾಯ್ದುಕೊಂಡ ಬಿಜೆಪಿ

**ನವದೆಹಲಿ,ಏ.20:** ಸುಪ್ರೀಂಕೋರ್ಟ್ ವಿರುದ್ಧ ಪ್ರಚೋದನಕಾರಿ ಹೇಳಿಕೆ ನೀಡಿದ ತಮ್ಮ ಪಕ್ಷದ ಸಂಸದರಾದ ನಿಶಿಕಾಂತ್ ದುಬೆ ಮತ್ತು ದಿನೇಶ್ ಶರ್ಮಾ ಅವರಿಂದ ಬಿಜೆಪಿ ಅಂತರ ಕಾಪಾಡಿಕೊಂಡಿದ್ದು, ಅದು ಅವರ ವೈಯಕ್ತಿಕ ಹೇಳಿಕೆ ಎಂದು ಹೇಳಿದೆ. ತಮ್ಮ ಪಕ್ಷವು ನ್ಯಾಯಾಂಗವನ್ನು ಗೌರವಿಸುತ್ತದೆ ಎಂದು ಪಕ್ಷವೂ ಹೇಳಿದ್ದು, ಸುಪ್ರೀಂ ಕೋರ್ಟ್ ವಿರುದ್ಧ ಅವರು ನೀಡಿರುವ ಪ್ರಚೋದನಕಾರಿ ಹೇಳಿಕೆಗಳಿಗೂ ಬಿಜೆಪಿಗೂ ಯಾವುದೇ ಸಂಬಂಧವಿಲ್ಲ ಎಂದು ಒತ್ತಿ ಹೇಳಿದೆ.

ಬಿಜೆಪಿ ಸಂಸದರಾದ ನಿಶಿಕಾಂತ್ ದುಬೆ ಮತ್ತು ದಿನೇಶ್ ಶರ್ಮಾ ಅವರು ನ್ಯಾಯಾಂಗ ಮತ್ತು ದೇಶದ ಮುಖ್ಯ ನ್ಯಾಯಾಧೀಶರ ಕುರಿತು ಮಾಡಿದ ಹೇಳಿಕೆಗಳಿಗೂ ಭಾರತೀಯ ಜನತಾ ಪಕ್ಷಕ್ಕೂ ಯಾವುದೇ ಸಂಬಂಧವಿಲ್ಲ. ಇವು ಅವರ ವೈಯಕ್ತಿಕ ಹೇಳಿಕೆಗಳು, ಆದರೆ ಬಿಜೆಪಿ ಅಂತಹ ಹೇಳಿಕೆಗಳನ್ನು ಒಪ್ಪುವುದಿಲ್ಲ ಅಥವಾ ಅಂತಹ ಹೇಳಿಕೆಗಳನ್ನು ಎಂದಿಗೂ ಬೆಂಬಲಿಸುವುದಿಲ್ಲ. ಬಿಜೆಪಿ ಈ ಹೇಳಿಕೆಗಳನ್ನು ಸಂಪೂರ್ಣವಾಗಿ ತಿರಸ್ಕರಿಸುತ್ತದೆ ಎಂದು ಜೆಪಿ ನಡ್ಡಾ ತನ್ನ ಸಾಮಾಜಿಕ




ಜಾಲತಾಣ ಖಾತೆಯಲ್ಲಿ ಹೇಳಿಕೆ ಹಾಕಿದ್ದಾರೆ. ಜಾರ್ಖಂಡ್ನ ಗೊಡ್ಡಾದ ಸಂಸದ ನಿಶಿಕಾಂತ್ ದುಬೆ, ಸುಪ್ರೀಂ ಕೋರ್ಟ್ ದೇಶದಲ್ಲಿ ಧಾರ್ಮಿಕ ಯುದ್ಧಗಳನ್ನು ಪ್ರಚೋದಿಸುತ್ತಿದ್ದು, ಅದು ತನ್ನ ಮಿತಿಗಳನ್ನು ಮೀರುತ್ತಿದೆ ಎಂದು ವಾದಿಸಿದ್ದಾರೆ. ಪ್ರತಿಯೊಂದಕ್ಕೂ ಸುಪ್ರೀಂ ಕೋರ್ಟ್ಗೆ ಹೋಗಬೇಕಾಗುತ್ತದೆ. ಹೀಗಾದರೆ, ಸಂಸತ್ತು ಮತ್ತು ರಾಜ್ಯಗಳ ವಿಧಾನಸಭೆಯನ್ನು ಮುಚ್ಚಬೇಕು ಎಂದು ಅವರು ಹೇಳಿದ್ದಾರೆ.

ಸಂವಿಧಾನವನ್ನು ಉಲ್ಲೇಖಿಸಿ ಮಾತನಾಡಿದ ಮತ್ತೊಬ್ಬ ಬಿಜೆಪಿ ಸಂಸದ ದಿನೇಶ್ ಶರ್ಮಾ, ಯಾರಿಗೂ ಲೋಕಸಭೆ ಮತ್ತು ರಾಜ್ಯಸಭೆಯನ್ನು ನಿರ್ದೇಶಿಸಲು ಸಾಧ್ಯವಿಲ್ಲ ಎಂದು ಘೋಷಿಸಿದ್ದಾರೆ.

ಈ ಬಗ್ಗೆ ಪ್ರತಿಕ್ರಿಯಿಸಿರುವ ಬಿಜೆಪಿ ಅಧ್ಯಕ್ಷ ಜೆಪಿ ನಡ್ಡಾ, ಸಂಸದರು ಮತ್ತು ಇತರ ಎಲ್ಲರಿಗೂ ಅಂತಹ ಹೇಳಿಕೆಗಳನ್ನು ನೀಡದಂತೆ ತಿಳಿಸಲಾಗಿದೆ, ನ್ಯಾಯಾಂಗವು ನಮ್ಮ ಪ್ರಜಾಪ್ರಭುತ್ವದ ಅವಿಭಾಜ್ಯ ಅಂಗವಾಗಿದೆ ಎಂದು ಹೇಳಿದ್ದಾರೆ.

ಭಾರತೀಯ ಜನತಾ ಪಕ್ಷವು ಯಾವಾಗಲೂ ನ್ಯಾಯಾಂಗವನ್ನು ಗೌರವಿಸುತ್ತದೆ ಮತ್ತು ಅದರ ಆದೇಶಗಳು ಮತ್ತು ಸಲಹೆಗಳನ್ನು ಸಂತೋಷದಿಂದ ಸ್ವೀಕರಿಸಿದೆ. ಏಕೆಂದರೆ ಒಂದು ಪಕ್ಷವಾಗಿ ಸುಪ್ರೀಂ ಕೋರ್ಟ್ ಸೇರಿದಂತೆ ದೇಶದ ಎಲ್ಲಾ ನ್ಯಾಯಾಲಯಗಳು ನಮ್ಮ ಪ್ರಜಾಪ್ರಭುತ್ವದ ಅವಿಭಾಜ್ಯ ಅಂಗವಾಗಿದೆ ಮತ್ತು ಸಂವಿಧಾನದ ರಕ್ಷಣೆಯ ಬಲವಾದ ಆಧಾರಸ್ತಂಭವಾಗಿದೆ ಎಂದು ನಾವು ನಂಬುತ್ತೇವೆ. ಅಂತಹ ಹೇಳಿಕೆಗಳನ್ನು ನೀಡದಂತೆ ನಾನು ಅವರಿಬ್ಬರಿಗೂ ಮತ್ತು ಇತರರಿಗೂ ಸೂಚನೆ ನೀಡಿದ್ದೇನೆ ಎಂದು ಕೇಂದ್ರ ಆರೋಗ್ಯ ಸಚಿವರೂ ಆಗಿರುವ ನಡ್ಡಾ ಹೇಳಿದ್ದಾರೆ.

# ಆಚಾರ್ಯ ವಿದ್ಯಾನಂದ ಜನ್ಮಶತಾಬ್ದಿ ಮಹೋತ್ಸವ



**ಮುಂಬಯಿ,ಏ.20:** ಆಚಾರ್ಯ ವಿದ್ಯಾನಂದ ಜನ್ಮ ಶತಾಬ್ದಿ ಮಹೋತ್ಸವ ಮೂರು ದಿನ ಗಳ ಕಾರ್ಯಕ್ರಮ ವು ಇಂದು ದೆಹಲಿ ಯ ಕುಂದ್ ಕುಂದ ಭಾರತಿ ದಕ್ಷಿಣ ದೆಹಲಿ ಯಲ್ಲಿ ಉದ್ಘಾಟನೆ ಮಾಡಲಾಯಿತು.ಈ ಸಂಧರ್ಭ ಆಚಾರ್ಯ

ಶ್ರುತ ಸಾಗರ್ ಮುನಿ ಮಹರಾಜ್ ದಿವ್ಯ ಸಾನಿಧ್ಯ ದಲ್ಲಿ ಜಗದ್ಗುರು ಸ್ವಸ್ತಿಶ್ರೀ ಚಾರುಕೀರ್ತಿ ಭಟ್ಟಾರಕ ಪಂಡಿತಚಾರ್ಯ ಪಟ್ಟಾಚಾರ್ಯ ವರ್ಯ ಮಹಾ ಸ್ವಾಮೀಜಿ ಶ್ರೀ ದಿಗಂಬರ ಜೈನಮಠ ಮೂಡು ಬಿದಿರೆ, ಕಂಬದಹಳ್ಳಿ ಭಾನುಕೀರ್ತಿ, ತಿಜಾ ರ ವ್ರಷಭ ಸೇನ್ ಸ್ವಾಮೀಜಿ ಉಪಸ್ಥಿತಿ ಯಲ್ಲಿ ಸನ್ಮತಿ ಸೂತ್ರ, ಪ್ರಾಕೃತ ವಿದ್ಯಾ ತ್ರೈ ಮಾಸಿಕ, ಆಚಾರ್ಯ ವಿದ್ಯಾನಂದ ಸಮಗ್ರ ಜೀವನ ಭಾಗ 1,2,3 ಅನ್ನುವ ಪುಸ್ತಕ ಬಿಡುಗಡೆ ನೆರವೇರಿತು

20.4.2025ರಂದು ಇಂದು ಬೆಳಿಗ್ಗೆ 7.00 ರಿಂದ ಮಧ್ಯಾಹ್ನ ದ ವರೆಗೂ ಸ್ವಾಮೀಜಿ ಗಳ ಉಪಸ್ಥಿತಿ ಯಲ್ಲಿ ಸಾಮೂಹಿಕ ಭಕ್ತಾ ಮರ ವಿಧಾನ, ಧಾರ್ಮಿಕ ಸಭೆ ನೆರವೇರಿತು ಅನಿಲ್ ಜೈನ್, ಸಂಸ್ಥೆ ಯ ಮಂತ್ರಿ, ಟ್ರಸ್ಟಿ, ಸ್ವಾಗತಿಸಿದರು ತಾನಿಯ ಜೈನ್ ಆಚಾರ್ಯ ಸ್ಮೃತಿ ಯಲ್ಲಿ ಮುದ್ರಿತ ಬೆಳ್ಳಿ ನಾಣ್ಯ ವಿಮೋಚನೆ ಮಾಡಿದರು, ವೀರ ಸಾಗರ್ ಲಾಲ್ ಬಹಾ ದ್ದೂರ್ ಸಂಸ್ಕೃತ ಕಾಲೇಜು ಮಂಗಲ ಚಾರಣೆ ನೆರವೇರಿಸಿ ದರು ಅಧ್ಯಕ್ಷ ಸತೀಶ್ ಜೈನ್ ಎಸ್‌ಸಿಜೆ ವಂದಿಸಿದರು

# ಗಾಜಾ: ಇಸ್ರೇಲ್ ದಾಳಿಗೆ 25 ಮಂದಿ ಬಲಿ

**ಗಾಜಾ,ಏ.20:** ಗಾಜಾ ಪಟ್ಟಿಯಾದ್ಯಂತ ಶನಿವಾರ ರಾತ್ರಿಯಿಂದ ರವಿವಾರ ಬೆಳಗ್ಗಿನವರೆಗೆ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ಕನಿಷ್ಠ 25 ಮಂದಿ ಸಾವನ್ನಪ್ಪಿರುವುದಾಗಿ ಗಾಝಾದ ನಾಗರಿಕ ರಕ್ಷಣಾ ಸಂಸ್ಥೆ ರವಿವಾರ ಹೇಳಿದೆ.



ಗಾಝಾ ಪಟ್ಟಿಯಲ್ಲಿ ಶನಿವಾರ ತಡರಾತ್ರಿ ಇಸ್ರೇಲ್ನ ದಾಳಿಯಲ್ಲಿ ಮಹಿಳೆಯರು, ಮಕ್ಕಳ ಸಹಿತ 20 ಮಂದಿ ಸಾವನ್ನಪ್ಪಿದ್ದಾರೆ. ಪೂರ್ವ ರಫಾದಲ್ಲಿ ರವಿವಾರ ಬೆಳಿಗ್ಗೆ ನಡೆದ ಪ್ರತ್ಯೇಕ ಡ್ರೋನ್ ದಾಳಿಯಲ್ಲಿ ಕನಿಷ್ಠ ಐವರು ಸಾವನ್ನಪ್ಪಿದ್ದು ಹಲವರು ಗಾಯಗೊಂಡಿರುವುದಾಗಿ ವರದಿಯಾಗಿದೆ. ಈ ಮಧ್ಯೆ, ಗಾಝಾದಲ್ಲಿ ಯುದ್ಧ ಕೊನೆಗೊಳಿಸಿ ಪಡೆಗಳನ್ನು ಹಿಂದಕ್ಕೆ ಕರೆಸಿಕೊಳ್ಳಬೇಕು ಎಂಬ ಹಮಾಸ್ನ ಆಗ್ರಹವನ್ನು ತಿರಸ್ಕರಿಸಿರುವ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು, ಯುದ್ಧ ಮುಂದುವರಿಯಲಿದೆ ಮತ್ತು ಗಾಝಾದಲ್ಲಿ ಸೆರೆಯಲ್ಲಿರುವ ಒತ್ತೆಯಾಳುಗಳನ್ನು ಸ್ವದೇಶಕ್ಕೆ ಕರೆತರುವುದಾಗಿ ಘೋಷಿಸಿದ್ದಾರೆ.

# ಯುವ ಕಾಂಗ್ರೆಸ್ ಮುಖ್ಯಸ್ಥರ ಬಂಧನ

**ಮುಂಬೈ, ಏ.20:** ದಕ್ಷಿಣ ಮುಂಬೈನ ಬಲ್ಲಾರ್ಡ್ ಪಿಯರ್ ಎಸ್ಟೇಟ್ನಲ್ಲಿರುವ ಜಾರಿ ನಿರ್ದೇಶನಾಲಯ (ಇಆ) ಕಚೇರಿಗೆ ಪ್ರತಿಭಟನೆಯ ಸಂದರ್ಭದಲ್ಲಿ ಬೀಗ ಹಾಕಿದ ಆರೋಪದ ಮೇಲೆ ಯುವ ಕಾಂಗ್ರೆಸ್ ಅಧ್ಯಕ್ಷ ಅಖಿಲೇಶ್ ಯಾದವ್ ಅವರನ್ನು ಭಾನುವಾರ ಬಂಧಿಸಿ ಒಂದು ದಿನದ ಪೊಲೀಸ್ ಕಸ್ಟಡಿಗೆ ಒಪ್ಪಿಸಲಾಗಿದೆ. ಸಾರ್ವಜನಿಕ ರಜೆಯ ಕಾರಣ ಮುಚ್ಚಲಾಗಿದ್ದ ಇಡಿ ಕಚೇರಿಯ ಹೊರಗೆ ಯುವ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದ ನಂತರ, ಶನಿವಾರ ತಡರಾತ್ರಿ ಎಂಆರ್‌ಎ ಮಾರ್ಗ ಪೊಲೀಸ್ ಠಾಣೆಯಿಂದ ಯಾದವ್ ಅವರನ್ನು ಅಂಧೇರಿಯಿಂದ ಬಂಧಿಸಲಾಯಿತು. ಭಾನುವಾರ ಅವರನ್ನು ಸ್ಥಳೀಯ ನ್ಯಾಯಾಲಯದ ಮುಂದೆ ಹಾಜರುಪಡಿಸಲಾಯಿತು, ನ್ಯಾಯಾಲಯ ಅವರನ್ನು ಜೈಲಿಗೆ ಕಳುಹಿಸಿತು. ಶನಿವಾರ, ಹಿರಿಯ ಕಾಂಗ್ರೆಸ್ ನಾಯಕರಾದ ರಾಹುಲ್ ಗಾಂಧಿ ಮತ್ತು ಸೋನಿಯಾ ಗಾಂಧಿ ವಿರುದ್ಧ ಇಡಿ ಸಲ್ಲಿಸಿದ ಆರೋಪಪಟ್ಟಿಯನ್ನು ವಿರೋಧಿಸಿ ಯುವ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನಾ ಪ್ರದರ್ಶನ ನಡೆಸಿದ್ದರು. ಮುಂಬೈ ಪೊಲೀಸರ ಪ್ರಕಾರ, 15,20 ಯುವ ಕಾಂಗ್ರೆಸ್ ಕಾರ್ಯಕರ್ತರು ಇಡಿ ಕಚೇರಿಯ ಹೊರಗೆ ಜಮಾಯಿಸಿದರು, ಅದು ನಂತರ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿತ್ತು. ಉಪ ಪೊಲೀಸ್ ಆಯುಕ್ತ ಪ್ರವೀಣ್ ಮುಂಢೆ ಅವರ ಪ್ರಕಾರ, ಇ.ಡಿ ಕಚೇರಿಯ ಗೇಟ್ ಅನ್ನು ಭದ್ರತಾ ಸಿಬ್ಬಂದಿಯೊಬ್ಬರು ಸರಪಳಿಯಿಂದ ಲಾಕ್ ಮಾಡಿದ್ದಾರೆ.

# ಈ ಕಾಲಘಟ್ಟದಲ್ಲಿ ಕಲಾರಾಧನೆ ಕಷ್ಟಕರ ಫ್ರಾನ್ಸಿಸ್ ಫೆರ್ನಾಂಡಿಸ್ ಕಾಸ್ಸಿಯಾ



**ಮುಂಬಯಿ, ಏ.20:** ಈ ಕಾಲಘಟ್ಟದಲ್ಲಿ ಕಲಾರಾಧನೆ ಕಷ್ಟಕರ ವಿಷಯವಾಗಿದೆ. ಕಲಾಭಿಮಾನಿಗಳು, ಕಲಾ ಪೋಷಕರ ಸಹಯೋಗದಿಂದ ಕಲಾರಾಧನೆ ಸಾಧ್ಯ. ಆದ್ದರಿಂದಲೇ ನನ್ನ ಈ ನಾಟಕ ನೂರಾರ ಪ್ರದರ್ಶನಕ್ಕೆ ಅಣಿಯಾಗಿದ್ದು, ಕಲಾಭಿಮಾನಿಗಳು ಕಲಾಪೋಷಕರಾಗಿದ್ದಾರೆ ಎಂದು ಕೊಂಕಣಿ ನಾಟಕ ರಂಗದ ಹಿರಿಯಣ್ಣ, ಪ್ರಸಿದ್ಧ ರಂಗಕಲಾವಿದ, ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ವಿಜೇತ, ಕೊಮೆಡಿ ಕಿಂಗ್ ನಟ ಫ್ರಾನ್ಸಿಸ್ ಫೆರ್ನಾಂಡಿಸ್ ಕಾಸ್ಸಿಯಾ ತಿಳಿಸಿದರು.

ಈಸ್ಟರ್ ಸುದಿನವಾದ ಇಂದಿಲ್ಲಿ ಭಾನುವಾರ ಸಂಜೆ ಡಿವೈನ್ ಮರ್ಸಿ ಕೊಂಕಣಿ ಸಂಸ್ಥೆಯು ಮೀರಾಭಯಂದರ್‌ನ ಡಿವೈನ್ ಮರ್ಸಿ ಚರ್ಚ್ ಸಭಾಂಗಣದಲ್ಲಿ ಚರ್ಚ್ ಕಟ್ಟಡ ದುರಸ್ತಿ ಪ್ರಯುಕ್ತ ಆಯೋಜಿಸಿದ್ದ ಸಾಂಸ್ಕೃತಿಕ ಸಂಜೆಯ ಸಭಾ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿದ್ದು ಫ್ರಾನ್ಸಿಸ್ ಕಾಸ್ಸಿಯಾ ಮಾತನಾಡಿದರು.

ಡಿವೈನ್ ಮರ್ಸಿ ಇಗರ್ಜಿಯ ಪ್ರಧಾನ ಧರ್ಮಗುರು ರೆ। ಫಾ। ಆಲ್ವಿನ್ ನಜರೆತ್ ಶುಭಶಂಸನೆಗೈದರು. ರೆ। ಫಾ। ಮೈಕಲ್ ಡಿಸೋಜಾ, ಫಾ। ಮರಿಯಾ ಅಂತೋನಿ ಪಥಿನಾಥನ್ (ಸಿಪಿಪಿಎಸ್), ಭಗಿನಿ ಸಿ। ರೇಚೆಲ್ ಲಹರಿಯ, ಸಿ। ಕಿರಣ್ ಎಕ್ಕಾ, ಸಿ। ನೀಲಂ ಲಕ್ರ ವೇದಿಕೆಯಲ್ಲಿ ಉಪಸ್ಥಿತರಿದ್ದು, ನಾಡಿನ ಹಿರಿಯ ಕೊಂಕಣಿ ಕಲಾವಿದ ಫ್ರಾನ್ಸಿಸ್ ಫೆರ್ನಾಂಡಿಸ್ ಕಾಸ್ಸಿಯಾ, ಜೋಯ್ ಪಾಲಡ್ಕ ಅವರನ್ನು ಸನ್ಮಾನಿಸಿ ಅಭಿನಂದಿಸಿದರು.

ಮೌರಿಸ್ ಪಿಂಟೋ ಹಿರ್ಗಾನ್ (ಕಾರ್ಕಳ), ನೊರ್ಬರ್ಟ್ ನೊರೋನ್ಹಾ, ಇವಾನ್ ಕ್ವಾಡ್ರಸ್, ಅರುಣ್ ಪ್ಯಾಸ್, ರೋಸ್‌ಮೇರಿ ಡಿಸೋಜಾ, ಶಾಂತಿ ಪ್ಯಾಸ್, ಮಾರ್ಕ್ ನೊರೋನ್ಹಾ, ಆ್ಯನ್ನಿ ಡಿಸೋಜಾ, ಲೀನಾ ಡಿಸೋಜಾ, ಸಿಸಿಲಿಯಾ ಡಿಸೋಜಾ ಅತಿಥಿಗಳಿಗೆ ಪುಷ್ಪಗುಚ್ಛ ನೀಡಿ ಗೌರವಿಸಿದರು.

ಫ್ರಾನ್ಸಿಸ್ ಕಾಸ್ಸಿಯಾ ಕೊಂಕಣಿ ನಾಟಕ ತಂಡವು ಹಿರಿಯ ರಂಗ ನಿರ್ದೇಶಕ ಜೋಯ್ ಪಾಲಡ್ಕ ದಿಗ್ದರ್ಶನದಲ್ಲಿ 89ನೇ ಯಶಸ್ವೀ ಪ್ರದರ್ಶನವಾಗಿಸಿ 'ಮ್ಹಾತಾರೊ ಚರ್ಬೆಲಾ' ಕೊಂಕಣಿ ಹಾಸ್ಯಮಯ ನಾಟಕವನ್ನು ಪ್ರದರ್ಶಿಸಿ ತು. ಜೋಯ್ ಪಾಲಡ್ಕ, ಬೆಟ್ಟಿ ನಾಜ್ ಬಾಂದ್ರಾ, ಜೂಲಿ ವಾಸ್ ಮರೋಲ್, ಗ್ರೆಗೊರಿ ಸಿಕ್ವೇರಾ ನಿಡ್ಡೋಡಿ, ಪೀಟರ್ ಪೈಸ್ ಬಸ್ರೂರ್, ಶಾಂತಿ ಬರ್ಬೋಜಾ ಬೋಳಿಯೆ, ಫ್ಲೋರಾ ಡಿಸೋಜಾ ಕಲ್ಮಾಡಿ, ಪೀಟರ್ ಕುಟಿನ್ಹೋ ಮುಂಡ್ಕೂರು, ಲವೀನಾ ಡಿಸೋಜಾ ಜೆರಿಮೆರಿ ಮತ್ತು ಫ್ರಾನ್ಸಿಸ್ ಫೆರ್ನಾಂಡಿಸ್ ಕಾಸ್ಸಿಯಾ ಪ್ರಧಾನ ಪಾತ್ರದಲ್ಲಿ ಅಭಿನಯಿಸಿ ಪ್ರೇಕ್ಷಕರ ಪ್ರಶಂಸೆಗೆ ಪಾತ್ರರಾದರು.

ಎಲಿಜಾ ಕ್ವಾಡ್ರಸ್ ಸ್ವಾಗತಿಸಿದರು. ಫ್ಲೋರಿನ್ ಫೆರ್ನಾಂಡಿಸ್ ಸನ್ಮಾನಿತರನ್ನು ಪರಿಚಯಿಸಿದರು. ಹೆನ್ರಿ ಸಿಕ್ವೇರಾ ಕಾರ್ಯಕ್ರಮ ನಿರೂಪಿಸಿದರು. ಮೆಟಿಲ್ಡಾ ದಾಂತಿ ವಂದನಾರ್ಪಣೆಗೈದರು.

# ಧರ್ಮಸ್ಥಳದಲ್ಲಿ ನೂತನ ಕಲ್ಯಾಣ ಮಂಟಪಗಳ ಸಮುಚ್ಚಯ ಉದ್ಘಾಟನೆ

**ಮುಂಬಯಿ,ಏ.20:** ಮಾನ್ಯ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಧರ್ಮಸ್ಥಳದಲ್ಲಿ ಭಾನುವಾರ ನೂತನ ಕಲ್ಯಾಣ ಮಂಟಪಗಳ ಸಮುಚ್ಚಯವನ್ನು ಉದ್ಘಾಟಿಸಿದರು.

ಕಲ್ಯಾಣಮಂಟಪ ನಿರ್ಮಾಣ ಪುಣ್ಯದ ಕಾಯಕ. ಧರ್ಮಸ್ಥಳದ ಬಹುಮುಖಿ ಸೇವೆ, ಸಾಧನೆ ಶ್ಲಾಘನೀಯವಾಗಿದೆ ಎಂದು ಮಾನ್ಯ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು. ಅವರು ಭಾನುವಾರ ಧರ್ಮಸ್ಥಳದಲ್ಲಿ ಶ್ರೀ ಉಮಾಮಹೇಶ್ವರ, ಶ್ರೀಶಿವಪಾರ್ವತಿ ಮತ್ತು ಶ್ರೀ ಗೌರೀಶಂಕರ ಎಂಬ ಮೂರು ನೂತನ ಕಲ್ಯಾಣ ಮಂಟಪಗಳ ಸಮುಚ್ಚಯವನ್ನು ಉದ್ಘಾಟಿಸಿ ಮಾತನಾಡಿದರು.

ದೇವರು ವರವನ್ನೂ ಕೊಡುವುದಿಲ್ಲ, ಶಾಪವನ್ನೂ ಕೊಡುವುದಿಲ್ಲ. ಎಲ್ಲರಿಗೂ ಅವಕಾಶವನ್ನು ಮಾತ್ರ ಕೊಡುತ್ತಾರೆ. ಅದನ್ನು ಸದುಪಯೋಗ ಮಾಡಿ, ಉನ್ನತ ಸಾಧನೆ ಮಾಡುವುದು ನಮ್ಮ ಉದ್ದೇಶವಾಗಿರಬೇಕು.

ದೇವರಲ್ಲಿ ಶ್ರದ್ಧಾ–ಭಕ್ತಿಯಿಂದ ನಂಬಿಕೆ ಇಟ್ಟು ಪ್ರಾರ್ಥನೆ ಮಾಡಿದಾಗ ನಮ್ಮ ಇಷ್ಟಾರ್ಥಗಳು ಸುಲಲಿತವಾಗಿ ಈಡೇರುತ್ತವೆ. ಪರಸ್ಪರ ಪ್ರೀತಿ–ವಿಶ್ವಾಸದೊಂದಿಗೆ ಮನುಷ್ಯತ್ವದಿಂದ ಸಾರ್ಥಕ ಜೀವನ ನಡೆಸಿದಾಗ ಮೋಕ್ಷ ಸಾಧನೆ ಸಾಧ್ಯವಾಗುತ್ತದೆ.

ಧರ್ಮಸ್ಥಳಕ್ಕೆ ಸಂಬಂಧಿಸಿದಂತೆ ಮಾತು ಬಿಡ ಮಂಜುನಾಥ ಎಂಬ ಮಾತು ಚಿರಪರಿಚಿತವಾಗಿದೆ ಎಂದು ಅವರು ವಿಶೇಷವಾಗಿ ಉಲ್ಲೇಖಿಸಿದರು. ಪರಿಶುದ್ಧ ಮನಸ್ಸಿನಿಂದ ಪುಣ್ಯಕ್ಷೇತ್ರಗಳ ದರ್ಶನ ಮಾಡಿದಾಗ ನಮಗೆ ದೇವರ ವಿಶೇಷ



ಅನುಗ್ರಹ ಪ್ರಾಪ್ತಿಯಾಗುತ್ತದೆ.

ಧರ್ಮಸ್ಥಳದಲ್ಲಿ ನಿತ್ಯವೂ ನಡೆಯುತ್ತಿರುವ ಅನ್ನದಾನ, ವಿದ್ಯಾದಾನ, ಔಷಧಿದಾನ ಮತ್ತು ಅಭಯದಾನ ಎಂಬ ಚತುರ್ದಾನಗಳು ದೇಶದ ಇತಿಹಾಸದಲ್ಲೇ ಸುವರ್ಣಾಕ್ಷರಗಳಿಂದ ಬರೆಯಬೇಕಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ಟೀಕೆ ಮಾಡುವುದು ಸುಲಭ. ಹೆಗ್ಗಡೆಯವರು ಜೈನರು, ದೇವಸ್ಥಾನ ಹಿಂದೂ ದೇವಸ್ಥಾನ ಎಂದು ಟೀಕಿಸುವವರನ್ನು ಖಂಡಿಸಿದ ಡಿ.ಕೆ.ಶಿ. ಹೆಗ್ಗಡೆಯವರು ಇದಕ್ಕೆ ಅಂಜಬೇಕಾಗಿಲ್ಲ, ಅಳುಕಬೇಕಾಗಿಲ್ಲ. ನಿಮ್ಮ ಜೊತೆ ನಾವಿದ್ದೇವೆ. ತಮ್ಮ ಹಾಗೂ ಕ್ಷೇತ್ರ ರಕ್ಷಣೆಗೆ ನಾವೆಲ್ಲ ಸಿದ್ಧರು, ಬದ್ಧರು ಎಂದು ತಿಳಿಸಿದರು. ಟೀಕೆಗಳು ತಾತ್ಕಾಲಿಕವಾಗಿದ್ದು ಅಲ್ಪಕಾಲದಲ್ಲಿ ಸಾಯುತ್ತವೆ. ನಾವು ಮಾಡುವ ಸೇವಾಕಾರ್ಯಗಳು ಶಾಶ್ವತವಾಗಿರುತ್ತವೆ ಎಂದು ಅವರು ಅಭಿಪ್ರಾಯಪಟ್ಟರು.

ಅಧ್ಯಕ್ಷತೆ ವಹಿಸಿದ ಧರ್ಮಾಧಿಕಾರಿ ಡಿ. ವೀರೇಂದ್ರ ಹೆಗ್ಗಡೆಯವರು ಮಾತನಾಡಿ, ಬದುಕಿನ ನಾಲ್ಕು ಹಂತಗಳಲ್ಲಿ ಮದುವೆಯೊಂದಿಗೆ ಗೃಹಸ್ಥಾಶ್ರಮ ಸೇರುವುದು ಅತ್ಯಂತ ಪವಿತ್ರ ಕಾರ್ಯ ಹಾಗೂ ಜೀವನದ ಮುಖ್ಯ ಹಂತವಾಗಿದೆ ಎಂದು ಹೇಳಿದರು.

ಗೃಹಸ್ಥ ಜೀವನ ಅಮೂಲ್ಯವಾಗಿದ್ದು, ದಂಪತಿ ಪರಸ್ಪರ ಪ್ರೀತಿ–ವಿಶ್ವಾಸದಿಂದ ಸಾರ್ಥಕ ಜೀವನ ನಡೆಸಬೇಕು. ಧರ್ಮಸ್ಥಳದಲ್ಲಿ ಮದುವೆ ಆದರೆ ತಮ್ಮ ಬದುಕು ಸಾರ್ಥಕ ಹಾಗೂ ಸುಖಮಯವಾಗುತ್ತದೆ ಎಂದು ಭಕ್ತರಲ್ಲಿ ನಂಬಿಕೆ ಹಾಗೂ ವಿಶ್ವಾಸವಿದೆ. ಭಕ್ತರ ಅನುಕೂಲಕ್ಕಾಗಿ ಧರ್ಮಸ್ಥಳದಲ್ಲಿ ಮೂರು ಕಲ್ಯಾಣ ಮಂಟಪಗಳನ್ನು ನಿರ್ಮಿಸಲಾಗಿದೆ. ಅಲ್ಲದೆ ಬೆಳ್ತಂಗಡಿ, ಭದ್ರಾವತಿ, ಬೆಂಗಳೂರು, ಬಂಟ್ವಾಳ, ಮೈಸೂರು ಮೊದಲಾದ ಕಡೆಗಳಲ್ಲಿ ಕೂಡಾ ಧರ್ಮಸ್ಥಳದ ವತಿಯಿಂದ ಕಲ್ಯಾಣಮಂಟಪಗಳನ್ನು ನಿರ್ಮಿಸಲಾಗಿದೆ ಎಂದು ಹೇಳಿದರು.

ಕೆರೆಗಳಿಗೆ ಕಾಯಕಲ್ಪ, ಶುದ್ಧ ಕುಡಿಯುವ ನೀರು ಪೂರೈಕೆ, ಸ್ವ–ಸಹಾಯ ಸಂಘಗಳು, ಸಾಮೂಹಿಕ ವಿವಾಹ ಮೊದಲಾದ ಧರ್ಮಸ್ಥಳದ ಸೇವಾಕಾರ್ಯಗಳನ್ನು ಸರ್ಕಾರ ಕೂಡಾ ಮಾದರಿಯಾಗಿ ಸ್ವೀಕರಿಸಿ ಅನುಷ್ಠಾನಗೊಳಿಸಿರುವುದು ತಮಗೆ ಹೆಚ್ಚಿನ ಸಂತೋಷವನ್ನುಂಟು ಮಾಡಿದೆ ಎಂದು ಹೆಗ್ಗಡೆಯವರು ಹೇಳಿದರು. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಹೆಗ್ಗಡೆಯವರು ಕ್ಷೇತ್ರದ ವತಿಯಿಂದ ಗೌರವಿಸಿ ಶುಭ ಹಾರೈಸಿದರು.

ಶಾಸಕ ಹರೀಶ್ ಪೂಂಜ, ವಿಧಾನಪರಿಷತ್ ಸದಸ್ಯ ಕೆ. ಪ್ರತಾಪಸಿಂಹ ನಾಯಕ್, ಮಾಜಿ ವಿಧಾನಪರಿಷತ್ ಸದಸ್ಯ ಕೆ. ಹರೀಶ್ ಕುಮಾರ್, ಮಾಜಿ ಸಚಿವ ಕೆ. ಅಭಯಚಂದ್ರ ಜೈನ್, ಕೆ.ಪಿ.ಸಿ.ಸಿ ಪ್ರಧಾನ ಕಾರ್ಯದರ್ಶಿ ರಕ್ಷಿತ್‌ಶಿವರಾಂ ಉಪಸ್ಥಿತರಿದ್ದರು.

ಕಲ್ಯಾಣ ಮಂಟಪದ ಎಂಜಿನಿಯರ್ ಮಂಜುಕೀರ್ತನ್, ಕಾಮಗಾರಿ ವ್ಯವಸ್ಥಾಪಕ ಯಶೋಧರ ಮತ್ತು ಕಟ್ಟಡ ಮೇಲ್ವಿಚಾರಕ ನಿಖಿಲ್ ಅವರನ್ನು ಗೌರವಿಸಲಾಯಿತು.

ಹೇಮಾವತಿ ವೀ. ಹೆಗ್ಗಡೆ, ಶ್ರದ್ಧಾ ಅಮಿತ್, ಡಿ. ಸುರೇಂದ್ರ ಕುಮಾರ್, ಅನಿತಾ ಸುರೇಂದ್ರ ಕುಮಾರ್, ಡಿ. ಶ್ರೇಯಸ್ ಕುಮಾರ್, ಡಿ. ನಿಶ್ಚಲ್ ಕುಮಾರ್ ಇದ್ದರು.

ಎಸ್.ಡಿ.ಎಂ. ಶಿಕ್ಷಣ ಸಂಸ್ಥೆಗಳ ಕಾರ್ಯದರ್ಶಿ ಡಿ. ಹರ್ಷೇಂದ್ರ ಕುಮಾರ್ ಸ್ವಾಗತಿಸಿದರು. ಎಂಜಿನಿಯರ್ ಯಶೋಧರ ಧನ್ಯವಾದವಿತ್ತರು. ಸುಬ್ರಹ್ಮಣ್ಯ ಪ್ರಸಾದ್ ಕಾರ್ಯಕ್ರಮ ನಿರ್ವಹಿಸಿದರು.